ತೀವ್ರ ವಿವಾದ ವಾದ ನಂತರ ಶಿವಾಜಿ ಸಿನಿಮಾ ಕುರಿತಾಗಿ ರಿಷಬ್ ಶೆಟ್ಟಿ ಎಲ್ಲಿಯೂ ಮಾತಾಡಿರಲಿಲ್ಲ. ಹಾಗಾಗಿ ಶಿವಾಜಿ ಸಿನಿಮಾವನ್ನು ರಿಷಬ್ ಕೈ ಬಿಟ್ಟಿದ್ದಾರೆ ಅನ್ನುವ ಮಾತು ಕೇಳಿ ಬಂತು. ಇದೀಗ ಮತ್ತೆ ರಿಷಬ್ ಶೆಟ್ಟಿ ಅವರು ಶಿವಾಜಿ ಸಿನಿಮಾ ಕುರಿತಾಗಿ ಮಾತಾಡಿದ್ದಾರೆ. 'ಜೈ ಹನುಮಾನ್' ಸಿನಿಮಾದ ನಂತರ ಶಿವಾಜಿ ಸಿನಿಮಾದ ಶೂಟಿಂಗ್ ನಲ್ಲಿ ತೊಡಗಿಕೊಳ್ಳುವುದಾಗಿ ಅವರು ಹೇಳಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## 'ಎ' ಖಾತಾ ಬದಲಾವಣೆ ಮಾಡುವವರಿಗೆ ಗುಡ್‌ನ್ಯೂಸ್

ಬೆಂಗಳೂರು: ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಮಾಡಿಸಿಕೊಳ್ಳಲು ಬಯಸುತ್ತಿರುವ ಸಾವಿರಾರು ಆಸ್ತಿ ಮಾಲೀಕರಿಗೆ ರಾಜ್ಯ ಸರ್ಕಾರ ಮಹತ್ವದ ಸಡಿಲಿಕೆ ನೀಡಿದೆ. ಎ ಖಾತೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಸೈಟ್ ಸ್ಕೆಚ್ ಸಲ್ಲಿಸಬೇಕೆಂಬ ನಿಯಮದಲ್ಲಿ ಬದಲಾವಣೆ ಮಾಡಲಾಗಿದ್ದು, ಇನ್ನು ಮುಂದೆ ಸೈಟ್ ಸ್ಕೆಚ್ ಇಲ್ಲದಿದ್ದರೂ ಅಗತ್ಯ ದಾಖಲೆಗಳೊಂದಿಗೆ ಎ ಖಾತೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಕಂದಾಯ ವಿಭಾಗದ ವಿಶೇಷ ಆಯುಕ್ತ ಮನೀಷ್ ಮೌದ್ಗಿಲ್ ಈ ಕುರಿತು ಆದೇಶ ಹೊರಡಿಸಿದ್ದು, ಎ ಖಾತೆ ಅರ್ಜಿ ಪ್ರಕ್ರಿಯೆಯನ್ನು ಮತ್ತಷ್ಟು ಸರಳ ಹಾಗೂ ಜನಸ್ನೇಹಿಯಾಗಿ ರೂಪಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಇದುವರೆಗೆ ಎ ಖಾತೆಗೆ ಅರ್ಜಿ ಸಲ್ಲಿಸುವ ವೇಳೆ ಸೈಟ್ ಸ್ಕೆಚ್ ಕಡ್ಡಾಯವಾಗಿದ್ದ ಕಾರಣ ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದರು. ಕೆಲವೆಡೆ ಸ್ಕೆಚ್ ಸಿದ್ಧಪಡಿಸುವ ಹೆಸರಿನಲ್ಲಿ ಅನಗತ್ಯ ಹಣ ವಸೂಲಿ ಮಾಡುತ್ತಿರುವ ಬಗ್ಗೆ ದೂರುಗಳು ಸಹ ಬಂದಿದ್ದವು. ಈ ಹಿನ್ನೆಲೆಯಲ್ಲಿ ಅರ್ಜಿದಾರರಿಗೆ ಅನಗತ್ಯ ಆರ್ಥಿಕ ಹೊರೆ ತಪ್ಪಿಸುವ ಉದ್ದೇಶದಿಂದ ಸರ್ಕಾರ ನಿಯಮಗಳಲ್ಲಿ ಸಡಿಲಿಕೆ ತಂದಿದೆ.

ಹೊಸ ಆದೇಶದ ಪ್ರಕಾರ, ಜಿಬಿಎಯಲ್ಲಿ ನೋಂದಾಯಿತ ವಾಸ್ತುಶಿಲ್ಪಿಯಿಂದಲೇ ಸೈಟ್ ಸ್ಕೆಚ್ ಪಡೆಯಬೇಕೆಂಬ ಕಡ್ಡಾಯ ಇರುವುದಿಲ್ಲ. ನಿಗದಿತ ನಮೂನೆಯಲ್ಲಿ ಯಾವುದೇ ಅರ್ಹ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿ




ಸಿದ್ಧಪಡಿಸಿದ ಸ್ಕೆಚ್ ಅನ್ನು ಸಲ್ಲಿಸಬಹುದು. ಒಂದು ವೇಳೆ ಸ್ಕೆಚ್‌ನಲ್ಲಿ ಸಣ್ಣಪುಟ್ಟ ತಾಂತ್ರಿಕ ಲೋಪಗಳಿದ್ದರೂ ಆಸ್ತಿಯ ವಿವರಗಳು, ದಾಖಲೆಗಳು ಹಾಗೂ ಗಡಿ ವಿವರಗಳು ಸ್ಪಷ್ಟವಾಗಿದ್ದರೆ ಅರ್ಜಿಯನ್ನು ತಿರಸ್ಕರಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಅರ್ಜಿದಾರರು ಸೈಟ್ ಸ್ಕೆಚ್ ಹೆಸರಿನಲ್ಲಿ ಮಧ್ಯವರ್ತಿಗಳಿಗೆ ಅಥವಾ ಖಾಸಗಿ ವ್ಯಕ್ತಿಗಳಿಗೆ ಹೆಚ್ಚುವರಿ ಹಣ ಪಾವತಿಸುವ ಅಗತ್ಯವಿಲ್ಲ. ಅಗತ್ಯ ದಾಖಲೆಗಳನ್ನು ಸರಿಯಾಗಿ ಸಲ್ಲಿಸಿದರೆ ಅರ್ಜಿಯನ್ನು ಪರಿಗಣಿಸಿ ಎ ಖಾತೆ ಪರಿವರ್ತನೆ ಪ್ರಕ್ರಿಯೆ ಮುಂದುವರಿಸಲಾಗುತ್ತದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಜಿಬಿಎ ವಿಶೇಷ ಆಯುಕ್ತ ಮನೀಷ್ ಮೌದ್ಗಿಲ್ ಮಾತನಾಡಿ, ಸೈಟ್ ಸ್ಕೆಚ್ ಪಡೆಯುವ ಪ್ರಕ್ರಿಯೆಯಲ್ಲಿ ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಹಲವು ದೂರುಗಳು ಬಂದಿದ್ದವು. ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದಲೇ ಈ ಆದೇಶ ಹೊರಡಿಸಲಾಗಿದೆ. ಅರ್ಜಿದಾರರು ಪಾರದರ್ಶಕವಾಗಿ ದಾಖಲೆಗಳನ್ನು ಸಲ್ಲಿಸಿದರೆ ಯಾವುದೇ ಅನಗತ್ಯ ವಿಳಂಬವಾಗುವುದಿಲ್ಲ ಎಂದು ಹೇಳಿದರು.

ಬೆಂಗಳೂರು ನಗರದಲ್ಲಿ ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆಗಾಗಿ ಸಾವಿರಾರು ಅರ್ಜಿಗಳು ಬಾಕಿ ಇರುವ ಹಿನ್ನೆಲೆಯಲ್ಲಿ ಸರ್ಕಾರದ ಈ ನಿರ್ಧಾರ ಮಹತ್ವ ಪಡೆದಿದೆ. ಹೊಸ ಆದೇಶದಿಂದ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಸುಲಭವಾಗಲಿದ್ದು, ಸಾರ್ವಜನಿಕರ ಸಮಯ ಹಾಗೂ ವೆಚ್ಚ ಎರಡೂ ಕಡಿಮೆಯಾಗುವ ನಿರೀಕ್ಷೆಯಿದೆ.

ಜೊತೆಗೆ ಎ ಖಾತೆ ಪರಿವರ್ತನೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹೆಚ್ಚುವುದರೊಂದಿಗೆ ಮಧ್ಯವರ್ತಿಗಳ ಹಾವಳಿಗೂ ಕಡಿವಾಣ ಬೀಳುವ ಸಾಧ್ಯತೆ ಇದೆ.

> ಹೊಸ ಆದೇಶದ ಪ್ರಕಾರ, ಜಿಬಿಎಯಲ್ಲಿ ನೋಂದಾಯಿತ ವಾಸ್ತುಶಿಲ್ಪಿಯಿಂದಲೇ ಸೈಟ್ ಸ್ಕೆಚ್ ಪಡೆಯಬೇಕೆಂಬ ಕಡ್ಡಾಯ ಇರುವುದಿಲ್ಲ. ನಿಗದಿತ ನಮೂನೆಯಲ್ಲಿ ಯಾವುದೇ ಅರ್ಹ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿ ಸಿದ್ಧಪಡಿಸಿದ ಸ್ಕೆಚ್ ಅನ್ನು ಸಲ್ಲಿಸಬಹುದು. ಒಂದು ವೇಳೆ ಸ್ಕೆಚ್‌ನಲ್ಲಿ ಸಣ್ಣಪುಟ್ಟ ತಾಂತ್ರಿಕ ಲೋಪಗಳಿದ್ದರೂ ಆಸ್ತಿಯ ವಿವರಗಳು, ದಾಖಲೆಗಳು ಹಾಗೂ ಗಡಿ ವಿವರಗಳು ಸ್ಪಷ್ಟವಾಗಿದ್ದರೆ ಅರ್ಜಿಯನ್ನು ತಿರಸ್ಕರಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ಅಪಘಾತ: ತಪ್ಪಿದ ಭಾರೀ ಅನಾಹುತ

ದೊಡ್ಡಬಳ್ಳಾಪುರ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ 11ನೇ ಮೈಲಿ ಸಮೀಪ ಅತಿ ವೇಗವಾಗಿ ಚಲಿಸುತ್ತಿದ್ದ ಪೆಟ್ರೋಲ್ ಟ್ಯಾಂಕರ್ ಲಾರಿಯೊಂದು ನಿಯಂತ್ರಣ ತಪ್ಪಿ ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಭೀಕರ ಅಗ್ನಿ ಅವಘಡ ಸಂಭವಿಸಿದೆ. ಕ್ಷಣಾರ್ಧದಲ್ಲೇ ಟ್ಯಾಂಕರ್ ಬೆಂಕಿಗಾಹುತಿಯಾಗಿದ್ದು, ಸಮೀಪದಲ್ಲಿದ್ದ ಹಾಲಿನ ಟ್ಯಾಂಕರ್‌ಗೂ ಬೆಂಕಿ ವ್ಯಾಪಿಸಿದ ಘಟನೆ ಕೆಲಕಾಲ ಆತಂಕದ ವಾತಾವರಣ ನಿರ್ಮಿಸಿತು.

ಪ್ರಾಥಮಿಕ ಮಾಹಿತಿಯಂತೆ, ಅತಿವೇಗದ ಚಾಲನೆಯೇ ಅಪಘಾತಕ್ಕೆ ಪ್ರಮುಖ ಕಾರಣ ಎನ್ನಲಾಗಿದೆ. ಮರಕ್ಕೆ ಡಿಕ್ಕಿ ಹೊಡೆದ ತಕ್ಷಣ ಪೆಟ್ರೋಲ್ ಸಾಗಿಸುತ್ತಿದ್ದ ಟ್ಯಾಂಕರ್‌ನಲ್ಲಿ ಭಾರೀ ಸ್ಫೋಟದೊಂದಿಗೆ ಬೆಂಕಿ ಕಾಣಿಸಿಕೊಂಡಿದ್ದು, ಕೆಲವೇ ಕ್ಷಣಗಳಲ್ಲಿ ಅಗ್ನಿಜ್ವಾಲೆ ಇಡೀ ವಾಹನವನ್ನು ಆವರಿಸಿತು. ಇದೇ ವೇಳೆ ಸಮೀಪದಲ್ಲಿ ರಿವರ್ಸ್ ತೆಗೆದುಕೊಳ್ಳುತ್ತಿದ್ದ ಹಾಲಿನ ಟ್ಯಾಂಕರ್‌ಗೂ ಬೆಂಕಿ ತಗುಲಿದ್ದು, ಎರಡೂ ವಾಹನಗಳು ಹೊತ್ತಿ ಉರಿದವು.

ಅಪಘಾತ ಸಂಭವಿಸುತ್ತಿದ್ದಂತೆ ಎರಡೂ ವಾಹನಗಳ ಚಾಲಕರು ಸಮಯಪ್ರಜ್ಞೆ ಮೆರೆದು ಲಾರಿಯಿಂದ ಹೊರಗೆ ಜಿಗಿದ ಪರಿಣಾಮ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸ್ಥಳೀಯರು ತಕ್ಷಣವೇ ಅಗ್ನಿಶಾಮಕ ದಳ ಹಾಗೂ ಪೊಲೀಸರಿಗೆ ಮಾಹಿತಿ ನೀಡಿದರು. ಕೂಡಲೇ ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಹಲವು ಗಂಟೆಗಳ ಕಾಲ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು. ಬೆಂಕಿಯ ತೀವ್ರತೆಯಿಂದ ಕೆಲಕಾಲ ಆ ಪ್ರದೇಶದಲ್ಲಿ ವಾಹನ ಸಂಚಾರ ಸ್ಥಗಿತಗೊಂಡಿದ್ದು, ಸುರಕ್ಷತಾ ಕ್ರಮವಾಗಿ ಪೊಲೀಸರು ರಸ್ತೆ ಸಂಚಾರವನ್ನು ಬೇರೆ ಮಾರ್ಗಕ್ಕೆ ತಿರುಗಿಸಿದರು.

ಅಗ್ನಿ ಅವಘಡದ ತೀವ್ರತೆಗೆ ಪೆಟ್ರೋಲ್ ಟ್ಯಾಂಕರ್ ಹಾಗೂ ಹಾಲಿನ ಟ್ಯಾಂಕರ್ ಎರಡೂ ಬಹುತೇಕ ಸಂಪೂರ್ಣ ಸುಟ್ಟು ಕರಕಲಾಗಿವೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಸುತ್ತಮುತ್ತಲಿನ ಪ್ರದೇಶಗಳಿಗೆ ಬೆಂಕಿ ವ್ಯಾಪಿಸದಂತೆ ಅಗ್ನಿಶಾಮಕ ಸಿಬ್ಬಂದಿ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದು, ದೊಡ್ಡ ಅನಾಹುತವೊಂದು ತಪ್ಪಿದಂತಾಗಿದೆ.

## ಇರಾನ್ ಮೇಲೆ ಮತ್ತೆ ದಾಳಿ...!: ತೀವ್ರ ಖಂಡನೆ

ನವದೆಹಲಿ: ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷ ಮತ್ತೆ ತೀವ್ರಗೊಂಡಿದ್ದು, ಜೂನ್ 17ರಂದು ಮಾಡಿಕೊಳ್ಳಲಾಗಿದ್ದ ತಾತ್ಕಾಲಿಕ ಕದನ ವಿರಾಮ ಸಂಪೂರ್ಣವಾಗಿ ಮುರಿದುಬಿದ್ದಿದೆ. ಎರಡೂ ರಾಷ್ಟ್ರಗಳು ಪರಸ್ಪರ ದಾಳಿ ನಡೆಸಿರುವುದರಿಂದ ಮಧ್ಯಪ್ರಾಚ್ಯದಲ್ಲಿ ಮತ್ತೆ ಯುದ್ಧದ ಕಾರ್ಮೋಡ ಕವಿದಿದೆ.

ಅಮೆರಿಕ ಇರಾನ್‌ನ ಹಲವು ಸೇನಾ ನೆಲೆಗಳು ಮತ್ತು ಪ್ರಮುಖ ಮೂಲಸೌಕರ್ಯಗಳ ಮೇಲೆ ಭಾರೀ ವೈಮಾನಿಕ ದಾಳಿ ನಡೆಸಿದೆ. ಇದಕ್ಕೆ ಪ್ರತಿಯಾಗಿ ಇರಾನ್ ಬಹ್ರೇನ್, ಕುವೈತ್ ಹಾಗೂ ಕತಾರ್‌ನಲ್ಲಿರುವ ಗುರಿಗಳತ್ತ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಉಡಾಯಿಸಿದೆ. ಈ ಬೆಳವಣಿಗೆಯಿಂದ ಇಡೀ ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ.

ದಾಳಿಗೆ ಕೆಲವೇ ಗಂಟೆಗಳ ಮೊದಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಹಾರ್ಮುಜ್ ಜಲಸಂಧಿಯಲ್ಲಿ ವ್ಯಾಪಾರ ಹಡಗುಗಳ ಮೇಲೆ ಇರಾನ್ ನಡೆಸಿದ ದಾಳಿಯಿಂದ ಕದನ ವಿರಾಮ ಒಪ್ಪಂದ ಅಂತ್ಯಗೊಂಡಿದೆ ಎಂದು ಘೋಷಿಸಿದ್ದರು. ಸಮುದ್ರ ಮಾರ್ಗಗಳ ಸುರಕ್ಷತೆಯನ್ನು ಕಾಪಾಡುವ ಉದ್ದೇಶದಿಂದ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಅಮೆರಿಕ ಸೇನೆ ತಿಳಿಸಿದೆ.

ಹಾರ್ಮುಜ್ ಜಲಸಂಧಿಯಲ್ಲಿ ನೌಕಾಯಾನಕ್ಕೆ ಇರಾನ್ ಒಡ್ಡುತ್ತಿರುವ ಬೆದರಿಕೆಯನ್ನು ತಗ್ಗಿಸುವ ಉದ್ದೇಶದಿಂದ ದಾಳಿ ನಡೆಸಲಾಗಿದೆ ಎಂದು ಅಮೆರಿಕ ಹೇಳಿದೆ. ವಿಶ್ವದ ಒಟ್ಟು ತೈಲ ಮತ್ತು ನೈಸರ್ಗಿಕ ಅನಿಲ ಸಾಗಣೆಯ ಸುಮಾರು 20 ಪ್ರತಿಶತ ಇದೇ ಜಲಸಂಧಿಯ ಮೂಲಕ ನಡೆಯುವುದರಿಂದ, ಈ ಪ್ರದೇಶದಲ್ಲಿನ ಯಾವುದೇ ಸಂಘರ್ಷ ಜಾಗತಿಕ ಇಂಧನ ಮಾರುಕಟ್ಟೆಯ ಮೇಲೆ ನೇರ ಪರಿಣಾಮ ಬೀರುವ ಸಾಧ್ಯತೆ ಇದೆ.

ಇರಾನ್ ಸರ್ಕಾರಿ ಮಾಧ್ಯಮಗಳ ಪ್ರಕಾರ, ಬುಶೆಹರ್, ಚಬಹಾರ್, ಕೊನಾರಕ್, ಬಂದರ್ ಅಬ್ಬಾಸ್ ಹಾಗೂ ಸಿರಿಕ್ ಸೇರಿದಂತೆ ಹಲವು ಪ್ರಮುಖ ಪ್ರದೇಶಗಳಲ್ಲಿ ಭಾರೀ ಸ್ಫೋಟಗಳು ಸಂಭವಿಸಿವೆ. ಪರಮಾಣು ವಿದ್ಯುತ್ ಸ್ಥಾವರ ಹೊಂದಿರುವ ಬುಶೆಹರ್ ನಗರದಲ್ಲಿಯೂ ಸ್ಫೋಟದ ಶಬ್ದ ಕೇಳಿಬಂದಿದೆ. ಆದರೆ ದಾಳಿಯಿಂದ ಉಂಟಾದ ಹಾನಿಯ ಸಂಪೂರ್ಣ ವಿವರ ಇನ್ನೂ ಬಹಿರಂಗವಾಗಿಲ್ಲ.

ಇರಾನ್ ಉಡಾಯಿಸಿದ ಕ್ಷಿಪಣಿಗಳು ಮತ್ತು ಡ್ರೋನ್‌ಗಳ ಪರಿಣಾಮದ ಕುರಿತು ಬಹ್ರೇನ್, ಕುವೈತ್ ಹಾಗೂ ಕತಾರ್‌ನಿಂದ ಸಂಪೂರ್ಣ ಮಾಹಿತಿ ಲಭ್ಯವಾಗಿಲ್ಲ. ಕುವೈತ್ ಸೇನೆ ಮಾತ್ರ ತನ್ನ ವಾಯು ರಕ್ಷಣಾ ವ್ಯವಸ್ಥೆಯನ್ನು ಸಕ್ರಿಯಗೊಳಿಸಿ ಹಲವು ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಮಧ್ಯದಲ್ಲೇ ಹೊಡೆದುರುಳಿಸಲಾಗಿದೆ ಎಂದು ತಿಳಿಸಿದೆ.

ಈ ನಡುವೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್‌ನಲ್ಲಿ ನಡೆದ ಸ್ಫೋಟಗಳ ವಿಡಿಯೊಗಳನ್ನು ಹಂಚಿಕೊಂಡು, ಇರಾನ್‌ನ ದಾಳಿಗೆ ಇದು ಪ್ರತೀಕಾರವಾಗಿದ್ದು, ಮತ್ತೊಮ್ಮೆ ಇಂತಹ ದಾಳಿ ನಡೆದರೆ ಇನ್ನಷ್ಟು ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಅಗತ್ಯವಿದ್ದರೆ ಇರಾನ್‌ನ ವಿದ್ಯುತ್ ಸ್ಥಾವರಗಳು, ಸಮುದ್ರದ ನೀರನ್ನು ಕುಡಿಯುವ ನೀರನ್ನಾಗಿ ಪರಿವರ್ತಿಸುವ ಘಟಕಗಳು ಹಾಗೂ ಪ್ರಮುಖ ತೈಲ ರಫ್ತು ಕೇಂದ್ರಗಳ ಮೇಲೂ ದಾಳಿ ನಡೆಸುವ ಸಾಧ್ಯತೆಯನ್ನು ಅವರು ಸೂಚಿಸಿದ್ದಾರೆ.

ಹಾರ್ಮುಜ್ ಜಲಸಂಧಿಯಲ್ಲಿ ವ್ಯಾಪಾರ ಹಡಗುಗಳ ಮೇಲಿನ ದಾಳಿಯ ಬಳಿಕ ಆರಂಭವಾದ ಈ ಸಂಘರ್ಷ ಇದೀಗ ಎರಡೂ ರಾಷ್ಟ್ರಗಳ ನೇರ ಮಿಲಿಟರಿ ದಾಳಿಗಳ ಹಂತ ತಲುಪಿದ್ದು, ಮಧ್ಯಪ್ರಾಚ್ಯದ ಭದ್ರತೆ ಹಾಗೂ ಜಾಗತಿಕ ಇಂಧನ ಪೂರೈಕೆಯ ಬಗ್ಗೆ ಆತಂಕ ಮತ್ತಷ್ಟು ಹೆಚ್ಚಿಸಿದೆ.




ಬೆಳಗಾವಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಗಾಂಧಿ ಪ್ರತಿಮೆಗೆ ಸಿಎಂ ಡಿ ಕೆ ಶಿವಕುಮಾರ್ ಅವರು ಗುರುವಾರ ಪುಷ್ಪನಮನ ಸಲ್ಲಿಸಿದರು. ಡಿಸಿಎಂ ಪರಮೇಶ್ವರ, ಸಚಿವರಾದ ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ಯು ಟಿ ಖಾದರ್, ಮಾಜಿ ಸಚಿವ ಎಚ್ ಕೆ ಪಾಟೀಲ್, ಮಾಜಿ ಡಿಸಿಎಂ ಲಕ್ಷ್ಮಣ್ ಸವದಿ, ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತಿತರರು ಉಪಸ್ಥಿತರಿದ್ದರು.

## ಡಿಕೆಶಿಗೆ ಅದ್ದೂರಿ ಸ್ವಾಗತ

ಬೆಳಗಾವಿ: ಮುಖ್ಯಮಂತ್ರಿ ಸ್ಥಾನ ವಹಿಸಿಕೊಂಡ ಬಳಿಕ ಮೊದಲ ಬಾರಿಗೆ ಬೆಳಗಾವಿಗೆ ಆಗಮಿಸುತ್ತಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಅದ್ದೂರಿಯಾಗಿ ಸ್ವಾಗತಿಸಲು ಕಾಂಗ್ರೆಸ್ ಕಾರ್ಯಕರ್ತರು ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಭರ್ಜರಿ ಸಿದ್ಧತೆ ನಡೆಸಿದ್ದಾರೆ. ವಿಮಾನ ನಿಲ್ದಾಣದ ಮುಂಭಾಗದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಭಾವಚಿತ್ರಗಳನ್ನು ಹಿಡಿದು ಸಾವಿರಾರು ಕಾರ್ಯಕರ್ತರು ಸೇರಿದ್ದು, ಜೆಸಿಬಿ ಮೂಲಕ ಪುಷ್ಪವೃಷ್ಟಿ ಮಾಡುವ ವ್ಯವಸ್ಥೆಯನ್ನೂ ಮಾಡಲಾಗಿದೆ. ಜಿಲ್ಲೆಯ ಶಾಸಕರು ಹಾಗೂ ಕಾಂಗ್ರೆಸ್ ಮುಖಂಡರು ಸ್ಥಳದಲ್ಲೇ ಹಾಜರಿದ್ದು, ಮುಖ್ಯಮಂತ್ರಿ ಅವರನ್ನು ಸ್ವಾಗತಿಸಲು ಕಾತರದಿಂದ ಕಾಯುತ್ತಿದ್ದಾರೆ.

ಈ ವೇಳೆ ಮಾತನಾಡಿದ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಬೆಳಗಾವಿ ಜಿಲ್ಲೆ ವಿಭಜನೆಯ ವಿಚಾರ ಸದ್ಯ ಅಪ್ರಸ್ತುತವಾಗಿದ್ದು, ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಅವರೊಂದಿಗೆ ಈ ಕುರಿತು ಚರ್ಚಿಸಲಾಗುವುದು ಎಂದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮೇಲೆ ರಾಜ್ಯದ ಜನರು ಹಾಗೂ ಬೆಳಗಾವಿ ಜಿಲ್ಲೆಯ ಜನತೆ ಅಪಾರ ನಿರೀಕ್ಷೆ ಇಟ್ಟಿದ್ದು, ಅವರು ಆ ನಿರೀಕ್ಷೆಗಳನ್ನು ಖಂಡಿತ ಈಡೇರಿಸಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

> ಗೃಹಲಕ್ಷ್ಮಿ ಯೋಜನೆ ಕುರಿತು ಬಿಜೆಪಿ ಮಾಡಿದ್ದ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಕೇಂದ್ರದ ಆಯೋಗವೇ ಈ ಯೋಜನೆಯನ್ನು ಮೆಚ್ಚಿ ವರದಿ ನೀಡಿದೆ. ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಗೃಹಲಕ್ಷ್ಮಿ ಯೋಜನೆ ಮಹತ್ವದ ಕೊಡುಗೆ ನೀಡಿದ್ದು, ಕರ್ನಾಟಕದ ಈ ಮಾದರಿಯನ್ನು ಇತರೆ ರಾಜ್ಯಗಳೂ ಅನುಸರಿಸುತ್ತಿವೆ

ಗೃಹಲಕ್ಷ್ಮಿ ಯೋಜನೆ ಕುರಿತು ಬಿಜೆಪಿ ಮಾಡಿದ್ದ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಕೇಂದ್ರದ ಆಯೋಗವೇ ಈ ಯೋಜನೆಯನ್ನು ಮೆಚ್ಚಿ ವರದಿ ನೀಡಿದೆ. ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಗೃಹಲಕ್ಷ್ಮಿ ಯೋಜನೆ ಮಹತ್ವದ ಕೊಡುಗೆ ನೀಡಿದ್ದು, ಕರ್ನಾಟಕದ ಈ ಮಾದರಿಯನ್ನು ಇತರೆ ರಾಜ್ಯಗಳೂ ಅನುಸರಿಸುತ್ತಿವೆ ಎಂದು ಹೇಳಿದರು.

ಸಚಿವ ಸಂಪುಟ ವಿಸ್ತರಣೆ ಕುರಿತು ಪ್ರತಿಕ್ರಿಯಿಸಿದ ಹೆಬ್ಬಾಳ್ಕರ್, ಬೆಳಗಾವಿ ಜಿಲ್ಲೆಯಿಂದ 11 ಮಂದಿ ಕಾಂಗ್ರೆಸ್ ಶಾಸಕರು ಆಯ್ಕೆಯಾಗಿದ್ದು, ಜಿಲ್ಲೆಗೆ ಇನ್ನೂ ಎರಡು ಸಚಿವ ಸ್ಥಾನಗಳು ಸಿಗುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಉತ್ತರ ಕರ್ನಾಟಕ, ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಲಿದೆ. ಬೆಳಗಾವಿ ಎರಡನೇ ರಾಜಧಾನಿಯಾಗಿರುವ ಹಿನ್ನೆಲೆಯಲ್ಲಿ ಕೈಗಾರಿಕೆಗಳು ಹೆಚ್ಚಾಗಿ ಬಂದು ಉದ್ಯೋಗಾವಕಾಶಗಳು ಸೃಷ್ಟಿಯಾಗಬೇಕು ಎಂದು ಅವರು ಹೇಳಿದರು.

ವಿಧಾನಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮೊದಲ ಬೆಳಗಾವಿ ಭೇಟಿ ಜಿಲ್ಲೆಯ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದೆ. ಈ ವೇಳೆ ಜಿಲ್ಲೆಯ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ಘೋಷಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

## 'ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆವಹಿಸಿ'

ಬೆಳಗಾವಿ: ರಾಜ್ಯದಲ್ಲಿ ಮಳೆ ಕೊರತೆಯ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ ರೂ.1 ಕೋಟಿ ಅನುದಾನ ನೀಡಲು ಸರ್ಕಾರ ತೀರ್ಮಾನಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಳಗಾವಿಯ ಸುವರ್ಣಸೌಧದಲ್ಲಿ ಬೆಳಗಾವಿ ವಿಭಾಗದ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ದೇಶದಲ್ಲಿ ಬರಗಾಲದ ಎಚ್ಚರಿಕೆ ನೀಡಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿಯೂ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಕಲಬುರಗಿ ಮತ್ತು ಬೆಳಗಾವಿಯಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗಿದ್ದು, ಶಾಸಕರು ಮತ್ತು ಸಂಸದರಿಂದ ವಿವಿಧ ಸಲಹೆಗಳನ್ನು ಪಡೆಯಲಾಗಿದೆ. ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕೇಂದ್ರ ಸರ್ಕಾರದ ನೆರವಿಗೆ



ಕಾಯದೆ ರಾಜ್ಯ ಸರ್ಕಾರವೇ ಜನರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳುತ್ತಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ನೀರಾವರಿಗೆ ನೀರು ಲಭ್ಯವಾಗದ ಪರಿಸ್ಥಿತಿ ಎದುರಾಗುವ ಸಾಧ್ಯತೆ ಇರುವುದರಿಂದ ಕುಡಿಯುವ ನೀರಿನ ಪೂರೈಕೆಗೆ ಅಗತ್ಯ ಪ್ರಮಾಣದ ನೀರನ್ನು ಅಣೆಕಟ್ಟುಗಳಲ್ಲಿ ಸಂಗ್ರಹಿಸಿಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದರು.

ರಸಗೊಬ್ಬರ ಪೂರೈಕೆ ಕುರಿತು ಶೀಘ್ರದಲ್ಲೇ ಬೆಂಗಳೂರಿನಲ್ಲಿ ಸಭೆ ನಡೆಸಲಾಗುವುದು. ಕೇಂದ್ರ ಸರ್ಕಾರ ಅಗತ್ಯದ ಶೇ.50ರಷ್ಟು ಮಾತ್ರ ಗೊಬ್ಬರ ಪೂರೈಕೆ ಮಾಡಿರುವ ಹಿನ್ನೆಲೆಯಲ್ಲಿ ದಾಸ್ತಾನು ವ್ಯವಸ್ಥೆಯನ್ನು ಬಲಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಕುಡಿಯುವ ನೀರು ಮತ್ತು ನೀರಾವರಿ ಯೋಜನೆಗಳಿಗೆ ಅರಣ್ಯ ಇಲಾಖೆ ಅನುಮತಿ ವಿಳಂಬವಾಗುತ್ತಿರುವ ಕುರಿತು ದೂರುಗಳು ಬಂದಿದ್ದು, 60ಕ್ಕೂ ಹೆಚ್ಚು ಸ್ಥಳಗಳಲ್ಲಿ ಕೊಳವೆ ಮಾರ್ಗ ಅಳವಡಿಕೆಗೆ ತೊಂದರೆಯಾಗಿದೆ. ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಯೋಜನೆಗಳಿಗೆ ಅಡ್ಡಿಯಾಗಬಾರದು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಅರಣ್ಯ ಹಕ್ಕು ಕಾಯ್ದೆಯಡಿ ತಲತಲಾಂತರಗಳಿಂದ ಅರಣ್ಯ ಪ್ರದೇಶದಲ್ಲಿ ವಾಸಿಸುತ್ತಿರುವವರನ್ನು ಒಕ್ಕಲೆಬ್ಬಿಸದೆ, ಕಾನೂನುಬದ್ಧ ಹಕ್ಕುಗಳನ್ನು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಸ್ಪಷ್ಟಪಡಿಸಿದರು.

ರಾಮ ಮಂದಿರ ದೇಣಿಗೆ ದುರುಪಯೋಗ ಪ್ರಕರಣದ ಹಿನ್ನೆಲೆಯಲ್ಲಿ ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಾಲಯಗಳಲ್ಲಿ ಹುಂಡಿಗಳ ಬಳಿ ಕಡ್ಡಾಯವಾಗಿ ಸಿಸಿಟಿವಿ ಅಳವಡಿಸಲು ತೀರ್ಮಾನಿಸಲಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಹುಂಡಿ ತೆರೆಯುವಿಕೆ, ಹಣ ಎಣಿಕೆ ಸೇರಿದಂತೆ ಸಂಪೂರ್ಣ ಪ್ರಕ್ರಿಯೆಯ ದೃಶ್ಯಾವಳಿಗಳು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕಚೇರಿಗಳಿಗೆ ನೇರವಾಗಿ ತಲುಪುವ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳಲ್ಲಿ ಅಕ್ರಮ ತಡೆಗಟ್ಟುವ ಉದ್ದೇಶದಿಂದ ಫಲಾನುಭವಿಗಳ ಮಾಹಿತಿಯನ್ನು ಮರುಪರಿಶೀಲಿಸಲಾಗುತ್ತಿದೆ. ಸತ್ತವರ ಹೆಸರಿನಲ್ಲೂ ಸೌಲಭ್ಯ ಪಡೆದಿರುವ ಪ್ರಕರಣಗಳು ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಆದರೆ ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವುದಿಲ್ಲ. ಅರ್ಹರಿಗೆ ಯೋಜನೆಗಳ ಲಾಭ ಮುಂದುವರಿಯಲಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

ಮೋಡ ಬಿತ್ತನೆ ಕುರಿತು ಹಲವು ಶಾಸಕರು ಸಲಹೆ ನೀಡಿದ್ದು, ಕೆಲವು ಕಡೆ ನಡೆಸಿದ ಪ್ರಯೋಗ ಯಶಸ್ವಿಯಾಗಿದೆ ಎಂಬ ಮಾಹಿತಿ ಬಂದಿದೆ. ಈ ಬಗ್ಗೆ ತಜ್ಞರ ವರದಿ ಪಡೆದು ಬೆಂಗಳೂರಿನಲ್ಲಿ ಸಭೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ತುಂಗಭದ್ರಾ ಜಲಾಶಯದಲ್ಲಿ ಹೂಳು ಸಂಗ್ರಹದಿಂದ 33 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಕುಂಠಿತವಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಕೇಂದ್ರ ಜಲಶಕ್ತಿ ಸಚಿವರ ನೇತೃತ್ವದಲ್ಲಿ ಮಹತ್ವದ ಸಭೆ ನಡೆಸಲಾಗಿದೆ. ಕೇಂದ್ರದ ತಾಂತ್ರಿಕ ಸಮಿತಿ ಅಧ್ಯಯನ ವರದಿ ಸಲ್ಲಿಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ತಿಳಿಸಿದರು. ಆಲಮಟ್ಟಿ ಹಿನ್ನೀರಿನ ಸಂತ್ರಸ್ತರಿಗೆ ಪರಿಹಾರ ವಿತರಣೆಯೂ ಹಂತ ಹಂತವಾಗಿ ನಡೆಯಲಿದ್ದು, ಕಾನೂನು ಚೌಕಟ್ಟಿನೊಳಗೆ ಎಲ್ಲ ಅರ್ಹರಿಗೆ ಪರಿಹಾರ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

2
BHARATHA SARATHI ಭಾರತ ಸಾರಥಿ
BHARATHA SARATHI KANNADA DAILY NEWS PAPER
10/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬೆಂಗಳೂರುನಲ್ಲಿ ಮೊದಲ ಶೈಕ್ಷಣಿಕ ಅಧಿವೇಶನ ಆರಂಭಿಸಿದ ರೆಡ್ ಸ್ಕೂಲ್‌ಹೌಸ್

ಬೆಂಗಳೂರು

ಸಿಂಗಾಪುರ ಮೂಲದ ಪ್ರೀ-ಸ್ಕೂಲ್ ಸಂಸ್ಥೆಯಾದ ರೆಡ್ ಸ್ಕೂಲ್‌ಹೌಸ್ ಭಾರತದಲ್ಲಿ ತನ್ನ 22 ವರ್ಷಗಳ ಅಂತರರಾಷ್ಟ್ರೀಯ ಮಟ್ಟದ ಬಾಲ್ಯ ಶಿಕ್ಷಣದ ಅನುಭವವನ್ನು ಪರಿಚಯಿಸುತ್ತಾ, ಬೆಂಗಳೂರಿನಲ್ಲಿ ತನ್ನ ಮೊದಲ ಶೈಕ್ಷಣಿಕ ಅಧಿವೇಶನವನ್ನು ಆರಂಭಿಸಿ ಮೊದಲ ಬ್ಯಾಚ್‌ನ ಪುಟ್ಟ ವಿದ್ಯಾರ್ಥಿಗಳನ್ನು ಸ್ವಾಗತಿಸಿದೆ.




ಮೇ ತಿಂಗಳಲ್ಲಿ ಭಾರತದಲ್ಲಿನ ತನ್ನ ಮೊದಲ ಕ್ಯಾಂಪಸ್ ಆರಂಭಿಸಿದ ಬಳಿಕ, ಬೆಂಗಳೂರಿನ ಶಿಕ್ಷಕರ ತಂಡಕ್ಕೆ ಸಿಂಗಾಪುರದ ತಜ್ಞರಿಂದ ವಿಶೇಷ ಹಾಗೂ ತೀವ್ರ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ತರಬೇತಿಯಲ್ಲಿ ಶಾಲೆಯ ಪಠ್ಯಕ್ರಮ, ಬೋಧನಾ ತತ್ವಗಳು, ತರಗತಿ ನಿರ್ವಹಣೆ, ದೈನಂದಿನ ಕಲಿಕಾ ಚಟುವಟಿಕೆಗಳು ಹಾಗೂ ಸಂಬಂಧ ಆಧಾರಿತ ಶಿಕ್ಷಣ ವಿಧಾನಗಳ ಕುರಿತು ಸಮಗ್ರ ಮಾರ್ಗದರ್ಶನ ನೀಡಲಾಗಿದೆ. ಇದರ ಮೂಲಕ ಬೆಂಗಳೂರಿನ ಮಕ್ಕಳು ಸಿಂಗಾಪುರದಲ್ಲಿ ಹಲವು ವರ್ಷಗಳಿಂದ ಅನುಸರಿಸಲಾಗುತ್ತಿರುವ ಗುಣಮಟ್ಟದ ಕಲಿಕಾ ಅನುಭವವನ್ನು ಪಡೆಯಲಿದ್ದಾರೆ.

ಶಾಲೆಯ ಶಿಕ್ಷಣ ತತ್ವದ ಪ್ರಕಾರ, ಅರ್ಥಪೂರ್ಣ ಕಲಿಕೆಯು ಉತ್ತಮ ಸಂಬಂಧಗಳು ಹಾಗೂ ಭಾವನಾತ್ಮಕವಾಗಿ ಸುರಕ್ಷಿತ ವಾತಾವರಣದಿಂದ ಆರಂಭವಾಗುತ್ತದೆ.

# ಹಾನರ್ ಆಫ್ ಕಿಂಗ್ಸ್ 'ಕಾಂಕರ್‌ದ ಕ್ಯಾಫೆ' ಸಿಟಿ ಫೈನಲ್ಸ್ ಯಶಸ್ವಿ

ನವದೆಹಲಿ

ವಿಶ್ವದಲ್ಲೇ ಅತಿ ಹೆಚ್ಚು ಆಡಲಾಗುವ ಮೊಬೈಲ್ ಎಂಒಬಿಎ ಆಟಗಳಲ್ಲಿ ಒಂದಾದ ಹಾನರ್ ಆಫ್ ಕಿಂಗ್ಸ್ ಆಯೋಜಿಸಿದ್ದ ತಿಂಗಳ ಅವಧಿಯ 'ಕಾಂಕರ್ ದ ಕ್ಯಾಫೆ' ಸಮುದಾಯ ಗೇಮಿಂಗ್ ಅಭಿಯಾನ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ದೆಹಲಿ-ಎನ್‌ಸಿಆರ್, ಮುಂಬೈ ಮತ್ತು ಬೆಂಗಳೂರು ನಗರಗಳ 21 ಗೇಮಿಂಗ್ ಕೇಂದ್ರಗಳಲ್ಲಿ ನಡೆದ ಅರ್ಹತಾ ಪಂದ್ಯಾವಳಿಗಳ ಬಳಿಕ ಜುಲೈ 5ರಂದು ನಡೆದ ಸಿಟಿ ಫೈನಲ್ಸ್‌ನಲ್ಲಿ ಪ್ರತಿ ನಗರದಿಂದ ಆಯ್ಕೆಯಾದ ಆಟಗಾರರು ಸೆಣಸಿದರು.




ಸ್ಥಳೀಯ ಗೇಮಿಂಗ್ ಸಮುದಾಯವನ್ನು ಉತ್ತೇಜಿಸುವ ಉದ್ದೇಶದಿಂದ ಆಯೋಜಿಸಿದ್ದ ಈ ಅಭಿಯಾನದಲ್ಲಿ 400ಕ್ಕೂ ಹೆಚ್ಚು ಆಟಗಾರರು ಏಕ-ಏಕ ಪಂದ್ಯಗಳಲ್ಲಿ ಪಾಲ್ಗೊಂಡಿದ್ದರು. ವಿವಿಧ ಹಂತಗಳ ಸ್ಪರ್ಧೆಯ ಬಳಿಕ ಪ್ರತಿ ನಗರದಿಂದ 42 ಮಂದಿ ಸೇರಿದಂತೆ ಒಟ್ಟು 126 ಆಟಗಾರರು ಸಿಟಿ ಫೈನಲ್ಸ್‌ಗೆ ಅರ್ಹತೆ ಪಡೆದಿದ್ದರು.

ಮುಂಬೈನ ಜುಹುವಿನ ನೆಕ್ಸ್ಟ್ ಲೆವೆಲ್, ಬೆಂಗಳೂರಿನ ಎಲ್‌ಎಕ್ಸ್‌ಜಿ ಹಾಗೂ ದೆಹಲಿ-ಎನ್‌ಸಿಆರ್‌ನ ನೋಯ್ಡಾದ ವೋರ್ಟೆಕ್ಸ್ ಗೇಮಿಂಗ್ ಸ್ಯಾಂಕ್ಚುವರಿಯಲ್ಲಿ ಏಕಕಾಲದಲ್ಲಿ ನಡೆದ ಅಂತಿಮ ಹಣಾಹಣಿಯಲ್ಲಿ ತೀವ್ರ ಪೈಪೋಟಿ ಕಂಡುಬಂತು. ಅಂತಿಮವಾಗಿ ಐನುಲ್, ಕ್ಯುರೆಮ್ ಹಾಗೂ ಶ್ರೇಯಸ್ ತಮ್ಮ ತಮ್ಮ ನಗರಗಳ ಚಾಂಪಿಯನ್‌ಗಳಾಗಿ ಹೊರಹೊಮ್ಮಿದರು.

ವಿಜೇತರಿಗೆ ಅತ್ಯಾಧುನಿಕ ಐಫೋನ್‌ಗಳನ್ನು ಬಹುಮಾನವಾಗಿ ನೀಡಲಾಯಿತು.

ಅಲ್ಲದೆ ಅಗ್ರ ಸ್ಥಾನ ಪಡೆದ ಇತರ ಸ್ಪರ್ಧಿಗಳಿಗೆ ಅಮೆಜಾನ್ ಉಡುಗೊರೆ ವೌಚರ್‌ಗಳು ಹಾಗೂ ಹಾನರ್ ಆಫ್ ಕಿಂಗ್ಸ್ ವಿಶೇಷ ಸ್ಮರಣಿಕೆಗಳನ್ನು ವಿತರಿಸಲಾಯಿತು.

ಈ ಕುರಿತು ಹಾನರ್ ಆಫ್ ಕಿಂಗ್ಸ್ ಇಂಡಿಯಾದ ದೇಶೀಯ ವ್ಯವಸ್ಥಾಪಕ ಸಿದ್ಧಾರ್ಥ್ ಅರೋರಾ ಮಾತನಾಡಿ, "ಭಾರತದ ಗೇಮಿಂಗ್ ಸಂಸ್ಕೃತಿಯಲ್ಲಿ ಗೇಮಿಂಗ್ ಕೇಂದ್ರಗಳು ಮಹತ್ವದ ಪಾತ್ರ ವಹಿಸಿವೆ. ಸ್ಪರ್ಧಾತ್ಮಕ ಗೇಮಿಂಗ್ ಜನಪ್ರಿಯವಾಗುವ ಮೊದಲೇ ಇವು ಆಟಗಾರರನ್ನು ಒಗ್ಗೂಡಿಸುತ್ತಿದ್ದವು. 'ಕಾಂಕರ್ ದ ಕ್ಯಾಫೆ' ಮೂಲಕ ಆ ಸಂಸ್ಕೃತಿಗೆ ಗೌರವ ಸಲ್ಲಿಸುವ ಜೊತೆಗೆ ಆಟಗಾರರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯನ್ನು ಒದಗಿಸಿದ್ದೇವೆ.

# ಪತ್ರಿಕಾ ದಿನಾಚರಣೆ-2026 ಕಾರ್ಯಕ್ರಮಕ್ಕೆ ಶ್ರೀ ಸೌಮ್ಯನಾಥ ಸ್ವಾಮೀಜಿಗೆ ಆಹ್ವಾನ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಂಗಸಂಸ್ಥೆಯಾದ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಿರುವ "ಪತ್ರಿಕಾ ದಿನಾಚರಣೆ-2026 ಹಾಗೂ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭ" ಕಾರ್ಯಕ್ರಮವು ಇದೇ ಜುಲೈ 11ರಂದು ಶನಿವಾರ ಬೆಂಗಳೂರಿನಲ್ಲಿ ಭವ್ಯವಾಗಿ ನಡೆಯಲಿದೆ.



ಮಾಧ್ಯಮ ಕ್ಷೇತ್ರದಲ್ಲಿ ದಶಕಗಳ ಕಾಲ ಸೇವೆ ಸಲ್ಲಿಸಿರುವ ಹಿರಿಯ ಪತ್ರಕರ್ತರನ್ನು ಗೌರವಿಸುವ ಹಾಗೂ ಸಂಘದ ನೂತನ ಸದಸ್ಯರನ್ನು ಸ್ವಾಗತಿಸುವ ಉದ್ದೇಶದಿಂದ ಈ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಲಿರುವ ವಿಜಯನಗರದ ಶ್ರೀ ಆದಿಚುಂಚನಗಿರಿ ಶಾಖಾಮಠದ ಪರಮಪೂಜ್ಯ ಶ್ರೀ ಶ್ರೀ ಸೌಮ್ಯನಾಥ ಸ್ವಾಮೀಜಿ ಅವರನ್ನು ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ಭೇಟಿ ಮಾಡಿ, ಆಹ್ವಾನ ಪತ್ರಿಕೆ ನೀಡಿ ಕಾರ್ಯಕ್ರಮಕ್ಕೆ ಆಗಮಿಸುವಂತೆ ಭಕ್ತಿಪೂರ್ವಕವಾಗಿ ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಎಸ್. ಸೋಮಶೇಖರ ಗಾಂಧಿ, ಪ್ರಧಾನ ಕಾರ್ಯದರ್ಶಿ ಆರ್. ಜೈಕುಮಾರ್ ಗೌಡ, ರಾಜ್ಯ ಸಮಿತಿ ಸದಸ್ಯ ಎಚ್. ಆರ್. ರವೀಶ್, ಉಪಾಧ್ಯಕ್ಷರಾದ ಎಚ್. ಕೆ. ಬಸವರಾಜು ಹಾಗೂ ಕೆ.ಎಸ್. ಸ್ವಾಮಿ, ಕಾರ್ಯದರ್ಶಿಗಳಾದ ಕೆ.ಎಲ್. ಲೋಕೇಶ್ ಮತ್ತು ಕೆ. ಹರೀಶ್, ಖಜಾಂಚಿ ಟಿ. ಮೋಹನ್ ಉಪಸ್ಥಿತರಿದ್ದರು.


ಇದೇ ವೇಳೆ ಬೆಂಗಳೂರು ನಗರ ಜಿಲ್ಲಾ ಕಾರ್ಯಕಾರಿ ಸಮಿತಿಯ ಸದಸ್ಯರಾದ ಗಂಡಸಿ ಸದಾನಂದ ಸ್ವಾಮಿ, ಡಿ.ಎಲ್. ಹರೀಶ್, ಆರ್. ರಾಜಗಿರಿ ಪ್ರದೀಪ್, ಬಿ.ಕೆ. ಸುಂದರೇಶ್, ಎನ್.ಶಿವಾನಂದ, ಲಿಂಗರಾಜು ಡಿ. ನೊಣವಿನಕೆರೆ, ಎ.ಎಚ್. ಶರಣಬಸಪ್ಪ, ಮೋಹನ್ ಕುಮಾರ್ ಬಿ.ಎನ್., ಗಂಗರಾಜು, ಹನುಮಂತರಾಜು ಬಿ.ಕೆ. ಹಾಗೂ ನಟರಾಜ್ ಬಿ.ಪಿ. ಅವರು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುವ ಕುರಿತು ಚರ್ಚಿಸಿದರು.

ಜುಲೈ 11ರಂದು ವಿಜಯನಗರದ ಶ್ರೀ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ನಡೆಯಲಿರುವ ಈ ಸಮಾರಂಭದಲ್ಲಿ ಹಿರಿಯ ಪತ್ರಕರ್ತರಿಗೆ ಸನ್ಮಾನ, ನೂತನ ಸದಸ್ಯರಿಗೆ ಗುರುತಿನ ಚೀಟಿ ವಿತರಣೆ ಸೇರಿದಂತೆ ಹಲವು ಕಾರ್ಯಕ್ರಮಗಳು ಜರುಗಲಿವೆ. ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಯ್ಸ್ ಇಂಟರ್‌ನ್ಯಾಷನಲ್-ಎನ್‌ಎಚ್ ಇನ್ವೆಸ್ಟ್‌ಮೆಂಟ್ ಪಾಲುದಾರಿಕೆ

ಬೆಂಗಳೂರು

ಭಾರತದ ಪ್ರಮುಖ ವೈವಿಧ್ಯಮಯ ಹಣಕಾಸು ಸೇವಾ ಸಂಸ್ಥೆ ಚಾಯ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಹಾಗೂ ದಕ್ಷಿಣ ಕೊರಿಯಾದ ಪ್ರಮುಖ ಹಣಕಾಸು ಸಂಸ್ಥೆ ಎನ್‌ಎಚ್ ಫೈನಾನ್ಷಿಯಲ್ ಸಮೂಹದ ಅಂಗಸಂಸ್ಥೆಯಾದ ಎನ್‌ಎಚ್ ಇನ್ವೆಸ್ಟ್‌ಮೆಂಟ್ ಆಂಡ್ ಸೆಕ್ಯೂರಿಟೀಸ್ ನಡುವೆ ಮಹತ್ವದ ಕಾರ್ಯತಂತ್ರದ ಪಾಲುದಾರಿಕೆ ಒಪ್ಪಂದವಾಗಿದೆ. ಈ ಒಪ್ಪಂದದ ಭಾಗವಾಗಿ ಚಾಯ್ಸ್ ಈಕ್ವಿಟಿ ಬ್ರೋಕಿಂಗ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಎನ್‌ಎಚ್ ಇನ್ವೆಸ್ಟ್‌ಮೆಂಟ್ ಆಂಡ್ ಸೆಕ್ಯೂರಿಟೀಸ್ ಸಂಸ್ಥೆ ರೂ.900 ಕೋಟಿ ಹೂಡಿಕೆ ಮಾಡಲಿದೆ.



ಚಾಯ್ಸ್ ಸಂಸ್ಥೆಯ ಬ್ರೋಕಿಂಗ್ ಹಾಗೂ ಸಂಪತ್ತು ನಿರ್ವಹಣಾ ವಿಭಾಗವಾದ ಚಾಯ್ಸ್ ಈಕ್ವಿಟಿ ಬ್ರೋಕಿಂಗ್‌ನಲ್ಲಿ ನಡೆಯಲಿರುವ ಈ ಬೃಹತ್ ಹೂಡಿಕೆಯು ಸಂಸ್ಥೆಯ ಬೆಳವಣಿಗೆಯ ಪಯಣದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಜೊತೆಗೆ, ಭಾರತದಲ್ಲಿ ಮುಂದಿನ ತಲೆಮಾರಿನ ಹಣಕಾಸು ಸೇವಾ ವೇದಿಕೆಯನ್ನು ನಿರ್ಮಿಸುವ ಚಾಯ್ಸ್ ಸಂಸ್ಥೆಯ ದೂರದೃಷ್ಟಿಯ ಮೇಲೆ ಎನ್‌ಎಚ್ ಇನ್ವೆಸ್ಟ್‌ಮೆಂಟ್ ಆಂಡ್ ಸೆಕ್ಯೂರಿಟೀಸ್ ಹೊಂದಿರುವ ವಿಶ್ವಾಸವನ್ನು ಇದು ಪ್ರತಿಬಿಂಬಿಸುತ್ತದೆ.

ಭಾರತದಲ್ಲಿ ಚಿಲ್ಲರೆ ಹೂಡಿಕೆದಾರರ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿರುವುದು, ಹೂಡಿಕೆ ಜಾಗೃತಿ ವಿಸ್ತರಿಸುತ್ತಿರುವುದು ಹಾಗೂ ಡಿಜಿಟಲ್ ಹಣಕಾಸು ಸೇವೆಗಳ ಬಳಕೆ ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ಬಂಡವಾಳ ಮಾರುಕಟ್ಟೆ ಗಮನಾರ್ಹ ಪ್ರಗತಿಯನ್ನು ಸಾಧಿಸುತ್ತಿದೆ. ಈ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಚಾಯ್ಸ್ ಸಂಸ್ಥೆ ತನ್ನ ಬ್ರೋಕಿಂಗ್, ಸಂಪತ್ತು ನಿರ್ವಹಣೆ, ಹೂಡಿಕೆ ವಿತರಣೆ ಹಾಗೂ ಬಂಡವಾಳ ಮಾರುಕಟ್ಟೆ ಸೇವೆಗಳನ್ನು ಇನ್ನಷ್ಟು ವಿಸ್ತರಿಸಲು ಯೋಜನೆ ರೂಪಿಸಿದೆ.

ಒಪ್ಪಂದದ ಪ್ರಕಾರ, ಎನ್‌ಎಚ್ ಇನ್ವೆಸ್ಟ್‌ಮೆಂಟ್ ಆಂಡ್ ಸೆಕ್ಯೂರಿಟೀಸ್ ಸಂಸ್ಥೆಯು ಕಡ್ಡಾಯವಾಗಿ ಪರಿವರ್ತನೀಯ ಆದ್ಯತಾ ಷೇರುಗಳ ಮೂಲಕ ಚಾಯ್ಸ್ ಈಕ್ವಿಟಿ ಬ್ರೋಕಿಂಗ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ರೂ.900 ಕೋಟಿ ಹೂಡಿಕೆ ಮಾಡಲಿದ್ದು, ಈ ಹೂಡಿಕೆಯಿಂದ ಸಂಸ್ಥೆಯ ವ್ಯವಹಾರ ವಿಸ್ತರಣೆ, ತಂತ್ರಜ್ಞಾನ ಅಭಿವೃದ್ಧಿ ಹಾಗೂ ಗ್ರಾಹಕ ಸೇವೆಗಳನ್ನು ಮತ್ತಷ್ಟು ಬಲಪಡಿಸಲು ನೆರವಾಗಲಿದೆ.

# ರಿಲ್ಯಾಕ್ಸೋ ಫುಟ್‌ವೇರ್ಸ್ ದಕ್ಷಿಣ ಭಾರತದಲ್ಲಿ ವಿಸ್ತರಣೆ: ಬೆಂಗಳೂರಿನಲ್ಲಿ ನಾಲ್ಕು ಹೊಸ ಮಳಿಗೆಗಳ ಆರಂಭ

ಬೆಂಗಳೂರು

ಭಾರತದ ಅತಿದೊಡ್ಡ ಪಾದರಕ್ಷೆ ತಯಾರಿಕಾ ಸಂಸ್ಥೆಯಾದ ರಿಲ್ಯಾಕ್ಸೋ ಫುಟ್‌ವೇರ್ಸ್ ಲಿಮಿಟೆಡ್, ದಕ್ಷಿಣ ಭಾರತದಲ್ಲಿ ತನ್ನ ಚಿಲ್ಲರೆ ಮಾರಾಟ ಜಾಲವನ್ನು ಮತ್ತಷ್ಟು ವಿಸ್ತರಿಸುವ ಉದ್ದೇಶದಿಂದ ಬೆಂಗಳೂರಿನಲ್ಲಿ ನಾಲ್ಕು ಹೊಸ ವಿಶೇಷ ಬ್ರ್ಯಾಂಡ್ ಮಳಿಗೆಗಳನ್ನು ಆರಂಭಿಸಿದೆ.




ನಗರದ ಜೆ.ಪಿ.ನಗರ, ಅತ್ತಿಬೆಲೆ, ಚನ್ನಸಂದ್ರ ಹಾಗೂ ಮಾಗಡಿ ರಸ್ತೆಯಲ್ಲಿ ಆರಂಭಗೊಂಡಿರುವ ಈ ಹೊಸ ಮಳಿಗೆಗಳನ್ನು ಜನಪ್ರಿಯ ನಟಿ ಅದಾ ಶರ್ಮಾ ಉದ್ಘಾಟಿಸಿದರು. ಉದ್ಘಾಟನಾ ಸಮಾರಂಭದಲ್ಲಿ ಅವರು ಗ್ರಾಹಕರೊಂದಿಗೆ ಸಂವಾದ ನಡೆಸಿ ಸಂಸ್ಥೆಯ ಹೊಸ ಮಳಿಗೆಗಳಿಗೆ ಶುಭ ಹಾರೈಸಿದರು.

ಈ ವಿಸ್ತರಣೆಯ ಮೂಲಕ ಆಧುನಿಕ ಗ್ರಾಹಕರಿಗೆ ಹೆಚ್ಚು ಆಕರ್ಷಕ, ಸುಲಭ ಹಾಗೂ ಉತ್ತಮ ಖರೀದಿ ಅನುಭವ ಒದಗಿಸುವ ತನ್ನ ಬದ್ಧತೆಯನ್ನು ರಿಲ್ಯಾಕ್ಸೋ ಮತ್ತೊಮ್ಮೆ ಪ್ರದರ್ಶಿಸಿದೆ. ವಿಶೇಷವಾಗಿ ಯುವಜನರನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಿರುವ ಈ ಮಳಿಗೆಗಳಲ್ಲಿ ವೈವಿಧ್ಯಮಯ ಪಾದರಕ್ಷೆಗಳ ಸಂಗ್ರಹವನ್ನು ಗ್ರಾಹಕರಿಗೆ ಒಂದೇ ಸೂರಿನಡಿ ಲಭ್ಯವಾಗುವಂತೆ ಮಾಡಲಾಗಿದೆ.

ಹೊಸ ಮಳಿಗೆಗಳನ್ನು ಸಂಸ್ಥೆಯ ನವೀಕೃತ ಚಿಲ್ಲರೆ ಮಾರಾಟ ಪರಿಕಲ್ಪನೆಗೆ ಅನುಗುಣವಾಗಿ ರೂಪಿಸಲಾಗಿದ್ದು, ಆಧುನಿಕ ವಿನ್ಯಾಸ, ವಿಶಾಲ ಪ್ರದರ್ಶನ ವ್ಯವಸ್ಥೆ ಹಾಗೂ ಸುಲಭ ಸಂಚಾರಕ್ಕೆ ಅನುಕೂಲವಾಗುವ ವಿನ್ಯಾಸವನ್ನು ಹೊಂದಿವೆ. ಗ್ರಾಹಕರು ವಿವಿಧ ಉತ್ಪನ್ನಗಳನ್ನು ಸುಲಭವಾಗಿ ವೀಕ್ಷಿಸಿ, ತಮ್ಮ ಅಗತ್ಯಕ್ಕೆ ತಕ್ಕ ಪಾದರಕ್ಷೆಗಳನ್ನು ಆರಿಸಿಕೊಳ್ಳಲು ಅನುಕೂಲವಾಗುವಂತೆ ಮಳಿಗೆಗಳನ್ನು ಸಜ್ಜುಗೊಳಿಸಲಾಗಿದೆ.

ರಿಲ್ಯಾಕ್ಸೋ ಸಂಸ್ಥೆಯು ದೇಶಾದ್ಯಂತ ತನ್ನ ಚಿಲ್ಲರೆ ಮಾರಾಟ ಜಾಲವನ್ನು ವಿಸ್ತರಿಸುತ್ತಿದ್ದು, ಗ್ರಾಹಕರಿಗೆ ಗುಣಮಟ್ಟದ, ಕೈಗೆಟುಕುವ ಹಾಗೂ ಆಕರ್ಷಕ ಪಾದರಕ್ಷೆಗಳನ್ನು ಸುಲಭವಾಗಿ ತಲುಪಿಸುವ ಗುರಿಯೊಂದಿಗೆ ಹೊಸ ಮಳಿಗೆಗಳ ಆರಂಭಕ್ಕೆ ಮುಂದಾಗಿದೆ.

ಬೆಂಗಳೂರಿನ ಈ ನಾಲ್ಕು ಹೊಸ ಮಳಿಗೆಗಳು ದಕ್ಷಿಣ ಭಾರತದಲ್ಲಿ ಸಂಸ್ಥೆಯ ಬೆಳವಣಿಗೆಯ ಮತ್ತೊಂದು ಮಹತ್ವದ ಹೆಜ್ಜೆಯಾಗಿ ಪರಿಗಣಿಸಲಾಗಿದೆ.

# ಮುಂದಿನ ತಲೆಮಾರಿನ ಟೈಲ್ ಅಂಟು ಪರಿಹಾರಗಳ ಪರಿಚಯ

ಬೆಂಗಳೂರು

ಶಾಶ್ವತ ನಿರ್ಮಾಣ ಪರಿಹಾರಗಳಲ್ಲಿ ಜಾಗತಿಕ ಮುಂಚೂಣಿಯಲ್ಲಿರುವ ಕೆರಕೋಲ್, ತನ್ನ ಪ್ರಮುಖ ಎಚ್40 ಶ್ರೇಣಿಯನ್ನು ಮತ್ತಷ್ಟು ವಿಸ್ತರಿಸುವ ಮೂಲಕ ಭಾರತದಲ್ಲಿ ಮುಂದಿನ ತಲೆಮಾರಿನ ಟೈಲ್ ಅಂಟು ಪರಿಹಾರಗಳನ್ನು ಪರಿಚಯಿಸಿದೆ. ನಿರ್ಮಾಣ ಕ್ಷೇತ್ರದ ಬದಲಾಗುತ್ತಿರುವ ಅಗತ್ಯಗಳಿಗೆ ಅನುಗುಣವಾಗಿ ಅತ್ಯಾಧುನಿಕ ತಂತ್ರಜ್ಞಾನ, ವಿಶ್ವಾಸಾರ್ಹತೆ ಹಾಗೂ ಕಾರ್ಯಕ್ಷಮತೆಯನ್ನು ಒಟ್ಟುಗೂಡಿಸಿದ ಉತ್ಪನ್ನಗಳನ್ನು ಸಂಸ್ಥೆ ಮಾರುಕಟ್ಟೆಗೆ ತಂದಿದೆ.




ಈ ಶ್ರೇಣಿಯ ಪ್ರಮುಖ ಉತ್ಪನ್ನವಾದ ಎಚ್40 ಜೆಲ್ ಈಗಾಗಲೇ ಟೈಲ್ ಅಂಟು ವಿಭಾಗದಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸಿದ್ದು, ಅತ್ಯುತ್ತಮ ಕಾರ್ಯನಿರ್ವಹಣಾ ಸುಲಭತೆ, ದೀರ್ಘಕಾಲಿಕತೆ ಹಾಗೂ ಬಹುಉದ್ದೇಶ ಬಳಕೆಯಿಂದ ನಿರ್ಮಾಣ ಕ್ಷೇತ್ರದ ವೃತ್ತಿಪರರ ವಿಶ್ವಾಸ ಗಳಿಸಿದೆ.

ಎಚ್40 ಜೆಲ್‌ನಲ್ಲಿ ಅಳವಡಿಸಿರುವ ವಿಶೇಷ ಜೆಲ್ ತಂತ್ರಜ್ಞಾನವು ಸಮತೋಲನಯುತ ಸಾಂದ್ರತೆ, ಉತ್ತಮ ಮೇಲ್ಮೈ ಸಂಪರ್ಕ ಹಾಗೂ ಅತ್ಯುತ್ತಮ ಅಂಟಿಕೊಳ್ಳುವ ಸಾಮರ್ಥ್ಯವನ್ನು ಒದಗಿಸುವ ಮೂಲಕ ವಿವಿಧ ರೀತಿಯ ಟೈಲ್ ಅಳವಡಿಕೆ ಕೆಲಸಗಳಲ್ಲಿ ಉತ್ತಮ ಫಲಿತಾಂಶ ನೀಡುತ್ತಿದೆ.

ಎಚ್40 ಜೆಲ್‌ನ ಯಶಸ್ಸಿನ ಬೆನ್ನಲ್ಲೇ ಕೆರಕೋಲ್ ಇದೀಗ ಎಚ್40 ಎಕ್ಸ್‌ಟ್ರೀಮ್ ಹಾಗೂ ಎಚ್40 ಟೆಕ್ ಎಂಬ ಎರಡು ಹೊಸ ಉತ್ಪನ್ನಗಳನ್ನು ಭಾರತದಲ್ಲಿ ಪರಿಚಯಿಸಿದೆ.

ದೊಡ್ಡ ಗಾತ್ರದ ಟೈಲ್‌ಗಳ ಅಳವಡಿಕೆ, ಹೆಚ್ಚಿನ ಕಾರ್ಯಕ್ಷಮತೆ ಅಗತ್ಯವಿರುವ ನಿರ್ಮಾಣ ಕಾಮಗಾರಿಗಳು ಹಾಗೂ ಭಾರೀ ಬಳಕೆಯ ಯೋಜನೆಗಳನ್ನು ಗಮನದಲ್ಲಿಟ್ಟುಕೊಂಡು ಈ ಉತ್ಪನ್ನಗಳನ್ನು ವಿಶೇಷವಾಗಿ ಅಭಿವೃದ್ಧಿಪಡಿಸಲಾಗಿದೆ.

# ಬೆಂಗಳೂರು ಕಚೇರಿ ವಹಿವಾಟಿನಲ್ಲಿ ದೇಶಕ್ಕೆ ಅಗ್ರಸ್ಥಾನ

ಬೆಂಗಳೂರು

ಜಾಗತಿಕ ಸಾಮರ್ಥ್ಯ ಕೇಂದ್ರಗಳ (ಜಿಸಿಸಿ) ಪ್ರಮುಖ ತಾಣವಾಗಿ ಬೆಂಗಳೂರು ತನ್ನ ಪ್ರಾಬಲ್ಯವನ್ನು ಮತ್ತಷ್ಟು ಬಲಪಡಿಸಿದ್ದು, 2026ರ ಮೊದಲಾರ್ಧದಲ್ಲಿ ದೇಶದಲ್ಲೇ ಅತಿ ಹೆಚ್ಚು ಕಚೇರಿ ವಹಿವಾಟು ದಾಖಲಿಸಿದೆ ಎಂದು ನೈಟ್ ಫ್ರಾಂಕ್ ಇಂಡಿಯಾ ತನ್ನ 'ಭಾರತೀಯ ರಿಯಲ್ ಎಸ್ಟೇಟ್: ವಸತಿ ಮತ್ತು ಕಚೇರಿ (ಜನವರಿ-ಜೂನ್ 2026)' ವರದಿಯಲ್ಲಿ ತಿಳಿಸಿದೆ.

ವರದಿಯ ಪ್ರಕಾರ, 2026ರ ಮೊದಲ ಆರು ತಿಂಗಳಲ್ಲಿ ಬೆಂಗಳೂರು 14.1 ಮಿಲಿಯನ್ ಚದರ ಅಡಿ ಕಚೇರಿ ವಹಿವಾಟು ದಾಖಲಿಸಿದ್ದು, ದೇಶದ ಎಂಟು ಪ್ರಮುಖ ನಗರಗಳಲ್ಲಿ ಮೊದಲ ಸ್ಥಾನದಲ್ಲಿದೆ. ಇದರಲ್ಲಿ 8.5 ಮಿಲಿಯನ್ ಚದರ ಅಡಿ ಲೀಸಿಂಗ್ ಜಿಸಿಸಿ ಸಂಸ್ಥೆಗಳದ್ದಾಗಿದ್ದು, ನಗರದ ಒಟ್ಟು ಕಚೇರಿ ವಹಿವಾಟಿನಲ್ಲಿ ಅವುಗಳ ಪಾಲು ಶೇ. 60ರಷ್ಟಿದೆ.

ಬಹುರಾಷ್ಟ್ರೀಯ ಸಂಸ್ಥೆಗಳು ಬೆಂಗಳೂರಿನ ಪರಿಣತ ಮಾನವ ಸಂಪನ್ಮೂಲ, ಅಭಿವೃದ್ಧಿ ಹೊಂದಿದ ಕಚೇರಿ ಮೂಲಸೌಕರ್ಯ ಹಾಗೂ ಜಾಗತಿಕ ಮಟ್ಟದ ವ್ಯವಹಾರಿಕ ವಾತಾವರಣದ ಮೇಲೆ ಹೊಂದಿರುವ ವಿಶ್ವಾಸದಿಂದ ಜಿಸಿಸಿ ವಲಯದ ಬೇಡಿಕೆ ನಿರಂತರವಾಗಿ ಹೆಚ್ಚುತ್ತಿದೆ ಎಂದು ವರದಿ ಹೇಳಿದೆ.

2025ರ ಮೊದಲಾರ್ಧದಲ್ಲಿ ದಾಖಲಾಗಿದ್ದ ಹೆಚ್ಚಿನ ಪೂರ್ವ-ಬದ್ಧತೆಗಳ ಪರಿಣಾಮವಾಗಿ ಈ ಬಾರಿ ಒಟ್ಟು ಕಚೇರಿ ವಹಿವಾಟಿನಲ್ಲಿ ವರ್ಷದಿಂದ ವರ್ಷಕ್ಕೆ ಶೇ. 23ರಷ್ಟು ಇಳಿಕೆ ಕಂಡುಬಂದಿದ್ದರೂ, ಪೂರ್ವ-ಬದ್ಧತೆಗಳನ್ನು ಹೊರತುಪಡಿಸಿದ ನೈಜ ಲೀಸಿಂಗ್ ಚಟುವಟಿಕೆ ಐತಿಹಾಸಿಕ ಗರಿಷ್ಠ ಮಟ್ಟ ತಲುಪಿರುವುದು ಗಮನಾರ್ಹವಾಗಿದೆ.

ಇದೇ ಅವಧಿಯಲ್ಲಿ ಹೊಸ 10.4 ಮಿಲಿಯನ್ ಚದರ ಅಡಿ ಗ್ರೇಡ್-ಎ ಕಚೇರಿ ಸ್ಥಳಗಳು ಪೂರ್ಣಗೊಂಡಿದ್ದು, ಹಿಂದೆ ವಿಳಂಬವಾಗಿದ್ದ ಹಲವು ಯೋಜನೆಗಳು ಕಾರ್ಯರೂಪಕ್ಕೆ ಬಂದಿರುವುದರಿಂದ ಪೂರೈಕೆ ಹೆಚ್ಚಾಗಿದೆ.

ಕಚೇರಿ ಸ್ಥಳಗಳ ಮೇಲಿನ ನಿರಂತರ ಬೇಡಿಕೆಯ ಪರಿಣಾಮವಾಗಿ ಪ್ರೀಮಿಯಂ ವ್ಯಾಪಾರ ವಲಯಗಳಲ್ಲಿ ಬಾಡಿಗೆ ದರವೂ ಏರಿಕೆಯಾಗಿದ್ದು, ಸರಾಸರಿ ಕಚೇರಿ ಬಾಡಿಗೆ ದರ ವರ್ಷದಿಂದ ವರ್ಷಕ್ಕೆ ಶೇ. 8ರಷ್ಟು ಏರಿಕೆ ಕಂಡು ಪ್ರತಿ ಚದರ ಅಡಿಗೆ ತಿಂಗಳಿಗೆ 102ಕ್ಕೆ ತಲುಪಿದೆ.

ವಸತಿ ಮಾರುಕಟ್ಟೆಯಲ್ಲೂ ಬೆಂಗಳೂರು ಉತ್ತಮ ಬೆಳವಣಿಗೆ ದಾಖಲಿಸಿದ್ದು, 2026ರ ಮೊದಲಾರ್ಧದಲ್ಲಿ 27,968 ಮನೆಗಳ ಮಾರಾಟವಾಗಿದೆ. ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ. 5ರಷ್ಟು ಹೆಚ್ಚಳವಾಗಿದೆ.

ಇದೇ ವೇಳೆ ಹೊಸ ವಸತಿ ಯೋಜನೆಗಳ ಆರಂಭ ಶೇ. 4ರಷ್ಟು ಏರಿಕೆಯಾಗಿದೆ. ನಗರದಲ್ಲಿ ವಸತಿ ಬೇಡಿಕೆ ನಿರಂತರವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಸರಾಸರಿ ವಸತಿ ಬೆಲೆ ವರ್ಷದಿಂದ ವರ್ಷಕ್ಕೆ ಶೇ. 9ರಷ್ಟು ಏರಿಕೆಯಾಗಿ ಪ್ರತಿ ಚದರ ಅಡಿಗೆ 9,354ಕ್ಕೆ ತಲುಪಿದೆ ಎಂದು ನೈಟ್ ಫ್ರಾಂಕ್ ಇಂಡಿಯಾ ವರದಿ ತಿಳಿಸಿದೆ.

# ದೇಶೀಯ ಉತ್ಪಾದನೆಗೆ ಉತ್ತೇಜನ; ಸಮಗ್ರ ಪರಿಸರ ವ್ಯವಸ್ಥೆ ನಿರ್ಮಾಣ ಅಗತ್ಯ

ನವದೆಹಲಿ

ದೇಶದಲ್ಲಿ ಸುಧಾರಿತ ರಸಾಯನಿಕ ಕೋಶ (ಎಸಿಸಿ) ಬ್ಯಾಟರಿ ಘಟಕಗಳ ದೇಶೀಯ ಉತ್ಪಾದನೆಯನ್ನು ಉತ್ತೇಜಿಸಲು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಬುಧವಾರ ಉನ್ನತ ಮಟ್ಟದ ಸಮಾಲೋಚನಾ ಸಭೆ ನಡೆಸಿದರು. ಭಾರತವು ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ಹಾಗೂ ಸ್ವಾವಲಂಬಿ ಬ್ಯಾಟರಿ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಬೇಕಾದ ಅಗತ್ಯವಿದೆ ಎಂದು ಅವರು ಒತ್ತಿ ಹೇಳಿದರು.

ಸಭೆಯಲ್ಲಿ ಕೇಂದ್ರ ಭಾರೀ ಕೈಗಾರಿಕೆ ಸಚಿವಾಲಯದ ಹಿರಿಯ ಅಧಿಕಾರಿಗಳು, ಬ್ಯಾಟರಿ ಹಾಗೂ ಬ್ಯಾಟರಿ ಘಟಕಗಳ ತಯಾರಕರು, ಸಂಶೋಧನಾ ಸಂಸ್ಥೆಗಳು, ಸರ್ಕಾರಿ ಸಂಸ್ಥೆಗಳು ಮತ್ತು ಕೈಗಾರಿಕಾ ಸಂಘಟನೆಗಳ ಪ್ರತಿನಿಧಿಗಳು ಸೇರಿದಂತೆ 25ಕ್ಕೂ ಹೆಚ್ಚು ಪಾಲುದಾರರು ಭಾಗವಹಿಸಿದ್ದರು. ದೇಶೀಯ ಉತ್ಪಾದನಾ ಸಾಮರ್ಥ್ಯ, ಪ್ರಮುಖ ಘಟಕಗಳ ಅವಶ್ಯಕತೆ, ಹೂಡಿಕೆ, ತಂತ್ರಜ್ಞಾನ ಲಭ್ಯತೆ ಹಾಗೂ ಕೈಗಾರಿಕೆ ಎದುರಿಸುತ್ತಿರುವ ಸವಾಲುಗಳ ಕುರಿತು ಸಭೆಯಲ್ಲಿ ಸಮಗ್ರ ಚರ್ಚೆ ನಡೆಯಿತು.



ಸಭೆಯನ್ನುದ್ದೇಶಿಸಿ ಮಾತನಾಡಿದ ಕುಮಾರಸ್ವಾಮಿ, ವಿದ್ಯುತ್ ಚಾಲಿತ ವಾಹನಗಳು, ವಿದ್ಯುತ್ ಸಂಗ್ರಹ ವ್ಯವಸ್ಥೆಗಳು, ಗ್ರಾಹಕ ಎಲೆಕ್ಟ್ರಾನಿಕ್ಸ್, ದೂರಸಂಪರ್ಕ, ದತ್ತಾಂಶ ಕೇಂದ್ರಗಳು ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸುಧಾರಿತ ಬ್ಯಾಟರಿಗಳ ಬೇಡಿಕೆ ವೇಗವಾಗಿ ಹೆಚ್ಚುತ್ತಿದೆ ಎಂದು ಹೇಳಿದರು. 2030ರ ವೇಳೆಗೆ ದೇಶದಲ್ಲಿ ಎಸಿಸಿ ಬ್ಯಾಟರಿಗಳ ಬೇಡಿಕೆ ಸುಮಾರು 196 ಗಿಗಾವಾಟ್ ಗಂಟೆಗಳಿಗೆ ತಲುಪಲಿದ್ದು, 2032ರ ವೇಳೆಗೆ ಅದು 236 ಗಿಗಾವಾಟ್ ಗಂಟೆಗಳವರೆಗೆ ಏರಿಕೆಯಾಗುವ ನಿರೀಕ್ಷೆಯಿದೆ. ಇದು ಕೈಗಾರಿಕೆ ಹಾಗೂ ಆರ್ಥಿಕತೆಗೆ ದೊಡ್ಡ ಅವಕಾಶವಾಗಿದ್ದರೂ, ಕಾರ್ಯತಂತ್ರದ ಸವಾಲು ಕೂಡ ಆಗಿದೆ ಎಂದು ತಿಳಿಸಿದರು.

ಕೇವಲ ಬ್ಯಾಟರಿ ಕೋಶಗಳ ಉತ್ಪಾದನೆ ಸಾಕಾಗುವುದಿಲ್ಲ. ಕಚ್ಚಾ ವಸ್ತುಗಳು, ಮಧ್ಯಂತರ ವಸ್ತುಗಳು, ಕ್ಯಾಥೋಡ್ ಹಾಗೂ ಅನೋಡ್ ವಸ್ತುಗಳು, ಸೆಪರೇಟರ್‌ಗಳು, ಎಲೆಕ್ಟ್ರೋಲೈಟ್‌ಗಳು, ಕರೆಂಟ್ ಕಲೆಕ್ಟರ್‌ಗಳು, ಉತ್ಪಾದನಾ ಯಂತ್ರೋಪಕರಣಗಳು, ಪರೀಕ್ಷಾ ಮೂಲಸೌಕರ್ಯ, ಮರುಬಳಕೆ, ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ಕೌಶಲ್ಯಯುತ ಮಾನವ ಸಂಪನ್ಮೂಲ ಸೇರಿದಂತೆ ಸಂಪೂರ್ಣ ಮೌಲ್ಯ ಸರಪಳಿಯನ್ನು ದೇಶದಲ್ಲೇ ಬಲಪಡಿಸಬೇಕು ಎಂದು ಸಚಿವರು ಹೇಳಿದರು.

ಸಭೆಯಲ್ಲಿ ಪ್ರಸ್ತುತ ದೇಶದ ಎಸಿಸಿ ಉದ್ಯಮವು ಕ್ಯಾಥೋಡ್, ಅನೋಡ್, ಸೆಪರೇಟರ್, ಎಲೆಕ್ಟ್ರೋಲೈಟ್ ಮತ್ತು ಇತರ ಪ್ರಮುಖ ಬ್ಯಾಟರಿ ಘಟಕಗಳಿಗಾಗಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಆಮದುಗಳ ಮೇಲೆ ಅವಲಂಬಿತವಾಗಿದೆ ಎಂಬುದು ಗಮನಕ್ಕೆ ಬಂದಿದೆ. ಎಲ್‌ಎಫ್‌ಪಿ ಬ್ಯಾಟರಿ ಕೋಶದ ಒಟ್ಟು ವೆಚ್ಚದಲ್ಲಿ ಶೇ.75ಕ್ಕಿಂತ ಹೆಚ್ಚು ಪಾಲು ಈ ಘಟಕಗಳದ್ದಾಗಿದ್ದು, ದೇಶೀಯ ಉತ್ಪಾದನೆಯ ಮೌಲ್ಯವರ್ಧನೆ ಕೇವಲ ಶೇ.20ರಿಂದ 25ರಷ್ಟೇ ಇದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಉದ್ಯಮ ಪ್ರತಿನಿಧಿಗಳು ತಮ್ಮ ಉತ್ಪಾದನಾ ಸಾಮರ್ಥ್ಯ, ವಿಸ್ತರಣಾ ಯೋಜನೆಗಳು, ಹೂಡಿಕೆ ಅಗತ್ಯಗಳು ಹಾಗೂ ತಂತ್ರಜ್ಞಾನ ಲಭ್ಯತೆ ಕುರಿತು ಮಾಹಿತಿ ನೀಡಿದರು. ಹೆಚ್ಚಿನ ಬಂಡವಾಳ ವೆಚ್ಚ, ಉತ್ಪಾದನಾ ಯಂತ್ರೋಪಕರಣಗಳ ಆಮದು ಅವಲಂಬನೆ, ಹೆಚ್ಚಿನ ವಿದ್ಯುತ್ ಬಳಕೆ, ಜಾಗತಿಕ ಮಾರುಕಟ್ಟೆಯ ತೀವ್ರ ಸ್ಪರ್ಧೆ, ತಂತ್ರಜ್ಞಾನ ಲಭ್ಯತೆಯ ಮೇಲಿನ ನಿರ್ಬಂಧಗಳು ಹಾಗೂ 12ರಿಂದ 18 ತಿಂಗಳವರೆಗೆ ತೆಗೆದುಕೊಳ್ಳುವ ಗುಣಮಟ್ಟದ ಪ್ರಮಾಣೀಕರಣ ಪ್ರಕ್ರಿಯೆ ಸೇರಿದಂತೆ ಹಲವು ಸಮಸ್ಯೆಗಳನ್ನು ಅವರು ಸಚಿವರ ಗಮನಕ್ಕೆ ತಂದರು.

ಉದ್ಯಮದ ಎಲ್ಲ ಸಮಸ್ಯೆಗಳು ಮತ್ತು ಸಲಹೆಗಳನ್ನು ಆಲಿಸಿದ ಕುಮಾರಸ್ವಾಮಿ, ದೇಶೀಯ ಎಸಿಸಿ ಬ್ಯಾಟರಿ ಘಟಕಗಳ ಉತ್ಪಾದನೆಗೆ ಅನುಕೂಲಕರ ವಾತಾವರಣ ನಿರ್ಮಿಸಲು ಹಾಗೂ ಕೈಗಾರಿಕೆ ಎದುರಿಸುತ್ತಿರುವ ನೈಜ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಕೇಂದ್ರ ಸರ್ಕಾರದಿಂದ ಸಾಧ್ಯವಿರುವ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

## ಡಾ. ಬಾಬು ಜಗಜೀವನರಾಂ 40ನೇ ಪುಣ್ಯಸ್ಮರಣೆ

ಕೋಲಾರ

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ. ಬಾಬು ಜಗಜೀವನರಾಂ ಅವರ 40ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಊರಬಾಗಿಲು ಶ್ರೀನಿವಾಸ್ ಅವರು ಬಾಬೂಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ಹಸಿರು ಕ್ರಾಂತಿಯ ಮೂಲಕ ದೇಶದ ಆಹಾರ ಕೊರತೆಯನ್ನು ನೀಗಿಸಿದ ಬಾಬು ಜಗಜೀವನರಾಂ ಅವರು ಸುಮಾರು 50 ವರ್ಷಗಳ ಕಾಲ ಸುದೀರ್ಘ ರಾಜಕೀಯ ಸೇವೆ ಸಲ್ಲಿಸಿದ ಧೀಮಂತ ನಾಯಕರು ಎಂದು ಸ್ಮರಿಸಿದರು.

ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ ಮಾತನಾಡಿ, ಬಾಬು ಜಗಜೀವನರಾಂ ಅವರು ಕೇವಲ ಒಬ್ಬ ವ್ಯಕ್ತಿಯಲ್ಲ, ಅವರೊಬ್ಬ ಶಕ್ತಿ. ಕೃಷಿ ಸಚಿವರಾಗಿ ಮಾತ್ರವಲ್ಲದೆ ಕಾರ್ಮಿಕ, ಕಾನೂನು ಹಾಗೂ ರೈಲ್ವೆ ಸಚಿವರಾಗಿ ಸೇವೆ ಸಲ್ಲಿಸಿ, ಅನೇಕ ಜನಪರ ಕಾಯ್ದೆಗಳನ್ನು ಜಾರಿಗೆ ತಂದರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪುವಂತೆ ಕೆಲಸ ಮಾಡಿದರು ಎಂದು ಹೇಳಿದರು.

ದೇಶದಲ್ಲಿ ಸುಮಾರು 40 ಕೋಟಿ ಜನರಿಗೆ ಆಹಾರ ಒದಗಿಸುವ ಸವಾಲಿದ್ದ ಸಂದರ್ಭದಲ್ಲಿ ಹಸಿರು ಕ್ರಾಂತಿಯ ಮೂಲಕ ಕೃಷಿ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗಳನ್ನು ತಂದು, ನೀರಾವರಿ ಅಭಿವೃದ್ಧಿಗೆ ಒತ್ತು ನೀಡಿ ಜನರು ಸಮೃದ್ಧ ಜೀವನ ನಡೆಸುವ ವಾತಾವರಣ ನಿರ್ಮಿಸಿದರು ಎಂದು ತಿಳಿಸಿದರು.

ಹಿರಿಯ ಮುಖಂಡ ರಾಜಕಲ್ಲಹಳ್ಳಿ ಶ್ರೀನಿವಾಸ್ ಮಾತನಾಡಿ, ಕೃಷಿ, ಕೈಗಾರಿಕೆ, ಕಾರ್ಮಿಕ ಹಾಗೂ ವಿದೇಶಾಂಗ ಕ್ಷೇತ್ರಗಳಲ್ಲಿ ಬಾಬು ಜಗಜೀವನರಾಂ ಅವರು ಕೈಗೊಂಡ ಕಾರ್ಯಗಳು ಇಂದಿಗೂ ದೇಶಕ್ಕೆ ಮಾದರಿಯಾಗಿವೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚಿಸಿದರೆ, ಬಾಬು ಜಗಜೀವನರಾಂ ಅವರು ಸಂವಿಧಾನದ ಆಶಯಗಳನ್ನು ಜಾರಿಗೊಳಿಸಲು ತಮ್ಮ ಜೀವನದುದ್ದಕ್ಕೂ ಶ್ರಮಿಸಿದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ವೈ. ಶಿವಕುಮಾರ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸೈಯದ್ ಆಫ್ಸರ್, ಎಸ್ಸಿ ಘಟಕದ ಜಿಲ್ಲಾ ಅಧ್ಯಕ್ಷ ಜಯದೇವ್, ಮುಖಂಡರಾದ ಬೆಳಗಾನಹಳ್ಳಿ ಮುನಿವೆಂಕಟಪ್ಪ, ವೀರೇಂದ್ರ ಪಾಟೀಲ್, ಬಿ.ಟಿ. ಚಂದ್ರಶೇಖರ್, ನದೀಂ, ಸೋಮಶೇಖರ್, ಲಾಲ್ ಬಹದ್ದೂರ್ ಶಾಸ್ತ್ರಿ, ಕೋಟೆ ರಾಜೇಶ್, ಅಯೂಬ್, ಶಿವಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಒಕ್ಕಲಿಗರ ಭವನಕ್ಕೆ ಸುರೇಶ್‌ಗೌಡ ಭೂಮಿಪೂಜೆ

ತುಮಕೂರು

ಬೆಂಗಳೂರು ನಿರ್ಮಾತೃ ಕೆಂಪೇಗೌಡರ ದೂರದೃಷ್ಟಿ ಚಿಂತನೆಯ, ಜನಸ್ನೇಹಿ ಆಡಳಿತ ಇಂದಿನ ನಾಯಕರಿಗೆ ಮಾದರಿ ಆಗಬೇಕು. ಅವರು ನಾಡಿಗೆ ಕೊಟ್ಟ ಕೊಡುಗೆಗಳನ್ನು ಸ್ಮರಿಸಬೇಕು ಎಂದು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡರು ಹೇಳಿದರು.

ಕ್ಷೇತ್ರದ ಊರ್ಡಿಗೆರೆ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 517 ನೇ ಜಯಂತೋತ್ಸವ ಉದ್ಘಾಟಿಸಿ ಮಾತನಾಡಿದ ಶಾಸಕರು, ವಿಶ್ವಮಟ್ಟದಲ್ಲಿ ಹೆಸರು ಮಾಡಿರುವ ಬೆಂಗಳೂರು ಮಹಾನಗರ ನಿರ್ಮಾಣ ಮಾಡಿದ ಕೆಂಪೇಗೌಡರ ನಗರ ನಿರ್ಮಾಣ ಕೌಶಲ್ಯ ಅಪಾರವಾದದ್ದು, ಕೆರೆಗಳನ್ನು ನಿರ್ಮಿಸಿ ಕೃಷಿ ಚಟುವಟಿಕೆಗಳನ್ನು ಪ್ರೋತ್ಸಾಹಿಸಿದರು. ಎಲ್ಲಾ ಸಮುದಾಯಗಳನ್ನು ಸಮಾನತೆಯಿಂದ ಕಂಡ ಶ್ರೇಷ್ಠ ಆಡಳಿತಗಾರ ಎಂದು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಸುರೇಶ್‌ಗೌಡರು ಒಂದು ಕೋಟಿ ರೂ. ಅಂದಾಜು ವೆಚ್ಚದ ಒಕ್ಕಲಿಗರ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದರು. ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಆರ್. ಹನುಮಂತರಾಯಪ್ಪ, ಮುಖಂಡರಾದ ರವಿ, ಗಂಗಣ್ಣ, ಉಮೇಶ್, ಕರಿಯಪ್ಪ, ಮೂರ್ತಿ, ನಾಗಣ್ಣ, ಮಂಚಕಲ್ಲುಕುಪ್ಪೆ ರಾಜೇಶ್, ಕೋಳಿಹಳ್ಳಿ ಗೋಪಾಲ್, ಕೆಂಪಸಿದ್ದಯ್ಯ, ಮೂಡ್ಲಪ್ಪ, ಕುಮಾರ್, ಮನು, ಕೆಂಪರಾಜು, ಚೇತನ್, ಮೆಡಿಕಲ್ ಮಂಜಣ್ಣ, ವಾಸು ಮೊದಲಾದವರು ಭಾಗವಹಿಸಿದ್ದರು.

## ಬಾಬು ಜಗಜೀವನ್ ರಾಮ್ 40ನೇ ಪುಣ್ಯಸ್ಮರಣೆ ಆಚರಣೆ

ದೇವನಹಳ್ಳಿ

ಹಸಿರು ಕ್ರಾಂತಿಯ ಹರಿಕಾರ, ಸ್ವಾತಂತ್ರ್ಯ ಹೋರಾಟಗಾರ ಹಾಗೂ ಹಿರಿಯ ರಾಜಕಾರಣಿ ಡಾ. ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆಯನ್ನು ದೇವನಹಳ್ಳಿ ತಾಲೂಕು ಆಡಳಿತ ಭವನದ ತಹಶೀಲ್ದಾರ್ ಸಭಾಂಗಣದಲ್ಲಿ ಮಂಗಳವಾರ ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಹಶೀಲ್ದಾರ್ ಎಂ. ಅನಿಲ್, ಡಾ. ಬಾಬು ಜಗಜೀವನ್ ರಾಮ್ ಅವರು ಸಾರ್ವಜನಿಕರ ಪ್ರೀತಿಗೆ ಪಾತ್ರರಾಗಿ "ಬಾಬೂಜಿ" ಎಂದೇ ಖ್ಯಾತಿ ಪಡೆದಿದ್ದರು.

ಅವರು ಸ್ವಾತಂತ್ರ್ಯ ಹೋರಾಟಗಾರ, ಸಮಾಜಸೇವಕ ಹಾಗೂ ಜನಪರ ನಾಯಕನಾಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಪಂಡಿತ ಜವಾಹರಲಾಲ್ ನೆಹರು ಅವರ ಸಚಿವ ಸಂಪುಟದಲ್ಲಿ ಪ್ರಮುಖ ಸಚಿವರಾಗಿ ಸೇವೆ ಸಲ್ಲಿಸಿದ್ದ ಅವರು, ಬಳಿಕ ಮೊರಾರ್ಜಿ ದೇಸಾಯಿ ಸರ್ಕಾರದಲ್ಲಿ ಉಪ ಪ್ರಧಾನಿಯಾಗಿ ಕಾರ್ಯನಿರ್ವಹಿಸಿದ್ದರು ಎಂದು ಹೇಳಿದರು.

ಡಿ.ಎಸ್.ಎಸ್. ರಾಜ್ಯ ಸಂಘಟನಾ ಸಂಚಾಲಕ ಹಾಗೂ ಹೋರಾಟಗಾರ ಕಾರಹಳ್ಳಿ ಶ್ರೀನಿವಾಸ್ ಮಾತನಾಡಿ, ಜಾತಿ, ಮೇಲು-ಕೀಳು ಎಂಬ ಭೇದಭಾವಗಳನ್ನು ತೊಡೆದುಹಾಕಲು ಡಾ. ಬಾಬು ಜಗಜೀವನ್ ರಾಮ್ ಅವರು ಸಾಮಾಜಿಕ ನೆಲೆಗಟ್ಟಿನಲ್ಲಿ ನಿರಂತರ ಹೋರಾಟ ನಡೆಸಿದ ಮಹಾನುಭಾವರಾಗಿದ್ದಾರೆ. ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅವರ ಸೇವೆ ಸದಾ ಸ್ಮರಣೀಯ ಎಂದು ಹೇಳಿದರು.

ಪುರಸಭೆಯ ಮಾಜಿ ಅಧ್ಯಕ್ಷ ಎಂ. ಮಮೂರ್ತಿ ಮಾತನಾಡಿ, ಸ್ವಾತಂತ್ರ್ಯ ಪೂರ್ವ ಮತ್ತು ಸ್ವಾತಂತ್ರ್ಯಾನಂತರದ ಭಾರತದ ರಾಜಕೀಯದಲ್ಲಿ ಡಾ. ಬಾಬು ಜಗಜೀವನ್ ರಾಮ್ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರ ಸರಳತೆ, ಸೌಜನ್ಯ ಹಾಗೂ ಜನಸೇವೆಯ ಮನೋಭಾವ ಎಲ್ಲರಿಗೂ ಮಾದರಿಯಾಗಿದೆ ಎಂದು ಹೇಳಿದರು.

# ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡಲು ಸರ್ಕಾರಕ್ಕೆ ಆಗ್ರಹ

ದೊಡ್ಡಬಳ್ಳಾಪುರ



ಹೈನುಗಾರಿಕೆ ಕ್ಷೇತ್ರ ತೀವ್ರ ಸಂಕಷ್ಟದಲ್ಲಿದ್ದು, ರೈತರ ನೆರವಿಗೆ ಸರ್ಕಾರ ಧಾವಿಸಬೇಕು. ರೈತರಿಂದ ಖರೀದಿಸುವ ಪ್ರತಿ ಲೀಟರ್ ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡಬೇಕು ಎಂದು ಬಮುಲ್ ನಿರ್ದೇಶಕ ಬಿ.ಸಿ. ಆನಂದ್ ಕುಮಾರ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ನಗರದ ಬಮುಲ್ ಕಚೇರಿಯಲ್ಲಿ ರೈತ ಸಂಘದ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೈನುಗಾರಿಕೆಗೆ ಅಗತ್ಯವಾದ ಹಿಂಡಿ, ಬೂಸ, ಮೇವು ಸೇರಿದಂತೆ ವಿವಿಧ ವಸ್ತುಗಳ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದೆ. ಇದರ ಜೊತೆಗೆ ರಸಗೊಬ್ಬರಗಳ ಬೆಲೆ ಹೆಚ್ಚಳ, ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ಇಂತಹ ಕಠಿಣ ಸಂದರ್ಭದಲ್ಲಿ ಸರ್ಕಾರ ರೈತರಿಂದ ಖರೀದಿಸುವ ಪ್ರತಿ ಲೀಟರ್ ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡುವ ಮೂಲಕ ರೈತರ ಬೆಂಬಲಕ್ಕೆ ನಿಲ್ಲಬೇಕು. ಈ ಸಂಬಂಧ ಜುಲೈ 9ರಂದು ತಾಲೂಕಿನ ರೈತರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಿದ್ದಾರೆ. ಈ ಹೋರಾಟ ಪಕ್ಷಾತೀತವಾಗಿ ನಡೆಯಲಿದ್ದು, ಎಲ್ಲ ಮುಖಂಡರು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಸುಮಾರು ಶೇ.80ರಷ್ಟು ಮಹಿಳೆಯರು ಹೈನುಗಾರಿಕೆಯನ್ನು ಅವಲಂಬಿಸಿ ಕುಟುಂಬ ನಿರ್ವಹಿಸುತ್ತಿದ್ದಾರೆ. ಬರದ ಛಾಯೆ ಇರುವ ಈ ಸಂದರ್ಭದಲ್ಲಿ ಸರ್ಕಾರ ತನ್ನ ಪ್ರಣಾಳಿಕೆಯಂತೆ ಹಾಲಿನ ಪ್ರೋತ್ಸಾಹ ಧನವನ್ನು ಹೆಚ್ಚಿಸಿ ಹೈನುಗಾರಿಕೆಗೆ ಉತ್ತೇಜನ ನೀಡಬೇಕು ಎಂದು ಆನಂದ್ ಕುಮಾರ್ ಹೇಳಿದರು.

ಹಿಂದಿನ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಹೆಚ್.ಡಿ. ಕುಮಾರಸ್ವಾಮಿ ಹಾಗೂ ಸಿದ್ದರಾಮಯ್ಯ ಅವರು ತಮ್ಮ ಆಡಳಿತ ಅವಧಿಯಲ್ಲಿ ಹಾಲಿಗೆ ಪ್ರೋತ್ಸಾಹ ಧನ ನೀಡುವ ಮೂಲಕ ರೈತರ ಸಂಕಷ್ಟಕ್ಕೆ ನೆರವಾಗಿದ್ದರು. ಅದೇ ರೀತಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೂಡ ಮುಂದುವರಿಸಬೇಕು. ಇಲ್ಲವಾದಲ್ಲಿ ರೈತರಿಂದ ತೀವ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಪ್ರಸನ್ನ ಮಾತನಾಡಿ, ಹೈನುಗಾರಿಕೆಗೆ ಸಂಬಂಧಿಸಿದ ಎಲ್ಲ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಬರದ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಎದುರಾಗಿದೆ. ರೈತರು ಜಾನುವಾರುಗಳನ್ನು ಸಾಕಲು ಕಷ್ಟಪಡುತ್ತಿರುವುದನ್ನು ಸರ್ಕಾರ ಗಮನಿಸಿ ತಕ್ಷಣ ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡಬೇಕು ಎಂದು ಆಗ್ರಹಿಸಿದರು.

ಮನವಿಯನ್ನು ಸರ್ಕಾರ ತಿರಸ್ಕರಿಸಿದರೆ ರೈತರಿಂದ ತೀವ್ರ ಪ್ರತಿರೋಧ ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ರೈತ ಸಂಘದ ಉಪಾಧ್ಯಕ್ಷ ಮುತ್ತೇಗೌಡ, ತಾಲೂಕು ಅಧ್ಯಕ್ಷ ಹನುಮೇಗೌಡ, ಪ್ರಧಾನ ಕಾರ್ಯದರ್ಶಿ ಸತೀಶ್, ಎಂ.ಪಿ.ಸಿ.ಎಸ್. ನೌಕರ ಸಂಘದ ಅಧ್ಯಕ್ಷ ರವೀಂದ್ರ ರವಿ, ತಿಮ್ಮಣ್ಣ ಶಿರವಾರ ರವಿ, ಹೊನ್ನಾಘಟ್ಟ ಮೂರ್ತಿ, ಮಹದೇವ್, ಸತೀಶ್, ಹನುಮಂತರಾಯಪ್ಪ ಸೇರಿದಂತೆ ಹಲವು ರೈತ ಮುಖಂಡರು ಉಪಸ್ಥಿತರಿದ್ದರು.

## ಮನೆಗಳಿಗೆ ನುಗ್ಗುತ್ತಿರುವ ಚರಂಡಿ ಕೊಳಚೆ ನೀರು: ಆಕ್ರೋಶ

ಬೇತಮಂಗಲ



ಪಟ್ಟಣದ ಟಿಪ್ಪು ನಗರದ 3ನೇ ಬ್ಲಾಕ್‌ನಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದ ಪರಿಣಾಮ ಕೊಳಚೆ ನೀರು ಮನೆಗಳಿಗೆ ನುಗ್ಗುತ್ತಿದ್ದು, ಸಮಸ್ಯೆ ಪರಿಹರಿಸಲು ಗ್ರಾಮ ಪಂಚಾಯಿತಿ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿವಾಸಿಗಳು, ಚರಂಡಿ ವ್ಯವಸ್ಥೆ ಸರಿಯಾಗಿಲ್ಲದ ಕಾರಣ ಕೊಳಚೆ ನೀರು ರಸ್ತೆಯಲ್ಲಿ ಹರಿಯುತ್ತಿದ್ದು, ಕೆಲ ಮನೆಗಳಿಗೂ ನುಗ್ಗುತ್ತಿದೆ. ಇದರಿಂದ ದುರ್ವಾಸನೆ ವ್ಯಾಪಿಸಿ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಲ್ಲದೆ, ಸಾರ್ವಜನಿಕ ಸ್ಥಳಗಳಲ್ಲಿ ಕಸದ ರಾಶಿ ಹೆಚ್ಚಾಗುತ್ತಿದ್ದು, ಗ್ರಾಮ ಪಂಚಾಯಿತಿಯಿಂದ ನಿಯಮಿತವಾಗಿ ಸ್ವಚ್ಛತಾ ಕಾರ್ಯ ನಡೆಯುತ್ತಿಲ್ಲ ಎಂದು ದೂರಿದರು. ಸಮಸ್ಯೆಯ ಬಗ್ಗೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಶಾಶ್ವತ ಪರಿಹಾರ ಕಲ್ಪಿಸಿಲ್ಲ ಎಂದು ಆರೋಪಿಸಿದರು.

ಮಳೆಗಾಲದಲ್ಲಿ ಪರಿಸ್ಥಿತಿ ಮತ್ತಷ್ಟು ಹದಗೆಡುತ್ತಿದ್ದು, ಚರಂಡಿ ನೀರು ಮನೆಗಳಿಗೆ ನುಗ್ಗುವ ಭೀತಿಯಿಂದ ನಿವಾಸಿಗಳು ಆತಂಕದಲ್ಲೇ ದಿನ ಕಳೆಯುವಂತಾಗಿದೆ ಎಂದು ತಿಳಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಮರ್ಪಕ ಚರಂಡಿ ವ್ಯವಸ್ಥೆ ಕಲ್ಪಿಸುವ ಮೂಲಕ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕು ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

## ಸಮಾಜ ಸೇವಕ ಬುಚೇಪಲ್ಲಿ ಕೃಷ್ಣಮೂರ್ತಿಗೆ ಜಿಲ್ಲಾ ಮಟ್ಟದ ಅಮೋಘ ಪ್ರಶಸ್ತಿ

ಬೇತಮಂಗಲ

ಬಹುಜನ ಸಂಘಟನೆಗಳ ಒಕ್ಕೂಟ ಮತ್ತು ಜನ ಸಮೂಹ ಸಂಸ್ಥೆಯ ಆಶ್ರಯದಲ್ಲಿ ಸನಾಸೌ ಸೇವಾ ಟ್ರಸ್ಟ್ ವತಿಯಿಂದ ಮುಳಬಾಗಿಲು ತಾಲೂಕಿನ ಅಂಬೇಡ್ಕರ್ ಭವನದಲ್ಲಿ ನಡೆದ 18ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಕೆಜಿಎಫ್ ತಾಲೂಕಿನ ಸಮಾಜ ಸೇವಕ ಬುಚೇಪಲ್ಲಿ ಕೃಷ್ಣಮೂರ್ತಿ ಅವರಿಗೆ ಜಿಲ್ಲಾ ಮಟ್ಟದ ಅಮೋಘ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಕನ್ನಡ ನಾಡು, ನುಡಿ, ನೆಲ, ಜಲ, ಕಲೆ, ಶಿಕ್ಷಣ ಹಾಗೂ ಸಂಸ್ಕೃತಿ ಕ್ಷೇತ್ರಗಳ ಅಭಿವೃದ್ಧಿಗೆ ನೀಡಿರುವ ಕೊಡುಗೆ ಹಾಗೂ ವಿಶೇಷವಾಗಿ ಸಮಾಜ ಸೇವಾ ಕ್ಷೇತ್ರದಲ್ಲಿ ಸಲ್ಲಿಸಿರುವ ಅನುಪಮ ಸೇವೆಯನ್ನು ಗುರುತಿಸಿ ಅವರಿಗೆ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಬುಚೇಪಲ್ಲಿ ಕೃಷ್ಣಮೂರ್ತಿ, ಈ ಗೌರವವು ಸಮಾಜಮುಖಿ ಸೇವೆಯನ್ನು ಇನ್ನಷ್ಟು ಜವಾಬ್ದಾರಿಯಿಂದ ಮುಂದುವರಿಸಲು ಪ್ರೇರಣೆ ನೀಡಿದೆ ಎಂದು ಹೇಳಿದರು. ಸಮಾಜದ ಎಲ್ಲ ವರ್ಗಗಳ ಅಭಿವೃದ್ಧಿಗಾಗಿ ನಿರಂತರವಾಗಿ ಸೇವಾ ಕಾರ್ಯಗಳನ್ನು ಕೈಗೊಳ್ಳುವುದಾಗಿ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಕೆಜಿಎಫ್ ತಾಲೂಕಿನ ಮುಖಂಡರಾದ ರಾಧಾಕೃಷ್ಣ, ಕೆ.ವಿ. ಸುಬ್ರಮಣಿ, ಶಿವ, ತಿಪ್ಪಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮಕ್ಕಳೊಂದಿಗೆ ಬಿಸಿ ಊಟ ಸವಿದ ಜಿಲ್ಲಾ ಪಂಚಾಯಿತಿ ಸಿಇಒ

ತುಮಕೂರು




ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರ ಜೊತೆಗೆ ರುಚಿ ಹಾಗೂ ಶುಚಿಯಾದ ಬಿಸಿ ಊಟವನ್ನು ಒದಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ. ಅವರು ಶಿಕ್ಷಕರಿಗೆ ಸೂಚಿಸಿದರು.

ತುಮಕೂರು ತಾಲೂಕಿನ ಅರೆಗುಜ್ಜನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕದರನಹಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಪಾಠಶಾಲೆಗೆ ಭೇಟಿ ನೀಡಿದ ಅವರು, ಮಕ್ಕಳೊಂದಿಗೆ ಬಿಸಿ ಊಟ ಸೇವಿಸಿ ಮಾತನಾಡಿದರು.

ಮಕ್ಕಳಿಗೆ ಉತ್ತಮ ಶಿಕ್ಷಣ ಎಷ್ಟು ಮುಖ್ಯವೋ, ಅದೇ ರೀತಿ ಪೌಷ್ಟಿಕ, ಶುಚಿ ಮತ್ತು ರುಚಿಯಾದ ಆಹಾರವೂ ಅಷ್ಟೇ ಮುಖ್ಯವಾಗಿದೆ. ಹೆಚ್ಚು ತರಕಾರಿಗಳನ್ನು ಬಳಸಿ ಪೌಷ್ಟಿಕ ಆಹಾರ ನೀಡಬೇಕು. ಪ್ರತಿದಿನ ವೇಳಾಪಟ್ಟಿಯಂತೆ ನಿಗದಿಪಡಿಸಿರುವ ಆಹಾರವನ್ನೇ ನೀಡಬೇಕು. ತಪ್ಪದೇ ಮೊಟ್ಟೆ ಮತ್ತು ಬಾಳೆಹಣ್ಣನ್ನು ವಿತರಿಸಬೇಕು ಎಂದು ಸೂಚಿಸಿದರು.

ಮಕ್ಕಳಿಗೆ ಊಟ ನೀಡುವ ಮೊದಲು ಶಿಕ್ಷಕರು ಆಹಾರವನ್ನು ಸೇವಿಸಿ ಗುಣಮಟ್ಟವನ್ನು ಪರಿಶೀಲಿಸಿದ ನಂತರವೇ ಮಕ್ಕಳಿಗೆ ನೀಡಬೇಕು ಎಂದು ತಿಳಿಸಿದರು. ಶಾಲಾ ಆವರಣದಲ್ಲಿ ಉತ್ತಮ ಪರಿಸರವನ್ನು ಕಾಪಾಡಿಕೊಳ್ಳುವಂತೆ ಶಿಕ್ಷಕರಿಗೆ ಸೂಚನೆ ನೀಡಿದರು.

ಇದೇ ವೇಳೆ ಕದರನಹಳ್ಳಿ ಗ್ರಾಮದಲ್ಲಿ ಎಸ್‌ಐಆರ್ ಎನ್ಯೂಮರೇಶನ್ ನಮೂನೆಗಳನ್ನು ವಿತರಿಸಿದರು. ಮನೆ-ಮನೆಗೆ ನಮೂನೆಗಳನ್ನು ತಲುಪಿಸಿ, ಭರ್ತಿ ಮಾಡಿದ ನಮೂನೆಗಳನ್ನು ಸಂಗ್ರಹಿಸುವಂತೆ ಬಿಎಲ್‌ಒಗಳಿಗೆ ಸೂಚನೆ ನೀಡಿದರು.

ಬಳಿಕ ತುಮಕೂರು ತಾಲೂಕಿನ ಊರ್ಡಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗುಡ್ಡಕೆರೆ ಬಳಿ ಪ್ರಗತಿಯಲ್ಲಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ನೀರು ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ನಾರಾಯಣ, ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೃಷ್ಣಕಾಂತ್ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಉಪಸ್ಥಿತರಿದ್ದರು.

## ಅಡಿಕೆ ಸಾಗಣೆ ವಾಹನಗಳ ಬಿಡುಗಡೆ: ಪ್ರಲ್ಹಾದ್ ಜೋಶಿ ಮಧ್ಯಸ್ಥಿಕೆಗೆ ಯಶಸ್ಸು

ಬೆಂಗಳೂರು

ಕರ್ನಾಟಕದ ಅಡಿಕೆ ಬೆಳೆಗಾರರು ಹಾಗೂ ವರ್ತಕರ ಹಿತರಕ್ಷಣೆಗೆ ಸಂಬಂಧಿಸಿದಂತೆ ಕೇಂದ್ರ ಆಹಾರ, ಗ್ರಾಹಕ ವ್ಯವಹಾರಗಳು ಮತ್ತು ಸಾರ್ವಜನಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಅವರು ಮಹತ್ವದ ಕ್ರಮ ಕೈಗೊಂಡಿದ್ದಾರೆ.

ಮಹಾರಾಷ್ಟ್ರದಲ್ಲಿ ಪ್ರಯೋಗಾಲಯ ಪರೀಕ್ಷೆಯ ನೆಪದಲ್ಲಿ ಹಲವು ದಿನಗಳಿಂದ ತಡೆಹಿಡಿಯಲಾಗಿದ್ದ ಕರ್ನಾಟಕದ ಅಡಿಕೆ ಸರಕು ಸಾಗಣೆ ವಾಹನಗಳ ತುರ್ತು ಬಿಡುಗಡೆಗಾಗಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೆ ಪ್ರಲ್ಹಾದ್ ಜೋಶಿ ನಡೆಸಿದ ಮಾತುಕತೆ ಯಶಸ್ವಿಯಾಗಿದೆ.

ಈ ಸಭೆಯಲ್ಲಿ ಕರ್ನಾಟಕದ ಸಂಸದರು ಹಾಗೂ ಶಾಸಕರ ಪ್ರಮುಖ ನಿಯೋಗವೂ ಭಾಗವಹಿಸಿತ್ತು.

# ವಕೀಲರ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ

ತುಮಕೂರು



ನಗರದ ನ್ಯಾಯಾಲಯ ಆವರಣದಲ್ಲಿ ಸೋಮವಾರ ಹಿರಿಯ ವಕೀಲರಾದ ಎಂ.ಸಿ. ರವೀಶ್ ಅವರ ಮೇಲೆ ಬಿ.ಎ. ನಿರಂಜನ್ ಎಂಬುವವರು ಹಲ್ಲೆ ನಡೆಸಿದ್ದನ್ನು ಖಂಡಿಸಿ ಜಿಲ್ಲಾ ವಕೀಲರ ಸಂಘದ ನೇತೃತ್ವದಲ್ಲಿ ವಕೀಲರು ಮಂಗಳವಾರ ಪ್ರತಿಭಟನೆ ನಡೆಸಿ ನ್ಯಾಯಾಲಯ ಕಲಾಪಗಳಲ್ಲಿ ಭಾಗವಹಿಸದೆ ಕಲಾಪಗಳಿಂದ ದೂರ ಉಳಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಹಿರೇಹಳ್ಳಿ ಮಹೇಶ್, ಕರ್ತವ್ಯದ ಮೇಲಿದ್ದ ವಕೀಲರ ಮೇಲೆ ನ್ಯಾಯಾಲಯದ ಆವರಣದಲ್ಲಿ ಹಲ್ಲೆ ನಡೆಸಿರುವುದು ಖಂಡನೀಯ. ಆರೋಪಿಯನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ವಕೀಲರ ಮೇಲೆ ಹಲ್ಲೆ ನಡೆಸಿದ ನಿರಂಜನ್ ಪರವಾಗಿ ಯಾವ ವಕೀಲರೂ ವಕಾಲತ್ತು ವಹಿಸಬಾರದು ಎಂದು ಸಂಘದಲ್ಲಿ ನಿರ್ಣಯ ಮಾಡಲಾಗಿದೆ ಎಂದು ಹೇಳಿದ ಹಿರೇಹಳ್ಳಿ ಮಹೇಶ್, ವಕೀಲರ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚಾಗುತ್ತಿವೆ. ಇದಕ್ಕೆ ಕಡಿವಾಣ ಹಾಕಿ ವಕೀಲರು ನಿರ್ಭೀತಿಯಿಂದ ಕರ್ತವ್ಯ ನಿರ್ವಹಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದರು.

ಇದೇ 6ರಂದು ಸೋಮವಾರ ಮಧ್ಯಾಹ್ನ 2-02ರ ಸಮಯದಲ್ಲಿ ನಗರದ 2ನೇ ಅಧಿಕ ಸಿವಿಲ್ ನ್ಯಾಯಾಲಯ ಹಿರಿಯ ಶ್ರೇಣಿ ನ್ಯಾಯಾಲಯದ ಒಳಗಿನಿಂದ ಕಲಾಪಗಳನ್ನು ಮುಗಿಸಿಕೊಂಡು ಹೊರಬಂದಂತಹ ಸಂದರ್ಭದಲ್ಲಿ ವಕೀಲ ಎಂ.ಸಿ. ರವೀಶ್ ಅವರ ಮೇಲೆ ಓ.ಎಸ್.359/2015ರ ಪ್ರಕರಣದ 2ನೇ ಪ್ರತಿವಾದಿ ತುಮಕೂರು ತಾಲ್ಲೂಕು ಕೋರಾ ಹೋಬಳಿ ಬ್ರಹ್ಮಸಂದ್ರದ ಬಿ.ಎ. ನಿರಂಜನ್ ಎಂಬಾತ ತನ್ನ ಎದುರಿಗೆ ಏಕೆ ಕೇಸನ್ನು ತೆಗೆದುಕೊಂಡಿದ್ದೀಯಾ ಎಂದು ವಕೀಲರಾದ ಎಂ.ಸಿ. ರವೀಶ್ ಅವರನ್ನು ಅಶ್ಲೀಲ ಮತ್ತು ಅವಾಚ್ಯ ಶಬ್ದಗಳಿಂದ ಸಾರ್ವಜನಿಕವಾಗಿ ಬೈದು ಅವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಎಡ ಮುಖ ತುಟಿ, ಕೆನ್ನೆಮೇಲೆ ರಕ್ತಗಾಯಗಳಾಗುವಂತೆ ಕೈಯಲ್ಲಿ ಹಿಡಿದುಕೊಂಡಿದ್ದ ಕಲ್ಲಿನಿಂದ ಜಜ್ಜಿರುತ್ತಾನೆ. ಕಾಲಿನಿಂದ ಒದ್ದು ಕುತ್ತಿಗೆ ಮೇಲೆ ಕಾಲಿಟ್ಟು ಸಾಯಿಸಲು ಪ್ರಯತ್ನಿಸಿರುತ್ತಾನೆ. ಈ ಸಮಯದಲ್ಲಿ ಇತರೆ ವಕೀಲರು ಬಿಡಿಸಿರುತ್ತಾರೆ. ತಕ್ಷಣ ಆತನು ಸ್ಥಳದಿಂದ ಪರಾರಿಯಾಗಿರುತ್ತಾನೆ. ಆರೋಪಿಯನ್ನು ಕೂಡಲೇ ಬಂಧಿಸಬೇಕು ಎಂದು ಹಿರೇಹಳ್ಳಿ ಮಹೇಶ್ ಒತ್ತಾಯಿಸಿದರು.

ಹಲ್ಲೆ ಸಂಬಂಧ ವಕೀಲ ಎಂ.ಸಿ. ರವೀಶ್ ಅವರು ನಗರ ಠಾಣೆಗೆ ದೂರು ನೀಡಿ, ಹಲ್ಲೆ ಮಾಡಿದ ನಿರಂಜನ್‌ನಿಂದ ನನಗೆ ಪ್ರಾಣ ಭೀತಿ ಇರುತ್ತದೆ.

ನನಗೆ ಜೀವ ಬೆದರಿಕೆ ಹಾಕಿ, ನನ್ನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಆತನ ಮೇಲೆ ಕಾನೂನು ಕ್ರಮ ಜರುಗಿಸಿ ನನಗೆ ರಕ್ಷಣೆ ನೀಡಬೇಕೆಂದು ಪೊಲೀಸರಿಗೆ ಮನವಿ ಮಾಡಿದ್ದಾರೆ.

ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ರವಿಗೌಡ, ಖಜಾಂಚಿ ಸಿಂಧೂ, ಕಾರ್ಯಕಾರಿ ಮಂಡಳಿ ಸದಸ್ಯರಾದ ಡಿ.ಎ. ಜಗದೀಶ್, ಸುರೇಶ್, ಕೆ.ವಿ. ಶ್ರೀನಿವಾಸಮೂರ್ತಿ, ವಿ.ಕೆ. ಶ್ರೀನಿವಾಸಮೂರ್ತಿ, ಪದ್ಮಶ್ರೀ, ಸೇವಾಪ್ರಿಯ ಹಾಗೂ ನೂರಾರು ವಕೀಲರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಶಿಕ್ಷಣದ ಜೊತೆಗೆ ಸಂಸ್ಕಾರ ಮಕ್ಕಳ ಬದುಕಿಗೆ ದಾರಿದೀಪ: ಶ್ರೀಮಂಗಳನಾಥಸ್ವಾಮೀಜಿ

ಶಿಡ್ಲಘಟ್ಟ



ನಾವು ಪಡೆಯುವ ಶಿಕ್ಷಣ, ಜ್ಞಾನ ಮತ್ತು ಸಂಸ್ಕಾರವು ಬದುಕನ್ನು ಸಮಾಜಮುಖಿಯಾಗಿ ರೂಪಿಸುತ್ತದೆ. ಇದರಿಂದ ಸಮಾಜದಲ್ಲಿ ಗೌರವ, ಪ್ರೀತಿ ಮತ್ತು ಅಕ್ಕರೆಯ ಸ್ಥಾನಮಾನ ದೊರೆಯುತ್ತದೆ ಎಂದು ಆದಿಚುಂಚನಗಿರಿ ಮಹಾಪೀಠದ ಚಿಕ್ಕಬಳ್ಳಾಪುರ ಶಾಖೆಯ ಶ್ರೀಮಂಗಳನಾಥಸ್ವಾಮೀಜಿ ತಿಳಿಸಿದರು.

ತಾಲೂಕಿನ ಹಂಡಿಗನಾಳದ ಕೆವಿ ಭವನದಲ್ಲಿ ಸೋಮವಾರ ನಡೆದ ಬಿಜಿಎಸ್ ಶಾಲೆಯ ಪೂರ್ವ ಪ್ರಾಥಮಿಕ ಶಾಲಾ ಮಕ್ಕಳ ಜ್ಞಾನಾಂಕುರ ಅಕ್ಷರಾಭ್ಯಾಸ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಮಕ್ಕಳು ಶಾಲೆ-ಕಾಲೇಜುಗಳಲ್ಲಿ ಕಲಿಯುವುದಕ್ಕಿಂತಲೂ ಮನೆಯಲ್ಲಿ ಮತ್ತು ಸುತ್ತಮುತ್ತಲಿನ ಪರಿಸರದಿಂದ ಹೆಚ್ಚು ಕಲಿಯುತ್ತಾರೆ ಎಂದರು.

ತಾಯಿ ಜೊತೆ ಮಕ್ಕಳು ಕಳೆಯುವಷ್ಟು ಸಮಯ ಮತ್ತಾರೊಂದಿಗೂ ಕಳೆಯುವುದಿಲ್ಲ. ಹೀಗಾಗಿ ಮಗುವಿನ ಮೊದಲ ಪಾಠಶಾಲೆ ಮನೆ ಆಗಿರುವುದರಿಂದ ಪೋಷಕರು ಮಕ್ಕಳಿಗೆ ಮಾದರಿಯಾದ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಮಕ್ಕಳು ಹೇಳಿಕೊಟ್ಟ ಮಾತುಗಳಿಗಿಂತ ನೋಡಿದ ವಿಚಾರಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಕಲಿಯುತ್ತಾರೆ. ಆದ್ದರಿಂದ ತಂದೆ-ತಾಯಿ, ಅಣ್ಣ-ತಮ್ಮ, ಅಕ್ಕ-ತಂಗಿಯರು ಮಕ್ಕಳ ಮುಂದೆ ಉತ್ತಮ ನಡೆ-ನುಡಿಯನ್ನು ಪ್ರದರ್ಶಿಸಬೇಕು ಎಂದು ಮನವಿ ಮಾಡಿದರು.

ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ನೀಡುವ ಮೂಲಕ ಅವರ ಭವಿಷ್ಯವನ್ನು ರೂಪಿಸುವ ಜವಾಬ್ದಾರಿ ಪೋಷಕರ ಮೇಲಿದೆ ಎಂದು ಶ್ರೀಗಳು ಹೇಳಿದರು.

ತಹಶೀಲ್ದಾರ್ ಎನ್. ಗಗನಸಿಂಧು ಮಾತನಾಡಿ, ಯಾವ ಮಗು ಮುಂದೆ ಯಾವ ಸಾಧನೆ ಮಾಡಲಿದೆ ಎಂಬುದನ್ನು ಯಾರೂ ಊಹಿಸಲು ಸಾಧ್ಯವಿಲ್ಲ. ಆದರೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಅವರ ಪ್ರತಿಭೆಗೆ ಅನುಗುಣವಾಗಿ ಅವಕಾಶಗಳನ್ನು ಕಲ್ಪಿಸುವ ಕೆಲಸವನ್ನು ಸರ್ಕಾರ, ಸಂಘ-ಸಂಸ್ಥೆಗಳು ಮತ್ತು ಸಮುದಾಯ ಮಾಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳ ಪೋಷಕರು ಪಂಚೆ-ಶರ್ಟ್ ಹಾಗೂ ಸೀರೆ ಧರಿಸಿ ಸಾಂಪ್ರದಾಯಿಕ ಉಡುಗೆಯಲ್ಲಿ ಭಾಗವಹಿಸಿದ್ದರು. ಮಕ್ಕಳಿಗೆ ಓಂಕಾರ ಹೇಳಿಕೊಟ್ಟು ಅಕ್ಷರಾಭ್ಯಾಸ ಮಾಡಿಸಲಾಯಿತು. ಮಠದ ಭಕ್ತರು ಅಕ್ಕಿ, ಬೇಳೆಯನ್ನು ಕಾಣಿಕೆಯಾಗಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಆಡಳಿತಾಧಿಕಾರಿ ಡಾ. ಎನ್. ಶಿವರಾಮರೆಡ್ಡಿ, ಬಿಜಿಎಸ್ ಶಾಲೆಯ ಪ್ರಾಂಶುಪಾಲ ಕೆ. ಮಹದೇವ್, ಕೆವಿ ಟ್ರಸ್ಟ್‌ನ ಉಪಾಧ್ಯಕ್ಷ ಬಿಳಿಶಿವಾಲೆ ರವಿ, ಟ್ರಸ್ಟ್‌ನ ಖಜಾಂಚಿ ಮುನಿಶಾಮಿಗೌಡ, ಗೊರಮಡಗು ರಾಜಣ್ಣ, ಶೀಗೆಹಳ್ಳಿ ಚಂದ್ರಶೇಖರ್, ಒಕ್ಕಲಿಗರ ಯುವ ಸೇನೆಯ ಜೆ.ಎಸ್. ವೆಂಕಟಸ್ವಾಮಿ, ಹಂಡಿಗನಾಳ ನಾರಾಯಣಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

10/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತದಾರರನ್ನು ಹುಡುಕುವುದೇ ಒಂದು ಸಾಹಸ

ಬಂಗಾರಪೇಟೆ

ಪ್ರಜಾಪ್ರಭುತ್ವದ ಯಶಸ್ಸಿಗೆ ನಿಖರವಾದ ಮತದಾರರ ಪಟ್ಟಿಯೇ ಭದ್ರ ಅಡಿಪಾಯ. ಅರ್ಹ ನಾಗರಿಕರ ಹೆಸರುಗಳನ್ನು ಸೇರ್ಪಡೆ ಮಾಡುವುದು, ವಿಳಾಸ ಹಾಗೂ ಇತರೆ ವಿವರಗಳನ್ನು ತಿದ್ದುಪಡಿ ಮಾಡುವುದು, ಸ್ಥಳಾಂತರಗೊಂಡವರು ಅಥವಾ ಮೃತಪಟ್ಟವರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವುದು ಚುನಾವಣಾ ಆಯೋಗದ ಅತ್ಯಂತ ಮಹತ್ವದ ಕಾರ್ಯವಾಗಿದೆ. ಆದರೆ ಈ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸುವಲ್ಲಿ ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಸರ್ಕಾರಿ ಸಿಬ್ಬಂದಿ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ.

ಮತದಾರರ ಪಟ್ಟಿಗೆ ಸಂಬಂಧಿಸಿದ ಅರ್ಜಿಗಳನ್ನು ಮನೆಮನೆಗೆ ತಲುಪಿಸುವುದು, ಫಲಾನುಭವಿಗಳಿಂದ ಅವುಗಳನ್ನು ಭರ್ತಿ ಮಾಡಿಸಿಕೊಳ್ಳುವುದು, ದಾಖಲೆಗಳನ್ನು ಪರಿಶೀಲಿಸಿ ಮಾಹಿತಿಯನ್ನು ಸಂಗ್ರಹಿಸುವುದು ಕಾಗದದ ಮೇಲೆ ಸರಳವಾಗಿ ಕಾಣುವ ಕೆಲಸವಾದರೂ, ನೆಲಮಟ್ಟದಲ್ಲಿ ಅದು ಅತ್ಯಂತ ಶ್ರಮದಾಯಕ ಪ್ರಕ್ರಿಯೆಯಾಗಿದೆ. ಈಗಾಗಲೇ ವಿವಿಧ ಇಲಾಖೆಗಳ ಕರ್ತವ್ಯಗಳನ್ನು ನಿರ್ವಹಿಸುತ್ತಿರುವ ಬೂತ್ ಮಟ್ಟದ ಅಧಿಕಾರಿಗಳಿಗೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವೂ ಹೆಚ್ಚುವರಿ ಹೊಣೆಗಾರಿಕೆಯಾಗಿದ್ದು, ಸಮಯ ಹಾಗೂ ಮಾನವ ಸಂಪನ್ಮೂಲದ ಕೊರತೆ ಅವರ ಕಾರ್ಯಕ್ಕೆ ಅಡ್ಡಿಯಾಗುತ್ತಿದೆ.



ಬಂಗಾರಪೇಟೆ ಕ್ಷೇತ್ರದ ಗ್ರಾಮೀಣ ಭಾಗಗಳಲ್ಲಿ ಅನೇಕ ಮನೆಗಳು ಒಂದಕ್ಕೊಂದು ದೂರದಲ್ಲಿವೆ. ಉದ್ಯೋಗ, ಶಿಕ್ಷಣ ಹಾಗೂ ಇತರೆ ಕಾರಣಗಳಿಂದ ಸಾಕಷ್ಟು ಕುಟುಂಬಗಳು ಬೇರೆ ಊರುಗಳಿಗೆ ಸ್ಥಳಾಂತರಗೊಂಡಿವೆ. ಕೆಲವರು ನಗರಗಳಲ್ಲಿ ನೆಲೆಸಿದ್ದರೂ ಮತದಾರರ ಪಟ್ಟಿಯಲ್ಲಿ ಗ್ರಾಮೀಣ ವಿಳಾಸವನ್ನೇ ಉಳಿಸಿಕೊಂಡಿದ್ದಾರೆ. ಹಲವು ಮನೆಗಳು ಸದಾ ಬಾಗಿಲು ಮುಚ್ಚಿರುವ ಕಾರಣ ಸಂಬಂಧಪಟ್ಟ ಮತದಾರರನ್ನು ಪತ್ತೆಹಚ್ಚುವುದು ಸಿಬ್ಬಂದಿಗೆ ದೊಡ್ಡ ಸವಾಲಾಗಿದೆ. ಒಂದೇ ಮನೆಗೆ ಹಲವು ಬಾರಿ ಭೇಟಿ ನೀಡಿದರೂ ನಿವಾಸಿಗಳು ಸಿಗದೇ ಕೆಲಸ ವಿಳಂಬವಾಗುತ್ತಿರುವ ಉದಾಹರಣೆಗಳು ಸಾಮಾನ್ಯವಾಗಿವೆ.

ಈ ಪರಿಸ್ಥಿತಿಯಲ್ಲಿ ಸಿಬ್ಬಂದಿಯ ಸಮಸ್ಯೆಗಳಿಗೆ ಸ್ಪಂದಿಸುವವರು ಯಾರು ಎಂಬ ಪ್ರಶ್ನೆ ಸಹಜವಾಗಿ ಮೂಡುತ್ತದೆ. ಚುನಾವಣೆ ಪ್ರಕ್ರಿಯೆ ಪಾರದರ್ಶಕ ಹಾಗೂ ವಿಶ್ವಾಸಾರ್ಹವಾಗಿ ನಡೆಯಬೇಕಾದರೆ ಸಿಬ್ಬಂದಿಗೆ ಅಗತ್ಯ ಸೌಲಭ್ಯ, ಸಮರ್ಪಕ ತರಬೇತಿ, ಹೆಚ್ಚುವರಿ ಸಿಬ್ಬಂದಿ ಹಾಗೂ ತಾಂತ್ರಿಕ ನೆರವು ಒದಗಿಸುವುದು ಅತ್ಯಗತ್ಯವಾಗಿದೆ. ಇಲ್ಲದಿದ್ದರೆ ನಿಖರವಾದ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಗುರಿ ಸಾಧಿಸುವುದು ಕಷ್ಟಕರವಾಗಲಿದೆ.

ಇದರೊಂದಿಗೆ ಸಾರ್ವಜನಿಕರ ಸಹಕಾರವೂ ಸಮಾನವಾಗಿ ಅಗತ್ಯವಾಗಿದೆ. ಮನೆಗೆ ಬರುವ ಅಧಿಕಾರಿಗಳಿಗೆ ಅಗತ್ಯ ದಾಖಲೆಗಳನ್ನು ಸಮಯಕ್ಕೆ ನೀಡುವುದು, ಸರಿಯಾದ ಮಾಹಿತಿಯನ್ನು ಒದಗಿಸುವುದು ಹಾಗೂ ಅರ್ಜಿಗಳನ್ನು ಸಮರ್ಪಕವಾಗಿ ಭರ್ತಿ ಮಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಅಥವಾ ತಿದ್ದುಪಡಿ ಮಾಡಿಸಿಕೊಳ್ಳುವುದು ಕೇವಲ ವೈಯಕ್ತಿಕ ಹಕ್ಕಲ್ಲ; ಅದು ಪ್ರಜಾಪ್ರಭುತ್ವವನ್ನು ಬಲಪಡಿಸುವ ನಾಗರಿಕರ ಕರ್ತವ್ಯವೂ ಹೌದು.

ಬಂಗಾರಪೇಟೆ ಕ್ಷೇತ್ರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಬೇಕಾದರೆ ಚುನಾವಣಾ ಅಧಿಕಾರಿಗಳು, ಬೂತ್ ಮಟ್ಟದ ಸಿಬ್ಬಂದಿ ಹಾಗೂ ಸಾರ್ವಜನಿಕರು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಬೇಕು. ಸಿಬ್ಬಂದಿಯ ಶ್ರಮವನ್ನು ಗುರುತಿಸಿ ಅವರಿಗೆ ಅಗತ್ಯ ಬೆಂಬಲ ಮತ್ತು ಸೌಲಭ್ಯ ಒದಗಿಸಿದಾಗ ಮಾತ್ರ ನಿಖರ ಹಾಗೂ ದೋಷರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಸಾಧ್ಯವಾಗುತ್ತದೆ. ಮತದಾರರನ್ನು ಹುಡುಕಿ ಅರ್ಜಿಗಳನ್ನು ವಿತರಿಸಿ ಸಂಗ್ರಹಿಸುವ ಕೆಲಸ ನಿಜಕ್ಕೂ ಒಂದು ಸಾಹಸವೇ ಸರಿ. ಆದರೆ ಇದೇ ಸಾಹಸ ಬಲಿಷ್ಠ ಮತ್ತು ಪಾರದರ್ಶಕ ಪ್ರಜಾಪ್ರಭುತ್ವದ ನಿರ್ಮಾಣಕ್ಕೆ ಅತ್ಯಂತ ಮಹತ್ವದ ಸೇವೆಯಾಗಿದೆ.

## ಮಾಜಿ ಪ್ರಧಾನಮಂತ್ರಿ ಡಾ. ಬಾಬು ಜಗಜೀವನ ರಾಂ 40ನೇ ಪುಣ್ಯಸ್ಮರಣೆ ಆಚರಣೆ



ಬೆಂಗಳೂರು ಗ್ರಾಮಾಂತರ

ಭಾರತದಲ್ಲಿ ಸಾಮಾಜಿಕ ಸಮಾನತೆ ಸ್ಥಾಪಿಸಲು ಶ್ರಮಿಸಿದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಕೊಡುಗೆಗಳು ಸದಾ ಸ್ಮರಣೀಯವಾಗಿವೆ. ಬಾಬೂಜೀ ಅವರ ಜೀವನ ನಮಗೆಲ್ಲರಿಗೂ ಮಾರ್ಗದರ್ಶಕ ಹಾಗೂ ಆದರ್ಶಪ್ರಾಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ. ಬಾಬು ಜಗಜೀವನ ರಾಂ ಅವರ 40ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಭಾರತದ ಉಪ ಪ್ರಧಾನಿಯಾಗಿ, ಸಾರಿಗೆ, ರೈಲ್ವೆ, ಕಾರ್ಮಿಕ ಮತ್ತು ಪುನರ್ವಸತಿ, ಆಹಾರ, ಕೃಷಿ, ಸಹಕಾರ, ನೀರಾವರಿ ಸೇರಿದಂತೆ ಹಲವು ಪ್ರಮುಖ ಖಾತೆಗಳನ್ನು ಸಮರ್ಥವಾಗಿ ನಿರ್ವಹಿಸಿದ ಬಾಬೂಜೀ ಅವರು, ಭಾರತ ಸಂವಿಧಾನ ರಚನಾ ಸಮಿತಿಯ ಸದಸ್ಯರಾಗಿಯೂ ಮಹತ್ವದ ಸೇವೆ ಸಲ್ಲಿಸಿದ ಮೇರು ನಾಯಕರಾಗಿದ್ದರು ಎಂದು ಹೇಳಿದರು.

ಬಾಬು ಜಗಜೀವನ ರಾಂ ಅವರ ಆಶಯದಂತೆ ದೇಶದಲ್ಲಿ ಜಾತಿ-ಭೇದಗಳನ್ನು ತೊರೆದು ಎಲ್ಲರೂ ಸಮಾನತೆಯಿಂದ ಬದುಕುವಂತಾಗಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಟಿ.ಎಲ್.ಎಸ್. ಪ್ರೇಮಾ, ಸಮಾಜದ ಮುಖಂಡರಾದ ರವಿಕಲಾ ಹಾಗೂ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೊಲೆ ಪ್ರಕರಣ: ಆರೋಪಿಗೆ ಜೀವಾವಧಿ ಶಿಕ್ಷೆ

ಬೆಂಗಳೂರು ಗ್ರಾಮಾಂತರ

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2019ರಲ್ಲಿ ನಡೆದ ಕೊಲೆ ಪ್ರಕರಣದಲ್ಲಿ ಆರೋಪಿಯ ವಿರುದ್ಧದ ಆರೋಪಗಳು ಸಾಬೀತಾದ ಹಿನ್ನೆಲೆಯಲ್ಲಿ ದೊಡ್ಡಬಳ್ಳಾಪುರದ ನಾಲ್ಕನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ಹಾಗೂ ರೂ.20 ಸಾವಿರ ದಂಡ ವಿಧಿಸಿ ತೀರ್ಪು ನೀಡಿದೆ.

2019ರ ಜನವರಿ 7ರಂದು ಹಣಕಾಸಿನ ವ್ಯವಹಾರಕ್ಕೆ ಸಂಬಂಧಿಸಿದ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ದೇವರಾಜನಗರ ನಿವಾಸಿ ಎನ್. ಗಂಗಾಧರ ಅಲಿಯಾಸ್ ದಾಸ್ ಅವರನ್ನು ಅದೇ ಪ್ರದೇಶದ ನಿವಾಸಿ ಆನಂದ ಎಸ್. ಅಲಿಯಾಸ್ ಕಬಾಬ್ ಆನಂದ ಕೊಲೆ ಮಾಡಿದ್ದನು.

ಪ್ರಕರಣದ ತನಿಖೆ ಪ್ರಕಾರ, ಗಂಗಾಧರ ತನ್ನ ಸ್ನೇಹಿತ ಪವನ್ ಕುಮಾರ್ ಅಲಿಯಾಸ್ ಪವನ್ (ಬೆಂಕಿ) ಜತೆ ಸೇರಿ ಆನಂದನ ಮೇಲೆ ಹಲ್ಲೆ ನಡೆಸುವ ಉದ್ದೇಶದಿಂದ ಆತನನ್ನು ದೊಡ್ಡಬಳ್ಳಾಪುರದ ಕರೇನಹಳ್ಳಿ ಗ್ರಾಮದ 9ನೇ ಕ್ರಾಸ್ ಸಮೀಪದ ನಿರ್ಜನ ಪ್ರದೇಶಕ್ಕೆ ಕರೆಸಿಕೊಂಡಿದ್ದರು.

ಈ ವೇಳೆ ಗಂಗಾಧರ ಮಚ್ಚಿನಿಂದ ಹಲ್ಲೆಗೆ ಮುಂದಾದಾಗ, ಆರೋಪಿ ಆನಂದ ಗಂಗಾಧರ ಕೈಯಲ್ಲಿದ್ದ ಮಚ್ಚನ್ನು ಕಸಿದುಕೊಂಡು ಅದೇ ಆಯುಧದಿಂದ ಹಲ್ಲೆ ನಡೆಸಿ ಕೊಲೆ ಮಾಡಿದ್ದಾನೆ ಎಂದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಘಟನೆಯ ವೇಳೆ ಗಲಾಟೆ ಬಿಡಿಸಲು ಮುಂದಾದ ಪವನ್ ಕುಮಾರ್ ಮೇಲೂ ಆನಂದ ಹಲ್ಲೆ ನಡೆಸಿ ಕೊಲೆ ಯತ್ನ ಮಾಡಿರುವುದು ತನಿಖೆಯಲ್ಲಿ ದೃಢಪಟ್ಟಿತ್ತು.

ಪ್ರಕರಣದ ತನಿಖೆಯನ್ನು ನಡೆಸಿದ್ದ ಅಂದಿನ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದರಾಜು ಜಿ. ಅವರು ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ಪೂರ್ಣಗೊಂಡ ಬಳಿಕ ಆರೋಪಿಯ ವಿರುದ್ಧದ ಸಾಕ್ಷ್ಯಾಧಾರಗಳು ದೃಢಪಟ್ಟ ಹಿನ್ನೆಲೆಯಲ್ಲಿ ದೊಡ್ಡಬಳ್ಳಾಪುರದ ನಾಲ್ಕನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆರೋಪಿ ಆನಂದನಿಗೆ ಜೀವಾವಧಿ ಶಿಕ್ಷೆ ಹಾಗೂ ರೂ.20,000 ದಂಡ ವಿಧಿಸಿ ತೀರ್ಪು ಪ್ರಕಟಿಸಿದೆ.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು

ಕೋಲಾರ

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ನಗರದಲ್ಲಿ ಬೃಹತ್ ಬೈಕ್ ರ್‍ಯಾಲಿಯನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಮಹಿಳಾ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಈ ಜಾಗೃತಿ ಜಾಥಾವನ್ನು ಆಯೋಜಿಸಲಾಗಿತ್ತು.

ನಗರದ ಪ್ರವಾಸಿ ಮಂದಿರದಿಂದ ಆರಂಭವಾದ ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

ಅರ್ಹ ಮತದಾರರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಹಾಗೂ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.




ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಈ ರ್‍ಯಾಲಿಯಲ್ಲಿ ಸುಮಾರು 200ಕ್ಕೂ ಹೆಚ್ಚು ದ್ವಿಚಕ್ರ ವಾಹನಗಳಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡು ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

ಈ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ರವಿಚಂದ್ರ, ಸಹಾಯಕ ಕಾರ್ಯದರ್ಶಿಗಳಾದ ವೆಂಕಟಾಚಲಪತಿ, ಕೃಷ್ಣಮೂರ್ತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಮುನಿರಾಜಪ್ಪ, ಜಿಲ್ಲಾ ನಿರೂಪಣಾಧಿಕಾರಿ ವಿ.ನಾಗರತ್ನ, ವಿಕಲಚೇತನರ ಕಲ್ಯಾಣಾಧಿಕಾರಿ ಎಂ.ಮಂಜುಳಾ, ಸಿಡಿಪಿಒ ರವಿಕುಮಾರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ವಿಕಲಚೇತನರು ಹಾಗೂ ಮಂಗಳಮುಖಿಯರು ಭಾಗವಹಿಸಿದ್ದರು.

## ರಾಜ್ಯದ ವಿವಿಧೆಡೆ ಮಳೆ

ಬೆಂಗಳೂರು

ರಾಜ್ಯದಲ್ಲೂ ನೈಋತ್ಯ ಮುಂಗಾರು ಚುರುಕುಗೊಂಡಿದೆ. ಕರಾವಳಿಯ ಬಹುತೇಕ ಕಡೆ, ಉತ್ತರ ಒಳನಾಡಿನ ಅಲ್ಲಲ್ಲಿ ಮಳೆಯಾಗುತ್ತಿದೆ.

ಕರಾವಳಿ ತೀರ ಪ್ರದೇಶದಲ್ಲಿ ಗಂಟೆಗೆ 40 ರಿಂದ 60 ಕಿಲೋ ಮೀಟರ್ ವೇಗದಲ್ಲಿ ಗಾಳಿ ಬೀಸಲಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಮುನ್ನೆಚ್ಚರಿಕೆ ನೀಡಲಾಗಿದೆ.

ಬೆಳಗಾವಿ, ಕೊಡಗು ಜಿಲ್ಲೆಯಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಬೆಳಗಾವಿ ಜಿಲ್ಲೆಯ ನಿಪ್ಪಾಣಿ, ಖಾನಾಪುರ ತಾಲೂಕುಗಳು ಮತ್ತು ಬೆಳಗಾವಿ ನಗರ ಹಾಗೂ ಗ್ರಾಮೀಣ ವಲಯದ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆ ಮತ್ತು ಪಿಯು ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ.

ಅದೇ ರೀತಿ ಕೊಡಗು ಜಿಲ್ಲೆಯ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಶಿವಮೊಗ್ಗ ಜಿಲ್ಲೆ ಸಾಗರ ತಾಲೂಕಿನ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆ, ಪದವಿಪೂರ್ವ ಮತ್ತು ಡಿಪ್ಲೋಮಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

# ‘ಪುಸ್ತಕ ಹಿಡಿಯಿರಿ; ಜಾನಪದ ಕಲೆ ಉಳಿಸಿ’

ಬಂಗಾರಪೇಟೆ

ಜಾನಪದ ಕಲೆ ಮತ್ತು ಸಾಹಿತ್ಯವು ಕನ್ನಡ ಸಂಸ್ಕೃತಿಯ ಜೀವಾಳವಾಗಿದ್ದು, ಅದನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದೆ. ಮಕ್ಕಳು ಮೊಬೈಲ್ ಗೀಳಿನಿಂದ ದೂರವಾಗಿ ಪುಸ್ತಕ ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಬಂಗಾರಪೇಟೆ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಪಿ. ಚಂದ್ರಶೇಖರ್ ಕರೆ ನೀಡಿದರು.

ಪಟ್ಟಣದ ಜೈನ್ ಇಂಟರ್‌ನ್ಯಾಷನಲ್ ಶಾಲೆಯ ಸಭಾಂಗಣದಲ್ಲಿ ಅನಿಕೇತನ ಕನ್ನಡ ಬಳಗ ಆಯೋಜಿಸಿದ್ದ ‘ಜಾನಪದ ಸಿಂಚನ’ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾನಪದ ಎಂದರೆ ಮೈ ರೋಮಾಂಚನವಾಗುತ್ತದೆ. ತ್ರಿಭಾಷಾ ಪ್ರದೇಶವಾಗಿರುವ ಕೋಲಾರ ಜಿಲ್ಲೆಯಲ್ಲಿ ಕನ್ನಡ ಭಾಷೆಗೆ ತನ್ನದೇ ಆದ ವೈಶಿಷ್ಟ್ಯ ಮತ್ತು ಶಕ್ತಿ ಇದೆ. ಕನ್ನಡ ಭಾಷೆ ಮತ್ತು ಜಾನಪದ ಒಂದೇ ನಾಣ್ಯದ ಎರಡು ಮುಖಗಳಾಗಿದ್ದು, ಇವುಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.



ಕುವೆಂಪು ಹಾಗೂ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರಂತಹ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು ಕನ್ನಡ ಸಾಹಿತ್ಯವನ್ನು ವಿಶ್ವಮಟ್ಟಕ್ಕೆ ಕೊಂಡೊಯ್ದಿದ್ದಾರೆ. ಶಾಸ್ತ್ರೀಯ ಸಂಗೀತಕ್ಕೂ ಜಾನಪದವೇ ಮೂಲವಾಗಿದ್ದು, ಜಾನಪದ ಕಲೆ ಮನಸ್ಸನ್ನು ಏಕಾಗ್ರಗೊಳಿಸುವ ಶಕ್ತಿ ಹೊಂದಿದೆ ಎಂದು ಅವರು ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳು ಸಾಹಿತ್ಯದತ್ತ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು. ಮೊಬೈಲ್ ಬಳಕೆಯನ್ನು ಮಿತಿಗೊಳಿಸಿ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಉತ್ತಮ ಪುಸ್ತಕಗಳ ಓದಿನಿಂದ ಜ್ಞಾನ ವೃದ್ಧಿಯಾಗುವುದರ ಜೊತೆಗೆ ವಿಚಾರಶಕ್ತಿ, ಸೃಜನಶೀಲತೆ ಹಾಗೂ ವ್ಯಕ್ತಿತ್ವವೂ ವಿಕಸನಗೊಳ್ಳುತ್ತದೆ. ಜಾನಪದ ಕಲೆ ಮತ್ತು ಸಂಸ್ಕೃತಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಮೂಲಕ ಅದರ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಉಳಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಭಾಷಾ ಶಿಕ್ಷಕಿ ಶ್ಯಾಮಲಾ ಅವರು ಜಾನಪದ ಸಾಹಿತ್ಯದ ಮಹತ್ವದ ಕುರಿತು ಉಪನ್ಯಾಸ ನೀಡಿದರು. ಬಳಿಕ ಶಾಲೆಯ ವಿದ್ಯಾರ್ಥಿಗಳು ಜಾನಪದ ನೃತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿ ನೆರೆದಿದ್ದವರ ಮೆಚ್ಚುಗೆಗೆ ಪಾತ್ರರಾದರು.

ಈ ಸಂದರ್ಭದಲ್ಲಿ ಜೈನ್ ಇಂಟರ್‌ನ್ಯಾಷನಲ್ ಶಾಲೆಯ ಪ್ರಾಂಶುಪಾಲೆ ಅನ್ನಪೂರ್ಣ, ಅನಿಕೇತನ ಕನ್ನಡ ಬಳಗದ ಅಧ್ಯಕ್ಷ ರಾಮಪ್ರಸಾದ್, ಮಾಜಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ನಾಗಾನಂದ ಕೆಂಪರಾಜ್, ಮೈ. ಸುಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ‘ಯಾವುದೇ ಅರ್ಹ ಫಲಾನುಭವಿ ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಬಾರದು’

ಕೋಲಾರ

ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಕಚೇರಿಗೆ ಸೀಮಿತವಾಗದೆ ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಕರ್ತವ್ಯ ಲೋಪ ಅಥವಾ ನಿರ್ಲಕ್ಷ್ಯ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ವೈ. ಶಿವಕುಮಾರ್ ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ಪಡಿತರ ವಿತರಣೆಯಲ್ಲಿ ಯಾವುದೇ ಅಕ್ರಮ ಅಥವಾ ಲೋಪಕ್ಕೆ ಅವಕಾಶ ನೀಡಬಾರದು ಎಂದು ಸೂಚಿಸಿದ ಅವರು, ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರದ ಸುತ್ತೋಲೆಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದರು. ಮರಣ ಹೊಂದಿದ ಫಲಾನುಭವಿಗಳ ಪಡಿತರ ಚೀಟಿಗಳನ್ನು ತ್ವರಿತವಾಗಿ ರದ್ದುಗೊಳಿಸಿ, ಹೊಸ ಅರ್ಜಿಗಳನ್ನು ಆದ್ಯತೆಯ ಮೇರೆಗೆ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.




ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯಲ್ಲಿ ಶೇ.96.41ರಷ್ಟು ನೋಂದಣಿ ಪೂರ್ಣಗೊಂಡಿದ್ದು, ತಾಂತ್ರಿಕ ದೋಷಗಳು ಹಾಗೂ ಬ್ಯಾಂಕ್ ಖಾತೆಗಳ ಕೆವೈಸಿ ಸಮಸ್ಯೆಯಿಂದ ಬಾಕಿ ಉಳಿದಿರುವ ಅರ್ಜಿಗಳನ್ನು ಶೀಘ್ರ ಪರಿಶೀಲಿಸಿ ಪರಿಹರಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸೂಚಿಸಿದರು. ಗೃಹಜ್ಯೋತಿ ಯೋಜನೆಯಲ್ಲಿಯೂ ಶೂನ್ಯ ವಿದ್ಯುತ್ ಬಿಲ್ ವಿತರಣೆಗೆ ಸಂಬಂಧಿಸಿದ ಗೊಂದಲಗಳನ್ನು ತ್ವರಿತವಾಗಿ ಬಗೆಹರಿಸುವಂತೆ ತಿಳಿಸಿದರು.

ಸಭೆಯಲ್ಲಿ ಮಾಹಿತಿ ನೀಡಿದ ಬೆಸ್ಕಾಂ ಅಧಿಕಾರಿಗಳು, ಗೃಹಜ್ಯೋತಿ ಯೋಜನೆಯಡಿ ಬಳಕೆದಾರರ ನೋಂದಣಿ ಕಾರ್ಯ ನಡೆಯುತ್ತಿದ್ದು, ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಸಾರ್ವಜನಿಕರು ಅರ್ಜಿಗಳಲ್ಲಿನ ಮಾಹಿತಿಯನ್ನು ಸಂಪೂರ್ಣವಾಗಿ ಭರ್ತಿ ಮಾಡಿ ಇಲಾಖೆಗೆ ಸಲ್ಲಿಸುವ ಮೂಲಕ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಶಕ್ತಿ ಯೋಜನೆಯಡಿ ಮಹಿಳೆಯರ ಉಚಿತ ಬಸ್ ಪ್ರಯಾಣ ಸುಗಮವಾಗಿ ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಸ್ಮಾರ್ಟ್ ಕಾರ್ಡ್ ವಿತರಣೆಗೆ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವಂತೆ ಸಾರಿಗೆ ಇಲಾಖೆಗೆ ಸೂಚಿಸಲಾಯಿತು. ಇದೇ ವೇಳೆ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆಯೂ ಪ್ರಗತಿಯಲ್ಲಿದ್ದು, ಇದುವರೆಗೆ 8,700 ವಿದ್ಯಾರ್ಥಿಗಳಿಗೆ ಪಾಸ್ ನೀಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಸುಮಾರು 22 ಸಾವಿರ ವಿದ್ಯಾರ್ಥಿಗಳು ಈ ಯೋಜನೆಯ ಪ್ರಯೋಜನ ಪಡೆಯುವ ನಿರೀಕ್ಷೆಯಿದೆ ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಮಾಹಿತಿ ನೀಡಿದರು.

ತಾಲೂಕು ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ನಿಯಮಿತ ಪರಿಶೀಲನಾ ಸಭೆಗಳನ್ನು ನಡೆಸಿ, ಸಾರ್ವಜನಿಕರ ದೂರುಗಳನ್ನು ಸ್ಥಳದಲ್ಲಿಯೇ ಇತ್ಯರ್ಥಪಡಿಸುವ ಮೂಲಕ ಸರ್ಕಾರದ ಯೋಜನೆಗಳ ಉದ್ದೇಶವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧ್ಯಕ್ಷರು ಸೂಚಿಸಿದರು.

ಫಲಾನುಭವಿಗಳ ನೋಂದಣಿ ಪ್ರಕ್ರಿಯೆಯಲ್ಲಿ ಆಧಾರ್ ಕೆವೈಸಿ, ಒಟಿಪಿ ದೃಢೀಕರಣ, ವಾಸಸ್ಥಳದ ಮಾಹಿತಿ, ಮತದಾರರ ಗುರುತಿನ ಚೀಟಿ ಹಾಗೂ ಆದಾಯ ತೆರಿಗೆ ಮಾಹಿತಿಯನ್ನು ನಿಖರವಾಗಿ ತಂತ್ರಾಂಶದಲ್ಲಿ ದಾಖಲಿಸುವಂತೆ ಸೂಚಿಸಲಾಯಿತು. ಮನೆ ಮಾಲೀಕರು ಅಥವಾ ಬಾಡಿಗೆದಾರರು ಬದಲಾದ ಸಂದರ್ಭಗಳಲ್ಲಿ ಹೆಸರು ಮತ್ತು ಮೊಬೈಲ್ ಸಂಖ್ಯೆಯನ್ನು ವಿಳಂಬವಿಲ್ಲದೆ ನವೀಕರಿಸಲು ಕಟ್ಟುನಿಟ್ಟಿನ ನಿರ್ದೇಶನ ನೀಡಲಾಯಿತು.

ಮುಂಗಾರು ಮಳೆ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಶಿಥಿಲಗೊಂಡಿರುವ ಹಾಗೂ ಅಪಾಯಕಾರಿ ಸ್ಥಿತಿಯಲ್ಲಿರುವ ವಿದ್ಯುತ್ ಕಂಬಗಳನ್ನು ತಕ್ಷಣ ಬದಲಾಯಿಸಿ, ವಿದ್ಯುತ್ ಅವಘಡಗಳನ್ನು ತಡೆಯಲು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸಂಬಂಧಿಸಿದ ಇಲಾಖೆಗೆ ಸೂಚಿಸಲಾಯಿತು.

ಸಭೆಯಲ್ಲಿ ಯುವನಿಧಿ ಯೋಜನೆಯ ಪ್ರಗತಿಯನ್ನೂ ಪರಿಶೀಲಿಸಲಾಯಿತು. ಜಿಲ್ಲೆಯಲ್ಲಿ 2023ನೇ ಸಾಲಿನಲ್ಲಿ ಉತ್ತೀರ್ಣರಾದ 6,385 ಪದವೀಧರರು ಹಾಗೂ 105 ಡಿಪ್ಲೊಮಾ ಅಭ್ಯರ್ಥಿಗಳು ಸೇರಿದಂತೆ ಒಟ್ಟು 6,490 ನಿರುದ್ಯೋಗಿಗಳು ಯೋಜನೆಯಡಿ ನೋಂದಾಯಿಸಿಕೊಂಡಿರುವ ಮಾಹಿತಿ ನೀಡಲಾಯಿತು. ಡಿಬಿಟಿ ಮೂಲಕ ಭತ್ಯೆ ಪಾವತಿಯಲ್ಲಿ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ಶೀಘ್ರ ಪರಿಹರಿಸಿ, ‘ಯುವನಿಧಿ ಪ್ಲಸ್’ ಯೋಜನೆಯಡಿ ಕೌಶಲ್ಯ ತರಬೇತಿ ಹಾಗೂ ಖಾಸಗಿ ಸಂಸ್ಥೆಗಳ ಸಹಯೋಗದಲ್ಲಿ ಬೃಹತ್ ಉದ್ಯೋಗ ಮೇಳಗಳನ್ನು ಆಯೋಜಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮಸಭೆಗಳನ್ನು ಆಯೋಜಿಸುವಾಗ ಸ್ಥಳೀಯ ಶಾಸಕರ ಲಭ್ಯತೆಯನ್ನು ಕಡ್ಡಾಯವಾಗಿ ಖಚಿತಪಡಿಸಿಕೊಳ್ಳುವಂತೆ ಸೂಚಿಸಲಾಯಿತು. ಇದೇ ವೇಳೆ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತು ಜಾಗೃತಿ ಮೂಡಿಸಿ, ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯಬಾರದು ಹಾಗೂ ಅನರ್ಹರ ಹೆಸರುಗಳು ಪಟ್ಟಿಯಲ್ಲಿ ಉಳಿಯದಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಲಾಯಿತು.

ಸಭೆ ಆರಂಭಕ್ಕೂ ಮುನ್ನ ನಿಧನರಾದ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಡಾ. ಸೂರಜ್ ಹೆಗಡೆ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಹಿದಾಯತುಲ್ ಷರೀಫ್, ಎ. ಅಶ್ವಥ್ ರೆಡ್ಡಿ, ಎನ್. ನಾಗೇಶ್ವರಿ, ತಾಲೂಕು ಅಧ್ಯಕ್ಷರುಗಳಾದ ಎ.ವಿ. ಮನೋಹರ್, ರಾಧಾಕೃಷ್ಣ ರೆಡ್ಡಿ, ಎಂ. ಅಂಜಪ್ಪ, ಉಮಾಶಂಕರ್, ಸದಸ್ಯೆ ಮಮತಾ ರೆಡ್ಡಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಟಿ.ಎಂ. ಮಲ್ಲಿಕಾರ್ಜುನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ನಾರಾಯಣಸ್ವಾಮಿ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಕ ಶ್ರೀನಾಥ್, ಬೆಸ್ಕಾಂ ಕಾರ್ಯಪಾಲಕ ಅಭಿಯಂತರ ಶುಭ, ಕೌಶಲ್ಯ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

10/07/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER



# ಡಾ. ಬಾಬು ಜಗಜೀವನರಾಂ 40ನೇ ಪುಣ್ಯಸ್ಮರಣೆ

ಕೋಲಾರ

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಹಸಿರು ಕ್ರಾಂತಿಯ ಹರಿಕಾರ ಹಾಗೂ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ. ಬಾಬು ಜಗಜೀವನರಾಂ ಅವರ 40ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಊರಬಾಗಿಲು ಶ್ರೀನಿವಾಸ್ ಅವರು ಬಾಬೂಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ಹಸಿರು ಕ್ರಾಂತಿಯ ಮೂಲಕ ದೇಶದ ಆಹಾರ ಕೊರತೆಯನ್ನು ನೀಗಿಸಿದ ಬಾಬು ಜಗಜೀವನರಾಂ ಅವರು ಸುಮಾರು 50 ವರ್ಷಗಳ ಕಾಲ ಸುದೀರ್ಘ ರಾಜಕೀಯ ಸೇವೆ ಸಲ್ಲಿಸಿದ ಧೀಮಂತ ನಾಯಕರು ಎಂದು ಸ್ಮರಿಸಿದರು.

ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ ಮಾತನಾಡಿ, ಬಾಬು ಜಗಜೀವನರಾಂ ಅವರು ಕೇವಲ ಒಬ್ಬ ವ್ಯಕ್ತಿಯಲ್ಲ, ಅವರೊಬ್ಬ ಶಕ್ತಿ. ಕೃಷಿ ಸಚಿವರಾಗಿ ಮಾತ್ರವಲ್ಲದೆ ಕಾರ್ಮಿಕ, ಕಾನೂನು ಹಾಗೂ ರೈಲ್ವೆ ಸಚಿವರಾಗಿ ಸೇವೆ ಸಲ್ಲಿಸಿ, ಅನೇಕ ಜನಪರ ಕಾಯ್ದೆಗಳನ್ನು ಜಾರಿಗೆ ತಂದರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪುವಂತೆ ಕೆಲಸ ಮಾಡಿದರು ಎಂದು ಹೇಳಿದರು.

ದೇಶದಲ್ಲಿ ಸುಮಾರು 40 ಕೋಟಿ ಜನರಿಗೆ ಆಹಾರ ಒದಗಿಸುವ ಸವಾಲಿದ್ದ ಸಂದರ್ಭದಲ್ಲಿ ಹಸಿರು ಕ್ರಾಂತಿಯ ಮೂಲಕ ಕೃಷಿ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗಳನ್ನು ತಂದು, ನೀರಾವರಿ ಅಭಿವೃದ್ಧಿಗೆ ಒತ್ತು ನೀಡಿ ಜನರು ಸಮೃದ್ಧ ಜೀವನ ನಡೆಸುವ ವಾತಾವರಣ ನಿರ್ಮಿಸಿದರು ಎಂದು ತಿಳಿಸಿದರು.

ಹಿರಿಯ ಮುಖಂಡ ರಾಜಕಲ್ಲಹಳ್ಳಿ ಶ್ರೀನಿವಾಸ್ ಮಾತನಾಡಿ, ಕೃಷಿ, ಕೈಗಾರಿಕೆ, ಕಾರ್ಮಿಕ ಹಾಗೂ ವಿದೇಶಾಂಗ ಕ್ಷೇತ್ರಗಳಲ್ಲಿ ಬಾಬು ಜಗಜೀವನರಾಂ ಅವರು ಕೈಗೊಂಡ ಕಾರ್ಯಗಳು ಇಂದಿಗೂ ದೇಶಕ್ಕೆ ಮಾದರಿಯಾಗಿವೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚಿಸಿದರೆ, ಬಾಬು ಜಗಜೀವನರಾಂ ಅವರು ಸಂವಿಧಾನದ ಆಶಯಗಳನ್ನು ಜಾರಿಗೊಳಿಸಲು ತಮ್ಮ ಜೀವನದುದ್ದಕ್ಕೂ ಶ್ರಮಿಸಿದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ವೈ. ಶಿವಕುಮಾರ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸೈಯದ್ ಅಫ್ಸರ್, ಎಸ್ಸಿ ಘಟಕದ ಜಿಲ್ಲಾ ಅಧ್ಯಕ್ಷ ಜಯದೇವ್, ಮುಖಂಡರಾದ ಬೆಳಗಾನಹಳ್ಳಿ ಮುನಿವೆಂಕಟಪ್ಪ, ವೀರೇಂದ್ರ ಪಾಟೀಲ್, ಬಿ.ಟಿ. ಚಂದ್ರಶೇಖರ್, ನದೀಂ, ಸೋಮಶೇಖರ್, ಲಾಲ್ ಬಹದ್ದೂರ್ ಶಾಸ್ತ್ರಿ, ಕೋಟೆ ರಾಜೇಶ್, ಅಯೂಬ್, ಶಿವಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡಲು ಸರ್ಕಾರಕ್ಕೆ ಆಗ್ರಹ

ದೊಡ್ಡಬಳ್ಳಾಪುರ

ಹೈನುಗಾರಿಕೆ ಕ್ಷೇತ್ರ ತೀವ್ರ ಸಂಕಷ್ಟದಲ್ಲಿದ್ದು, ರೈತರ ನೆರವಿಗೆ ಸರ್ಕಾರ ಧಾವಿಸಬೇಕು. ರೈತರಿಂದ ಖರೀದಿಸುವ ಪ್ರತಿ ಲೀಟರ್ ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡಬೇಕು ಎಂದು ಬಮುಲ್ ನಿರ್ದೇಶಕ ಬಿ.ಸಿ. ಆನಂದ್ ಕುಮಾರ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ನಗರದ ಬಮುಲ್ ಕಚೇರಿಯಲ್ಲಿ ರೈತ ಸಂಘದ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೈನುಗಾರಿಕೆಗೆ ಅಗತ್ಯವಾದ ಹಿಂಡಿ, ಬೂಸ, ಮೇವು ಸೇರಿದಂತೆ ವಿವಿಧ ವಸ್ತುಗಳ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದೆ. ಇದರ ಜೊತೆಗೆ ರಸಗೊಬ್ಬರಗಳ ಬೆಲೆ ಹೆಚ್ಚಳ, ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.



ಇಂತಹ ಕಠಿಣ ಸಂದರ್ಭದಲ್ಲಿ ಸರ್ಕಾರ ರೈತರಿಂದ ಖರೀದಿಸುವ ಪ್ರತಿ ಲೀಟರ್ ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡುವ ಮೂಲಕ ರೈತರ ಬೆಂಬಲಕ್ಕೆ ನಿಲ್ಲಬೇಕು. ಈ ಸಂಬಂಧ ಜುಲೈ 9ರಂದು ತಾಲೂಕಿನ ರೈತರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಿದ್ದಾರೆ. ಈ ಹೋರಾಟ ಪಕ್ಷಾತೀತವಾಗಿ ನಡೆಯಲಿದ್ದು, ಎಲ್ಲ ಮುಖಂಡರು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಸುಮಾರು ಶೇ.80ರಷ್ಟು ಮಹಿಳೆಯರು ಹೈನುಗಾರಿಕೆಯನ್ನು ಅವಲಂಬಿಸಿ ಕುಟುಂಬ ನಿರ್ವಹಿಸುತ್ತಿದ್ದಾರೆ. ಬರದ ಛಾಯೆ ಇರುವ ಈ ಸಂದರ್ಭದಲ್ಲಿ ಸರ್ಕಾರ ತನ್ನ ಪ್ರಣಾಳಿಕೆಯಂತೆ ಹಾಲಿನ ಪ್ರೋತ್ಸಾಹ ಧನವನ್ನು ಹೆಚ್ಚಿಸಿ ಹೈನುಗಾರಿಕೆಗೆ ಉತ್ತೇಜನ ನೀಡಬೇಕು ಎಂದು ಆನಂದ್ ಕುಮಾರ್ ಹೇಳಿದರು.

ಹಿಂದಿನ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಹೆಚ್.ಡಿ. ಕುಮಾರಸ್ವಾಮಿ ಹಾಗೂ ಸಿದ್ದರಾಮಯ್ಯ ಅವರು ತಮ್ಮ ಆಡಳಿತ ಅವಧಿಯಲ್ಲಿ ಹಾಲಿಗೆ ಪ್ರೋತ್ಸಾಹ ಧನ ನೀಡುವ ಮೂಲಕ ರೈತರ ಸಂಕಷ್ಟಕ್ಕೆ ನೆರವಾಗಿದ್ದರು. ಅದೇ ರೀತಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೂಡ ಮುಂದುವರಿಸಬೇಕು. ಇಲ್ಲವಾದಲ್ಲಿ ರೈತರಿಂದ ತೀವ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಪ್ರಸನ್ನ ಮಾತನಾಡಿ, ಹೈನುಗಾರಿಕೆಗೆ ಸಂಬಂಧಿಸಿದ ಎಲ್ಲ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಬರದ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಎದುರಾಗಿದೆ. ರೈತರು ಜಾನುವಾರುಗಳನ್ನು ಸಾಕಲು ಕಷ್ಟಪಡುತ್ತಿರುವುದನ್ನು ಸರ್ಕಾರ ಗಮನಿಸಿ ತಕ್ಷಣ ಹಾಲಿಗೆ 10 ರೂ. ಪ್ರೋತ್ಸಾಹ ಧನ ನೀಡಬೇಕು ಎಂದು ಆಗ್ರಹಿಸಿದರು.

ಮನವಿಯನ್ನು ಸರ್ಕಾರ ತಿರಸ್ಕರಿಸಿದರೆ ರೈತರಿಂದ ತೀವ್ರ ಪ್ರತಿರೋಧ ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ರೈತ ಸಂಘದ ಉಪಾಧ್ಯಕ್ಷ ಮುತ್ತೇಗೌಡ, ತಾಲೂಕು ಅಧ್ಯಕ್ಷ ಹನುಮೇಗೌಡ, ಪ್ರಧಾನ ಕಾರ್ಯದರ್ಶಿ ಸತೀಶ್, ಎಂ.ಪಿ.ಸಿ.ಎಸ್. ನೌಕರ ಸಂಘದ ಅಧ್ಯಕ್ಷ ರವೀಂದ್ರ ರವಿ, ತಿಮ್ಮಣ್ಣ ಶಿರವಾರ ರವಿ, ಹೊನ್ನಾಘಟ್ಟ ಮೂರ್ತಿ, ಮಹದೇವ್, ಸತೀಶ್, ಹನುಮಂತರಾಯಪ್ಪ ಸೇರಿದಂತೆ ಹಲವು ರೈತ ಮುಖಂಡರು ಉಪಸ್ಥಿತರಿದ್ದರು.

# ಮನೆಗಳಿಗೆ ನುಗ್ಗುತ್ತಿರುವ ಚರಂಡಿ ಕೊಳಚೆ ನೀರು: ಆಕ್ರೋಶ

ಬೇತಮಂಗಲ

ಪಟ್ಟಣದ ಟಿಪ್ಪು ನಗರದ 3ನೇ ಬ್ಲಾಕ್‌ನಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದ ಪರಿಣಾಮ ಕೊಳಚೆ ನೀರು ಮನೆಗಳಿಗೆ ನುಗ್ಗುತ್ತಿದ್ದು, ಸಮಸ್ಯೆ ಪರಿಹರಿಸಲು ಗ್ರಾಮ ಪಂಚಾಯಿತಿ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿವಾಸಿಗಳು, ಚರಂಡಿ ವ್ಯವಸ್ಥೆ ಸರಿಯಾಗಿಲ್ಲದ ಕಾರಣ ಕೊಳಚೆ ನೀರು ರಸ್ತೆಯಲ್ಲಿ ಹರಿಯುತ್ತಿದ್ದು, ಕೆಲ ಮನೆಗಳಿಗೂ ನುಗ್ಗುತ್ತಿದೆ. ಇದರಿಂದ ದುರ್ವಾಸನೆ ವ್ಯಾಪಿಸಿ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಇದಲ್ಲದೆ, ಸಾರ್ವಜನಿಕ ಸ್ಥಳಗಳಲ್ಲಿ ಕಸದ ರಾಶಿ ಹೆಚ್ಚಾಗುತ್ತಿದ್ದು, ಗ್ರಾಮ ಪಂಚಾಯಿತಿಯಿಂದ ನಿಯಮಿತವಾಗಿ ಸ್ವಚ್ಛತಾ ಕಾರ್ಯ ನಡೆಯುತ್ತಿಲ್ಲ ಎಂದು ದೂರಿದರು. ಸಮಸ್ಯೆಯ ಬಗ್ಗೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಶಾಶ್ವತ ಪರಿಹಾರ ಕಲ್ಪಿಸಿಲ್ಲ ಎಂದು ಆರೋಪಿಸಿದರು.

ಮಳೆಗಾಲದಲ್ಲಿ ಪರಿಸ್ಥಿತಿ ಮತ್ತಷ್ಟು ಹದಗೆಡುತ್ತಿದ್ದು, ಚರಂಡಿ ನೀರು ಮನೆಗಳಿಗೆ ನುಗ್ಗುವ ಭೀತಿಯಿಂದ ನಿವಾಸಿಗಳು ಆತಂಕದಲ್ಲೇ ದಿನ ಕಳೆಯುವಂತಾಗಿದೆ ಎಂದು ತಿಳಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಮರ್ಪಕ ಚರಂಡಿ ವ್ಯವಸ್ಥೆ ಕಲ್ಪಿಸುವ ಮೂಲಕ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕು ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

# ಸಮಾಜ ಸೇವಕ ಬುಚೇಪಲ್ಲಿ ಕೃಷ್ಣಮೂರ್ತಿಗೆ ಜಿಲ್ಲಾ ಮಟ್ಟದ ಅಮೋಘ ಪ್ರಶಸ್ತಿ

ಬೇತಮಂಗಲ

ಬಹುಜನ ಸಂಘಟನೆಗಳ ಒಕ್ಕೂಟ ಮತ್ತು ಜನ ಸಮೂಹ ಸಂಸ್ಥೆಯ ಆಶ್ರಯದಲ್ಲಿ ಸನಾಸೌ ಸೇವಾ ಟ್ರಸ್ಟ್ ವತಿಯಿಂದ ಮುಳಬಾಗಿಲು ತಾಲೂಕಿನ ಅಂಬೇಡ್ಕರ್ ಭವನದಲ್ಲಿ ನಡೆದ 18ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಕೆಜಿಎಫ್ ತಾಲೂಕಿನ ಸಮಾಜ ಸೇವಕ ಬುಚೇಪಲ್ಲಿ ಕೃಷ್ಣಮೂರ್ತಿ ಅವರಿಗೆ ಜಿಲ್ಲಾ ಮಟ್ಟದ ಅಮೋಘ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಕನ್ನಡ ನಾಡು, ನುಡಿ, ನೆಲ, ಜಲ, ಕಲೆ, ಶಿಕ್ಷಣ ಹಾಗೂ ಸಂಸ್ಕೃತಿ ಕ್ಷೇತ್ರಗಳ ಅಭಿವೃದ್ಧಿಗೆ ನೀಡಿರುವ ಕೊಡುಗೆ ಹಾಗೂ ವಿಶೇಷವಾಗಿ ಸಮಾಜ ಸೇವಾ ಕ್ಷೇತ್ರದಲ್ಲಿ ಸಲ್ಲಿಸಿರುವ ಅನುಪಮ ಸೇವೆಯನ್ನು ಗುರುತಿಸಿ ಅವರಿಗೆ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಬುಚೇಪಲ್ಲಿ ಕೃಷ್ಣಮೂರ್ತಿ, ಈ ಗೌರವವು ಸಮಾಜಮುಖಿ ಸೇವೆಯನ್ನು ಇನ್ನಷ್ಟು ಜವಾಬ್ದಾರಿಯಿಂದ ಮುಂದುವರಿಸಲು ಪ್ರೇರಣೆ ನೀಡಿದೆ ಎಂದು ಹೇಳಿದರು. ಸಮಾಜದ ಎಲ್ಲ ವರ್ಗಗಳ ಅಭಿವೃದ್ಧಿಗಾಗಿ ನಿರಂತರವಾಗಿ ಸೇವಾ ಕಾರ್ಯಗಳನ್ನು ಕೈಗೊಳ್ಳುವುದಾಗಿ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಕೆಜಿಎಫ್ ತಾಲೂಕಿನ ಮುಖಂಡರಾದ ರಾಧಾಕೃಷ್ಣ, ಕೆ.ವಿ. ಸುಬ್ರಮಣಿ, ಶಿವ, ತಿಪ್ಪಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಒಕ್ಕಲಿಗರ ಭವನಕ್ಕೆ ಸುರೇಶ್‌ಗೌಡ ಭೂಮಿಪೂಜೆ

ತುಮಕೂರು

ಬೆಂಗಳೂರು ನಿರ್ಮಾತೃ ಕೆಂಪೇಗೌಡರ ದೂರದೃಷ್ಟಿ ಚಿಂತನೆಯ, ಜನಸ್ನೇಹಿ ಆಡಳಿತ ಇಂದಿನ ನಾಯಕರಿಗೆ ಮಾದರಿ ಆಗಬೇಕು. ಅವರು ನಾಡಿಗೆ ಕೊಟ್ಟ ಕೊಡುಗೆಗಳನ್ನು ಸ್ಮರಿಸಬೇಕು ಎಂದು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡರು ಹೇಳಿದರು.

ಕ್ಷೇತ್ರದ ಊರ್ಡಿಗೆರೆ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 517 ನೇ ಜಯಂತೋತ್ಸವ ಉದ್ಘಾಟಿಸಿ ಮಾತನಾಡಿದ ಶಾಸಕರು, ವಿಶ್ವಮಟ್ಟದಲ್ಲಿ ಹೆಸರು ಮಾಡಿರುವ ಬೆಂಗಳೂರು ಮಹಾನಗರ ನಿರ್ಮಾಣ ಮಾಡಿದ ಕೆಂಪೇಗೌಡರ ನಗರ ನಿರ್ಮಾಣ ಕೌಶಲ್ಯ ಅಪಾರವಾದದ್ದು, ಕೆರೆಗಳನ್ನು ನಿರ್ಮಿಸಿ ಕೃಷಿ ಚಟುವಟಿಕೆಗಳನ್ನು ಪ್ರೋತ್ಸಾಹಿಸಿದರು. ಎಲ್ಲಾ ಸಮುದಾಯಗಳನ್ನು ಸಮಾನತೆಯಿಂದ ಕಂಡ ಶ್ರೇಷ್ಠ ಆಡಳಿತಗಾರ ಎಂದು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಸುರೇಶ್‌ಗೌಡರು ಒಂದು ಕೋಟಿ ರೂ. ಅಂದಾಜು ವೆಚ್ಚದ ಒಕ್ಕಲಿಗರ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದರು. ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಆರ್. ಹನುಮಂತರಾಯಪ್ಪ, ಮುಖಂಡರಾದ ರವಿ, ಗಂಗಣ್ಣ, ಉಮೇಶ್, ಕರಿಯಪ್ಪ, ಮೂರ್ತಿ, ನಾಗಣ್ಣ, ಮಂಚಕಲ್ಲುಕುಪ್ಪೆ ರಾಜೇಶ್, ಕೋಳಿಹಳ್ಳಿ ಗೋಪಾಲ್, ಕೆಂಪಸಿದ್ದಯ್ಯ, ಮೂಡ್ಲಪ್ಪ, ಕುಮಾರ್, ಮನು, ಕೆಂಪರಾಜು, ಚೇತನ್, ಮೆಡಿಕಲ್ ಮಂಜಣ್ಣ, ವಾಸು ಮೊದಲಾದವರು ಭಾಗವಹಿಸಿದ್ದರು.

# ಮಕ್ಕಳೊಂದಿಗೆ ಬಿಸಿ ಊಟ ಸವಿದ ಜಿಲ್ಲಾ ಪಂಚಾಯಿತಿ ಸಿಇಒ

ತುಮಕೂರು

ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರ ಜೊತೆಗೆ ರುಚಿ ಹಾಗೂ ಶುಚಿಯಾದ ಬಿಸಿ ಊಟವನ್ನು ಒದಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ. ಅವರು ಶಿಕ್ಷಕರಿಗೆ ಸೂಚಿಸಿದರು.

ತುಮಕೂರು ತಾಲೂಕಿನ ಅರೆಗುಜ್ಜನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕದರನಹಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಪಾಠಶಾಲೆಗೆ ಭೇಟಿ ನೀಡಿದ ಅವರು, ಮಕ್ಕಳೊಂದಿಗೆ ಬಿಸಿ ಊಟ ಸೇವಿಸಿ ಮಾತನಾಡಿದರು.

ಮಕ್ಕಳಿಗೆ ಉತ್ತಮ ಶಿಕ್ಷಣ ಎಷ್ಟು ಮುಖ್ಯವೋ, ಅದೇ ರೀತಿ ಪೌಷ್ಟಿಕ, ಶುಚಿ ಮತ್ತು ರುಚಿಯಾದ ಆಹಾರವೂ ಅಷ್ಟೇ ಮುಖ್ಯವಾಗಿದೆ. ಹೆಚ್ಚು ತರಕಾರಿಗಳನ್ನು ಬಳಸಿ ಪೌಷ್ಟಿಕ ಆಹಾರ ನೀಡಬೇಕು. ಪ್ರತಿದಿನ ವೇಳಾಪಟ್ಟಿಯಂತೆ ನಿಗದಿಪಡಿಸಿರುವ ಆಹಾರವನ್ನೇ ನೀಡಬೇಕು. ತಪ್ಪದೇ ಮೊಟ್ಟೆ ಮತ್ತು ಬಾಳೆಹಣ್ಣನ್ನು ವಿತರಿಸಬೇಕು ಎಂದು ಸೂಚಿಸಿದರು.

ಮಕ್ಕಳಿಗೆ ಊಟ ನೀಡುವ ಮೊದಲು ಶಿಕ್ಷಕರು ಆಹಾರವನ್ನು ಸೇವಿಸಿ ಗುಣಮಟ್ಟವನ್ನು ಪರಿಶೀಲಿಸಿದ ನಂತರವೇ ಮಕ್ಕಳಿಗೆ ನೀಡಬೇಕು ಎಂದು ತಿಳಿಸಿದರು. ಶಾಲಾ ಆವರಣದಲ್ಲಿ ಉತ್ತಮ ಪರಿಸರವನ್ನು ಕಾಪಾಡಿಕೊಳ್ಳುವಂತೆ ಶಿಕ್ಷಕರಿಗೆ ಸೂಚನೆ ನೀಡಿದರು.

ಇದೇ ವೇಳೆ ಕದರನಹಳ್ಳಿ ಗ್ರಾಮದಲ್ಲಿ ಎಸ್‌ಐಆರ್ ಎನ್ಯೂಮರೇಶನ್ ನಮೂನೆಗಳನ್ನು ವಿತರಿಸಿದರು.



ಮನೆ–ಮನೆಗೆ ನಮೂನೆಗಳನ್ನು ತಲುಪಿಸಿ, ಭರ್ತಿ ಮಾಡಿದ ನಮೂನೆಗಳನ್ನು ಸಂಗ್ರಹಿಸುವಂತೆ ಬಿಎಲ್‌ಒಗಳಿಗೆ ಸೂಚನೆ ನೀಡಿದರು.

ಬಳಿಕ ತುಮಕೂರು ತಾಲೂಕಿನ ಊರ್ಡಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗುಡ್ಡಕೆರೆ ಬಳಿ ಪ್ರಗತಿಯಲ್ಲಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ನೀರು ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ನಾರಾಯಣ, ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೃಷ್ಣಕಾಂತ್ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಉಪಸ್ಥಿತರಿದ್ದರು.

# ಅಡಿಕೆ ಸಾಗಣೆ ವಾಹನಗಳ ಬಿಡುಗಡೆ: ಪ್ರಲ್ಹಾದ್ ಜೋಶಿ ಮಧ್ಯಸ್ಥಿಕೆಗೆ ಯಶಸ್ಸು

ಬೆಂಗಳೂರು

ಕರ್ನಾಟಕದ ಅಡಿಕೆ ಬೆಳೆಗಾರರು ಹಾಗೂ ವರ್ತಕರ ಹಿತರಕ್ಷಣೆಗೆ ಸಂಬಂಧಿಸಿದಂತೆ ಕೇಂದ್ರ ಆಹಾರ, ಗ್ರಾಹಕ ವ್ಯವಹಾರಗಳು ಮತ್ತು ಸಾರ್ವಜನಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಅವರು ಮಹತ್ವದ ಕ್ರಮ ಕೈಗೊಂಡಿದ್ದಾರೆ.

ಮಹಾರಾಷ್ಟ್ರದಲ್ಲಿ ಪ್ರಯೋಗಾಲಯ ಪರೀಕ್ಷೆಯ ನೆಪದಲ್ಲಿ ಹಲವು ದಿನಗಳಿಂದ ತಡೆಹಿಡಿಯಲಾಗಿದ್ದ ಕರ್ನಾಟಕದ ಅಡಿಕೆ ಸರಕು ಸಾಗಣೆ ವಾಹನಗಳ ತುರ್ತು ಬಿಡುಗಡೆಗಾಗಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೆ ಪ್ರಲ್ಹಾದ್ ಜೋಶಿ ನಡೆಸಿದ ಮಾತುಕತೆ ಯಶಸ್ವಿಯಾಗಿದೆ.

ಈ ಸಭೆಯಲ್ಲಿ ಕರ್ನಾಟಕದ ಸಂಸದರು ಹಾಗೂ ಶಾಸಕರ ಪ್ರಮುಖ ನಿಯೋಗವೂ ಭಾಗವಹಿಸಿತ್ತು.

# ಬಾಬು ಜಗಜೀವನ್ ರಾಮ್ 40ನೇ ಪುಣ್ಯಸ್ಮರಣೆ ಆಚರಣೆ

ದೇವನಹಳ್ಳಿ

ಹಸಿರು ಕ್ರಾಂತಿಯ ಹರಿಕಾರ, ಸ್ವಾತಂತ್ರ್ಯ ಹೋರಾಟಗಾರ ಹಾಗೂ ಹಿರಿಯ ರಾಜಕಾರಣಿ ಡಾ. ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆಯನ್ನು ದೇವನಹಳ್ಳಿ ತಾಲೂಕು ಆಡಳಿತ ಭವನದ ತಹಶೀಲ್ದಾರ್ ಸಭಾಂಗಣದಲ್ಲಿ ಮಂಗಳವಾರ ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಹಶೀಲ್ದಾರ್ ಎಂ. ಅನಿಲ್, ಡಾ. ಬಾಬು ಜಗಜೀವನ್ ರಾಮ್ ಅವರು ಸಾರ್ವಜನಿಕರ ಪ್ರೀತಿಗೆ ಪಾತ್ರರಾಗಿ "ಬಾಬೂಜಿ" ಎಂದೇ ಖ್ಯಾತಿ ಪಡೆದಿದ್ದರು.

ಅವರು ಸ್ವಾತಂತ್ರ್ಯ ಹೋರಾಟಗಾರ, ಸಮಾಜಸೇವಕ ಹಾಗೂ ಜನಪರ ನಾಯಕನಾಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಪಂಡಿತ ಜವಾಹರಲಾಲ್ ನೆಹರು ಅವರ ಸಚಿವ ಸಂಪುಟದಲ್ಲಿ ಪ್ರಮುಖ ಸಚಿವರಾಗಿ ಸೇವೆ ಸಲ್ಲಿಸಿದ್ದ ಅವರು, ಬಳಿಕ ಮೊರಾರ್ಜಿ ದೇಸಾಯಿ ಸರ್ಕಾರದಲ್ಲಿ ಉಪ ಪ್ರಧಾನಿಯಾಗಿ ಕಾರ್ಯನಿರ್ವಹಿಸಿದ್ದರು ಎಂದು ಹೇಳಿದರು.

ಡಿ.ಎಸ್.ಎಸ್. ರಾಜ್ಯ ಸಂಘಟನಾ ಸಂಚಾಲಕ ಹಾಗೂ ಹೋರಾಟಗಾರ ಕಾರಹಳ್ಳಿ ಶ್ರೀನಿವಾಸ್ ಮಾತನಾಡಿ, ಜಾತಿ, ಮೇಲು–ಕೀಳು ಎಂಬ ಭೇದಭಾವಗಳನ್ನು ತೊಡೆದುಹಾಕಲು ಡಾ. ಬಾಬು ಜಗಜೀವನ್ ರಾಮ್ ಅವರು ಸಾಮಾಜಿಕ ನೆಲೆಗಟ್ಟಿನಲ್ಲಿ ನಿರಂತರ ಹೋರಾಟ ನಡೆಸಿದ ಮಹಾನುಭಾವರಾಗಿದ್ದಾರೆ. ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅವರ ಸೇವೆ ಸದಾ ಸ್ಮರಣೀಯ ಎಂದು ಹೇಳಿದರು.

ಪುರಸಭೆಯ ಮಾಜಿ ಅಧ್ಯಕ್ಷ ಎಂ. ಮಮೂರ್ತಿ ಮಾತನಾಡಿ, ಸ್ವಾತಂತ್ರ್ಯ ಪೂರ್ವ ಮತ್ತು ಸ್ವಾತಂತ್ರ್ಯಾನಂತರದ ಭಾರತದ ರಾಜಕೀಯದಲ್ಲಿ ಡಾ. ಬಾಬು ಜಗಜೀವನ್ ರಾಮ್ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರ ಸರಳತೆ, ಸೌಜನ್ಯ ಹಾಗೂ ಜನಸೇವೆಯ ಮನೋಭಾವ ಎಲ್ಲರಿಗೂ ಮಾದರಿಯಾಗಿದೆ ಎಂದು ಹೇಳಿದರು.

# ವಕೀಲರ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ

ತುಮಕೂರು

ನಗರದ ನ್ಯಾಯಾಲಯ ಆವರಣದಲ್ಲಿ ಸೋಮವಾರ ಹಿರಿಯ ವಕೀಲರಾದ ಎಂ.ಸಿ. ರವೀಶ್ ಅವರ ಮೇಲೆ ಬಿ.ಎ. ನಿರಂಜನ್ ಎಂಬುವವರು ಹಲ್ಲೆ ನಡೆಸಿದ್ದನ್ನು ಖಂಡಿಸಿ ಜಿಲ್ಲಾ ವಕೀಲರ ಸಂಘದ ನೇತೃತ್ವದಲ್ಲಿ ವಕೀಲರು ಮಂಗಳವಾರ ಪ್ರತಿಭಟನೆ ನಡೆಸಿ ನ್ಯಾಯಾಲಯ ಕಲಾಪಗಳಲ್ಲಿ ಭಾಗವಹಿಸದೆ ಕಲಾಪಗಳಿಂದ ದೂರ ಉಳಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಹಿರೇಹಳ್ಳಿ ಮಹೇಶ್, ಕರ್ತವ್ಯದ ಮೇಲಿದ್ದ ವಕೀಲರ ಮೇಲೆ ನ್ಯಾಯಾಲಯದ ಆವರಣದಲ್ಲಿ ಹಲ್ಲೆ ನಡೆಸಿರುವುದು ಖಂಡನೀಯ. ಆರೋಪಿಯನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ವಕೀಲರ ಮೇಲೆ ಹಲ್ಲೆ ನಡೆಸಿದ ನಿರಂಜನ್ ಪರವಾಗಿ ಯಾವ ವಕೀಲರೂ ವಕಾಲತ್ತು ವಹಿಸಬಾರದು ಎಂದು ಸಂಘದಲ್ಲಿ ನಿರ್ಣಯ ಮಾಡಲಾಗಿದೆ ಎಂದು ಹೇಳಿದ ಹಿರೇಹಳ್ಳಿ ಮಹೇಶ್, ವಕೀಲರ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚಾಗುತ್ತಿವೆ. ಇದಕ್ಕೆ ಕಡಿವಾಣ ಹಾಕಿ ವಕೀಲರು ನಿರ್ಭೀತಿಯಿಂದ ಕರ್ತವ್ಯ ನಿರ್ವಹಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದರು.

ಇದೇ 6ರಂದು ಸೋಮವಾರ ಮಧ್ಯಾಹ್ನ 2–02ರ ಸಮಯದಲ್ಲಿ ನಗರದ 2ನೇ ಅಧಿಕ ಸಿವಿಲ್ ನ್ಯಾಯಾಲಯ ಹಿರಿಯ ಶ್ರೇಣಿ ನ್ಯಾಯಾಲಯದ ಒಳಗಿನಿಂದ ಕಲಾಪಗಳನ್ನು ಮುಗಿಸಿಕೊಂಡು ಹೊರಬಂದಂತಹ ಸಂದರ್ಭದಲ್ಲಿ ವಕೀಲ ಎಂ.ಸಿ. ರವೀಶ್ ಅವರ ಮೇಲೆ ಓ.ಎಸ್.359/2015ರ ಪ್ರಕರಣದ 2ನೇ ಪ್ರತಿವಾದಿ ತುಮಕೂರು ತಾಲ್ಲೂಕು ಕೋರಾ ಹೋಬಳಿ ಬ್ರಹ್ಮಸಂದ್ರದ ಬಿ.ಎ. ನಿರಂಜನ್ ಎಂಬಾತ ತನ್ನ ಎದುರಿಗೆ



ಏಕೆ ಕೇಸನ್ನು ತೆಗೆದುಕೊಂಡಿದ್ದೀಯಾ ಎಂದು ವಕೀಲರಾದ ಎಂ.ಸಿ. ರವೀಶ್ ಅವರನ್ನು ಅಶ್ಲೀಲ ಮತ್ತು ಅವಾಚ್ಯ ಶಬ್ದಗಳಿಂದ ಸಾರ್ವಜನಿಕವಾಗಿ ಬೈದು ಅವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಎಡ ಮುಖ ತುಟಿ, ಕೆನ್ನೆಮೇಲೆ ರಕ್ತಗಾಯಗಳಾಗುವಂತೆ ಕೈಯಲ್ಲಿ ಹಿಡಿದುಕೊಂಡಿದ್ದ ಕಲ್ಲಿನಿಂದ ಜಜ್ಜಿರುತ್ತಾನೆ. ಕಾಲಿನಿಂದ ಒದ್ದು ಕುತ್ತಿಗೆ ಮೇಲೆ ಕಾಲಿಟ್ಟು ಸಾಯಿಸಲು ಪ್ರಯತ್ನಿಸಿರುತ್ತಾನೆ. ಈ ಸಮಯದಲ್ಲಿ ಇತರೆ ವಕೀಲರು ಬಿಡಿಸಿರುತ್ತಾರೆ. ತಕ್ಷಣ ಆತನು ಸ್ಥಳದಿಂದ ಪರಾರಿಯಾಗಿರುತ್ತಾನೆ. ಆರೋಪಿಯನ್ನು ಕೂಡಲೇ ಬಂಧಿಸಬೇಕು ಎಂದು ಹಿರೇಹಳ್ಳಿ ಮಹೇಶ್ ಒತ್ತಾಯಿಸಿದರು.

ಹಲ್ಲೆ ಸಂಬಂಧ ವಕೀಲ ಎಂ.ಸಿ. ರವೀಶ್ ಅವರು ನಗರ ಠಾಣೆಗೆ ದೂರು ನೀಡಿ, ಹಲ್ಲೆ ಮಾಡಿದ ನಿರಂಜನ್‌ನಿಂದ ನನಗೆ ಪ್ರಾಣ ಭೀತಿ ಇರುತ್ತದೆ.

ನನಗೆ ಜೀವ ಬೆದರಿಕೆ ಹಾಕಿ, ನನ್ನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಆತನ ಮೇಲೆ ಕಾನೂನು ಕ್ರಮ ಜರುಗಿಸಿ ನನಗೆ ರಕ್ಷಣೆ ನೀಡಬೇಕೆಂದು ಪೊಲೀಸರಿಗೆ ಮನವಿ ಮಾಡಿದ್ದಾರೆ.

ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ರವಿಗೌಡ, ಖಜಾಂಚಿ ಸಿಂಧೂ, ಕಾರ್ಯಕಾರಿ ಮಂಡಳಿ ಸದಸ್ಯರಾದ ಡಿ.ಎ. ಜಗದೀಶ್, ಸುರೇಶ್, ಕೆ.ವಿ. ಶ್ರೀನಿವಾಸಮೂರ್ತಿ, ವಿ.ಕೆ. ಶ್ರೀನಿವಾಸಮೂರ್ತಿ, ಪದ್ಮಶ್ರೀ, ಸೇವಾಪ್ರಿಯ ಹಾಗೂ ನೂರಾರು ವಕೀಲರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಶಿಕ್ಷಣದ ಜೊತೆಗೆ ಸಂಸ್ಕಾರ ಮಕ್ಕಳ ಬದುಕಿಗೆ ದಾರಿದೀಪ: ಶ್ರೀಮಂಗಳನಾಥಸ್ವಾಮೀಜಿ

ಶಿಡ್ಲಘಟ್ಟ

ನಾವು ಪಡೆಯುವ ಶಿಕ್ಷಣ, ಜ್ಞಾನ ಮತ್ತು ಸಂಸ್ಕಾರವು ಬದುಕನ್ನು ಸಮಾಜಮುಖಿಯಾಗಿ ರೂಪಿಸುತ್ತದೆ. ಇದರಿಂದ ಸಮಾಜದಲ್ಲಿ ಗೌರವ, ಪ್ರೀತಿ ಮತ್ತು ಅಕ್ಕರೆಯ ಸ್ಥಾನಮಾನ ದೊರೆಯುತ್ತದೆ ಎಂದು ಆದಿಚುಂಚನಗಿರಿ ಮಹಾಪೀಠದ ಚಿಕ್ಕಬಳ್ಳಾಪುರ ಶಾಖೆಯ ಶ್ರೀಮಂಗಳನಾಥಸ್ವಾಮೀಜಿ ತಿಳಿಸಿದರು.

ತಾಲೂಕಿನ ಹಂಡಿಗನಾಳದ ಕೆವಿ ಭವನದಲ್ಲಿ ಸೋಮವಾರ ನಡೆದ ಬಿಜಿಎಸ್ ಶಾಲೆಯ ಪೂರ್ವ ಪ್ರಾಥಮಿಕ ಶಾಲಾ ಮಕ್ಕಳ ಜ್ಞಾನಾಂಕುರ ಅಕ್ಷರಾಭ್ಯಾಸ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಮಕ್ಕಳು ಶಾಲೆ–ಕಾಲೇಜುಗಳಲ್ಲಿ ಕಲಿಯುವುದಕ್ಕಿಂತಲೂ ಮನೆಯಲ್ಲಿ ಮತ್ತು ಸುತ್ತಮುತ್ತಲಿನ ಪರಿಸರದಿಂದ ಹೆಚ್ಚು ಕಲಿಯುತ್ತಾರೆ ಎಂದರು.

ತಾಯಿ ಜೊತೆ ಮಕ್ಕಳು ಕಳೆಯುವಷ್ಟು ಸಮಯ ಮತ್ತಾರೊಂದಿಗೂ ಕಳೆಯುವುದಿಲ್ಲ. ಹೀಗಾಗಿ ಮಗುವಿನ ಮೊದಲ ಪಾಠಶಾಲೆ ಮನೆ ಆಗಿರುವುದರಿಂದ ಪೋಷಕರು ಮಕ್ಕಳಿಗೆ ಮಾದರಿಯಾದ ಜೀವನ ನಡೆಸಬೇಕು ಎಂದು



ಸಲಹೆ ನೀಡಿದರು.

ಮಕ್ಕಳು ಹೇಳಿಕೊಟ್ಟ ಮಾತುಗಳಿಗಿಂತ ನೋಡಿದ ವಿಚಾರಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಕಲಿಯುತ್ತಾರೆ. ಆದ್ದರಿಂದ ತಂದೆ–ತಾಯಿ, ಅಣ್ಣ–ತಮ್ಮ, ಅಕ್ಕ–ತಂಗಿಯರು ಮಕ್ಕಳ ಮುಂದೆ ಉತ್ತಮ ನಡೆ–ನುಡಿಯನ್ನು ಪ್ರದರ್ಶಿಸಬೇಕು ಎಂದು ಮನವಿ ಮಾಡಿದರು.

ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ನೀಡುವ ಮೂಲಕ ಅವರ ಭವಿಷ್ಯವನ್ನು ರೂಪಿಸುವ ಜವಾಬ್ದಾರಿ ಪೋಷಕರ ಮೇಲಿದೆ ಎಂದು ಶ್ರೀಗಳು ಹೇಳಿದರು.

ತಹಶೀಲ್ದಾರ್ ಎನ್. ಗಗನಸಿಂಧು ಮಾತನಾಡಿ, ಯಾವ ಮಗು ಮುಂದೆ ಯಾವ ಸಾಧನೆ ಮಾಡಲಿದೆ ಎಂಬುದನ್ನು ಯಾರೂ ಊಹಿಸಲು ಸಾಧ್ಯವಿಲ್ಲ. ಆದರೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಅವರ ಪ್ರತಿಭೆಗೆ ಅನುಗುಣವಾಗಿ ಅವಕಾಶಗಳನ್ನು ಕಲ್ಪಿಸುವ ಕೆಲಸವನ್ನು ಸರ್ಕಾರ, ಸಂಘ–ಸಂಸ್ಥೆಗಳು ಮತ್ತು ಸಮುದಾಯ ಮಾಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳ ಪೋಷಕರು ಪಂಚೆ–ಶರ್ಟ್ ಹಾಗೂ ಸೀರೆ ಧರಿಸಿ ಸಾಂಪ್ರದಾಯಿಕ ಉಡುಗೆಯಲ್ಲಿ ಭಾಗವಹಿಸಿದ್ದರು. ಮಕ್ಕಳಿಗೆ ಓಂಕಾರ ಹೇಳಿಕೊಟ್ಟು ಅಕ್ಷರಾಭ್ಯಾಸ ಮಾಡಿಸಲಾಯಿತು. ಮಠದ ಭಕ್ತರು ಅಕ್ಕಿ, ಬೇಳೆಯನ್ನು ಕಾಣಿಕೆಯಾಗಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಆಡಳಿತಾಧಿಕಾರಿ ಡಾ. ಎನ್. ಶಿವರಾಮರೆಡ್ಡಿ, ಬಿಜಿಎಸ್ ಶಾಲೆಯ ಪ್ರಾಂಶುಪಾಲ ಕೆ. ಮಹದೇವ್, ಕೆವಿ ಟ್ರಸ್ಟ್‌ನ ಉಪಾಧ್ಯಕ್ಷ ಬಿಳಿಶಿವಾಲೆ ರವಿ, ಟ್ರಸ್ಟ್‌ನ ಖಜಾಂಚಿ ಮುನಿಶಾಮಿಗೌಡ, ಗೊರಮಡಗು ರಾಜಣ್ಣ, ಶೀಗೆಹಳ್ಳಿ ಚಂದ್ರಶೇಖರ್, ಒಕ್ಕಲಿಗರ ಯುವ ಸೇನೆಯ ಜೆ.ಎಸ್. ವೆಂಕಟಸ್ವಾಮಿ, ಹಂಡಿಗನಾಳ ನಾರಾಯಣಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

10/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬನಶಂಕರಿ ಜಂಕ್ಷನ್ ಅಭಿವೃದ್ಧಿಗೆ ಅಧಿಕಾರಿಗಳೊಂದಿಗೆ ಸಮಾಲೋಚನೆ

ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಬನಶಂಕರಿ ಜಂಕ್ಷನ್ ಅಭಿವೃದ್ಧಿ ಕುರಿತಂತೆ ಪಾಲಿಕೆ ಆಯುಕ್ತ ಕೆ.ಎನ್.ರಮೇಶ್ ಅವರು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಜಯನಗರದ ಪಾಲಿಕೆ ಸಭಾಂಗಣದಲ್ಲಿ ಸಭೆ ನಡೆಸಿದರು.

ಪಾದಚಾರಿಗಳ ಸುರಕ್ಷತೆ ದೃಷ್ಟಿಯಿಂದ ಬನಶಂಕರಿ ಜಂಕ್ಷನ್‌ನಲ್ಲಿ ಪಾದಚಾರಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ಪಾಲಿಕೆ ಉದ್ದೇಶಿಸಿದ್ದು, ಇದಕ್ಕಾಗಿ ಭೂಮಿಪೂಜೆ ಕೂಡ ನೆರವೇರಿಸಲಾಗಿದೆ. ಆದರೆ, ಬನಶಂಕರಿ ಜಂಕ್ಷನ್‌ನಲ್ಲಿ ಉಂಟಾಗುತ್ತಿರುವ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ಬಿಸ್ಮಿಲ್ ಸಂಸ್ಥೆಯ ವತಿಯಿಂದ ಮೇಲ್ಸೇತುವೆ ಮತ್ತು ಕೆಳಸೇತುವೆ ನಿರ್ಮಾಣದ ಯೋಜನೆಯೂ ಪ್ರಸ್ತಾಪವಾಗಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಪಾದಚಾರಿ ಮೇಲ್ಸೇತುವೆ ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಎರಡೂ ಯೋಜನೆಗಳ ಅನುಷ್ಠಾನಕ್ಕೆ ಇರುವ ಸಾಧಕ–ಬಾಧಕಗಳ ಕುರಿತು ಆಯುಕ್ತರು ಅಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಿದರು.

ಸಭೆಯಲ್ಲಿ ಸಲಹೆಗಾರ ಸಂಸ್ಥೆಯಾದ ವೆಂಕಟರಮಣ ಅಸೋಸಿಯೇಟ್ಸ್‌ನ ವಾಸ್ತುಶಿಲ್ಪಿ ನರೇಶ್ ನರಸಿಂಹನ್ ಮಾತನಾಡಿ, ಬನಶಂಕರಿ ಜಂಕ್ಷನ್‌ನಲ್ಲಿ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಪಾದಚಾರಿಗಳು ಸಂಚರಿಸುತ್ತಾರೆ. ಅಲ್ಲದೆ ಬನಶಂಕರಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರ ಸಂಖ್ಯೆಯೂ ಹೆಚ್ಚಿರುವುದರಿಂದ ಪಾದಚಾರಿಗಳ ಸುರಕ್ಷತೆಗಾಗಿ ಸುಸಜ್ಜಿತ ಪಾದಚಾರಿ ಮೇಲ್ಸೇತುವೆ ನಿರ್ಮಾಣ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.



ಪ್ರತ್ಯೇಕ ಬಸ್ ಮಾರ್ಗ ಮತ್ತು ವಾಹನ ನಿಲುಗಡೆ ವ್ಯವಸ್ಥೆ ಕಲ್ಪಿಸುವ ಮೂಲಕ ಈ ಜಂಕ್ಷನ್‌ನ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಬಹುದು ಎಂದು ಅವರು ಸಲಹೆ ನೀಡಿದರು.

ಪಾಲಿಕೆ ಮುಖ್ಯ ಅಭಿಯಂತರರು ಮತ್ತು ಸಲಹೆಗಾರರು ಮಾತನಾಡಿ, ಪಾಲಿಕೆ ಹಾಗೂ ಬೆಂಗಳೂರು ಮೆಟ್ರೋ ರೈಲು ನಿಗಮ ನಡೆಸಿರುವ ಅಧ್ಯಯನಗಳ ಪ್ರಕಾರ, ಪಾದಚಾರಿಗಳ ಸುರಕ್ಷತೆಗಾಗಿ ಬನಶಂಕರಿ ಜಂಕ್ಷನ್‌ಗೆ ಸಂಪರ್ಕ ಕಲ್ಪಿಸುವ ಎಲ್ಲ ರಸ್ತೆಗಳ ತುದಿಗಳನ್ನು ಜೋಡಿಸುವ ಪಾದಚಾರಿ ಮೇಲ್ಸೇತುವೆ ನಿರ್ಮಾಣ ಅತ್ಯಗತ್ಯವಾಗಿದೆ ಎಂದು ತಿಳಿಸಿದರು.

ಈ ಮೇಲ್ಸೇತುವೆಯನ್ನು ಮತ್ತಷ್ಟು ಸುಂದರ ಹಾಗೂ ಪಾದಚಾರಿ ಸ್ನೇಹಿಯಾಗಿಸುವುದು ಮುಖ್ಯವಾಗಿದ್ದು, ಪಾದಚಾರಿಗಳಿಗೆ ಸುರಕ್ಷಿತ ನಡಿಗೆ ಮಾರ್ಗ ಕಲ್ಪಿಸುವುದು ಮೊದಲ ಆದ್ಯತೆಯಾಗಬೇಕು. ಇದು ಪಾದಚಾರಿಗಳಿಗೆ ಆದ್ಯತೆ ನೀಡುವ ಸುಪ್ರೀಂ ಕೋರ್ಟ್ ನಿರ್ದೇಶನಗಳಿಗೂ ಅನುಗುಣವಾಗಿದೆ ಎಂದು ಹೇಳಿದರು.

ಬಿಸ್ಮಿಲ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಪ್ರಹ್ಲಾದ್ ಮಾತನಾಡಿ, ಬನಶಂಕರಿ ಜಂಕ್ಷನ್‌ನಲ್ಲಿ ಪಾದಚಾರಿ ಮೇಲ್ಸೇತುವೆ ನಿರ್ಮಾಣಕ್ಕೆ ತಮ್ಮ ವಿರೋಧವಿಲ್ಲ ಎಂದು ಸ್ಪಷ್ಟಪಡಿಸಿದರು.

ಆದರೆ ಭವಿಷ್ಯದ ದೃಷ್ಟಿಯಿಂದ ಈ ಜಂಕ್ಷನ್‌ನಲ್ಲಿ ವಾಹನ ಸಂಚಾರ ಸುಗಮಗೊಳಿಸಲು ಮೇಲ್ಸೇತುವೆ ಅಥವಾ ಕೆಳಸೇತುವೆ ಒಳಗೊಂಡಿರುವ ಗ್ರೇಡ್ ಸಪರೇಟರ್ ನಿರ್ಮಾಣದ ಸಾಧ್ಯತೆಯನ್ನೂ ಪರಿಶೀಲಿಸಬೇಕು ಎಂದು ಹೇಳಿದರು.

"ಪಾದಚಾರಿ ಮೇಲ್ಸೇತುವೆ ಪ್ರಮುಖ ಯೋಜನೆಯಾಗಿದೆ. ಆದರೆ ಭವಿಷ್ಯದಲ್ಲಿ ಗ್ರೇಡ್ ಸಪರೇಟರ್ ನಿರ್ಮಾಣಕ್ಕೆ ಅದು ಅಡ್ಡಿಯಾಗಬಾರದು. ಈಗಾಗಲೇ ಹೆಚ್ಚಿನ ವಾಹನ ಸಂಚಾರದಿಂದಾಗಿ ಬನಶಂಕರಿ ಜಂಕ್ಷನ್‌ನಲ್ಲಿ ತೀವ್ರ ಸಂಚಾರ ದಟ್ಟಣೆ ಉಂಟಾಗುತ್ತಿದೆ" ಎಂದು ಅವರು ಅಭಿಪ್ರಾಯಪಟ್ಟರು.

ಎರಡೂ ಅಭಿಪ್ರಾಯಗಳನ್ನು ಆಲಿಸಿದ ಆಯುಕ್ತ ಕೆ.ಎನ್. ರಮೇಶ್ ಅವರು, ಪಾದಚಾರಿ ಮೇಲ್ಸೇತುವೆ ಮತ್ತು ಗ್ರೇಡ್ ಸಪರೇಟರ್ ಯೋಜನೆಗಳ ಅಗತ್ಯತೆ, ವೆಚ್ಚ, ಅನುಕೂಲ–ಅನಾನುಕೂಲಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಸಂಚಾರ ಪೊಲೀಸ್ ವಿಭಾಗದ ಉಪ ಆಯುಕ್ತ ಗೋಪಾಲ್ ಎಂ. ಬ್ಯಾಕೋಡ್, ಪಾಲಿಕೆ ಮುಖ್ಯ ಅಭಿಯಂತರ ಬಸವರಾಜ ಕಬಾಡೆ ಸೇರಿದಂತೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು ಮೆಟ್ರೋ ರೈಲು ನಿಗಮ ಹಾಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ನಾಗಚಂದ್ರ ಸಾವು ಪ್ರಕರಣಕ್ಕೆ ಹೊಸ ತಿರುವು:

# ಪತ್ನಿ ವಿರುದ್ಧ ಎಫ್‌ಐಆರ್

ಬೆಂಗಳೂರು

ಬೆಂಗಳೂರಿನ ವಿಜಯನಗರ ಕ್ಲಬ್‌ನ ಮಾಜಿ ಕಾರ್ಯದರ್ಶಿ ಎಸ್. ನಾಗಚಂದ್ರ ಸಾವಿನ ಪ್ರಕರಣ ಇದೀಗ ಹೊಸ ತಿರುವು ಪಡೆದುಕೊಂಡಿದೆ. ಇದುವರೆಗೆ ಅಸಹಜ ಸಾವು ಎಂದು ಪರಿಗಣಿಸಲಾಗಿದ್ದ ಪ್ರಕರಣದಲ್ಲಿ, ಖಾಸಗಿ ದೂರಿನ ಆಧಾರದ ಮೇಲೆ ನಗರದ 24ನೇ ಎಸಿಜೆಎಂ ನ್ಯಾಯಾಲಯದ ಆದೇಶದಂತೆ ವಿಜಯನಗರ ಪೊಲೀಸರು ಎಫ್‌ಐಆರ್ ದಾಖಲಿಸಿ ತನಿಖೆ ಆರಂಭಿಸಿದ್ದಾರೆ.

ನಾಗಚಂದ್ರ ಅವರ ಸ್ನೇಹಿತ ರಾಜುಗೌಡ ನೀಡಿರುವ ದೂರಿನ ಆಧಾರದ ಮೇಲೆ ಪತ್ನಿ ಜೆ. ಚಂದನಾ ವಿರುದ್ಧ ಜೂನ್ 1 ರಂದು ಎಫ್.ಐ.ಆರ್ ದಾಖಲಾಗಿದೆ. ನಾಗಚಂದ್ರ ಅವರ ಅವರ ಸಾವಿನ ಹಿಂದೆ ನಿರ್ಲಕ್ಷ್ಯ ಅಥವಾ ಬೇರೆ ಯಾವುದೇ ಅಪರಾಧ ನಡೆದಿದೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸಲಿದ್ದಾರೆ. ಪ್ರಕರಣದ ಕುರಿತು ಸಲ್ಲಿಸಲಾದ ಖಾಸಗಿ ದೂರಿನಲ್ಲಿ ಹಲವು ಗಂಭೀರ ಆರೋಪಗಳನ್ನು ಮಾಡಲಾಗಿದ್ದು, ಈ ಆರೋಪಗಳು ತನಿಖೆಗೆ ಅರ್ಹವೆಂದು ಕಂಡ ನ್ಯಾಯಾಲಯ ಎಫ್‌ಐಆರ್ ದಾಖಲಿಸುವಂತೆ ಆದೇಶಿಸಿತ್ತು.

ರಕ್ತದೊತ್ತಡದಿಂದ ಬಳಲುತ್ತಿದ್ದ ನಾಗಚಂದ್ರ ಅವರು ಧೂಮಪಾನ, ಮದ್ಯಪಾನದ ಜೊತೆಗೆ ಬೆನ್ನು ಮೂಳೆಯ ಕಾಯಿಲೆಯಿಂದಲೂ ಸಹ ಬಳಲುತ್ತಿದ್ದರು. 2024 ರ ಅಕ್ಟೋಬರ್ 24 ರಂದು ಬೆಳಿಗ್ಗೆ ಇವರಿಗೆ ಪತ್ನಿ ಮಾತ್ರೆ ಕೊಟ್ಟು ಮಲಗಿಸಿದ್ದರು. ಸಂಜೆ 5.45 ರ ವೇಳೆಗೆ ಪತ್ನಿ ಚಂದನಾ ಎಬ್ಬಿಸಿದಾಗ ಪ್ರತಿಕ್ರಿಯೆ ನೀಡಿರಲಿಲ್ಲ.

ಬಳಿಕ ವಿಜಯನಗರದ ಸನ್ ಫ್ಲವರ್ ಆಸ್ಪತ್ರೆಗೆ ಕರೆದೊಯ್ದಾಗ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದರು. ಆದರೆ ವಿಕ್ಟೋರಿಯಾ ಆಸ್ಪತ್ರೆ ವೈದ್ಯರು ಸರಿಯಾಗಿ ಮರಣೋತ್ತರ ಪರೀಕ್ಷೆ ನಡೆಸಿಲ್ಲ ಎಂದು ಅರ್ಜಿದಾರರು ದೂರು ನೀಡಿದ್ದಾರೆ. ನಾಗಚಂದ್ರ ಅವರ ಕೊಠಡಿಯಲ್ಲಿ ಮಾನಸಿಕ ಚಿಕಿತ್ಸೆಗೆ ಸಂಬಂಧಿಸಿದ ಮಾತ್ರೆಗಳು, ಸಿಗರೇಟ್ ಪ್ಯಾಕ್ ಗಳು, ಮದ್ಯದ ಬಾಟಲಿಗಳು ದೊರೆತಿವೆ. ಕೊಠಡಿಯ ಸ್ವಚ್ಛತೆಗೆ ಆದ್ಯತೆ ನೀಡದೇ ನಾಗಚಂದ್ರ ಅವರ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸಿರುವುದು ಕಂಡು ಬಂದಿದೆ ಎಂಬುದಾಗಿ ಅರ್ಜಿದಾರರು ಆರೋಪಿಸಿದ್ದಾರೆ.

ನಾಗಚಂದ್ರ ಪ್ರಕರಣದಲ್ಲಿ ಸತ್ಯದ ಹುಡುಕಾಟಕ್ಕೆ ಹೊಸ ಅಧ್ಯಾಯ ಪ್ರಾರಂಭವಾಗಿದೆ. ಕೆಲವೊಮ್ಮೆ ಒಂದು ಸಾವು ಕೇವಲ ಒಂದು ಕುಟುಂಬದ ದುಃಖವಾಗಿರುವುದಿಲ್ಲ. ಅದು ಅನೇಕ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ಸಂಬಂಧಗಳ ನಿಜಸ್ವರೂಪ, ನ್ಯಾಯ ವ್ಯವಸ್ಥೆಯ ಮೇಲಿನ ನಂಬಿಕೆ ಹಾಗೂ ಸತ್ಯದ ಅನ್ವೇಷಣೆಯ ಅಗತ್ಯವನ್ನು ಸಮಾಜದ ಮುಂದೆ ನಿಲ್ಲಿಸುತ್ತದೆ. ನಾಗಚಂದ್ರ ಅವರ ಸಾವಿನ ಪ್ರಕರಣವೂ ಇದೀಗ ಅಂತಹ ಹಂತವನ್ನು ತಲುಪಿದೆ.

## 'ಎಸ್‌ಐಆರ್‌ಗೂ ಸರ್ಕಾರಕ್ಕೂ ಸಂಬಂಧವಿಲ್ಲ'

ಬೆಂಗಳೂರು

ಬೇರೆ ರಾಜ್ಯಗಳಲ್ಲಿ ಎಸ್‌ಐಆರ್ ಪ್ರಕ್ರಿಯೆ ಹೇಗೆ ನಡೆದಿತ್ತು ಎಂಬುದನ್ನು ಬಿಜೆಪಿ ಮುಖಂಡರು ಪರಿಶೀಲಿಸಲಿ. ಈ ಪ್ರಕ್ರಿಯೆಯಲ್ಲಿ ಯಾವುದೇ ಗೊಂದಲಗಳಿದ್ದರೂ ಅದಕ್ಕೆ ರಾಜ್ಯ ಸರ್ಕಾರ ಜವಾಬ್ದಾರಿಯಲ್ಲ. ಚುನಾವಣಾ ಆಯೋಗ ಒಂದು ತಿಂಗಳ ಅವಧಿಯಲ್ಲಿ ಪ್ರಕ್ರಿಯೆ ಪೂರ್ಣಗೊಳಿಸಲು ಸಿಬ್ಬಂದಿಯನ್ನು ಕೋರಿದ್ದರಿಂದ ಸರ್ಕಾರ ಅಗತ್ಯ ಸಿಬ್ಬಂದಿಯನ್ನು ಒದಗಿಸಿದೆ ಎಂದು ಹೇಳಿದರು. ಎಸ್‌ಐಆರ್ ಪ್ರಕ್ರಿಯೆ ಕುರಿತು ಬಿಜೆಪಿ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದರೆ, ಅದನ್ನು ಆಯೋಗವೇ ಪರಿಶೀಲಿಸಿ ತೀರ್ಮಾನ ಕೈಗೊಳ್ಳಲಿದೆ. ಈ ವಿಚಾರದಲ್ಲಿ ರಾಜ್ಯ ಸರ್ಕಾರದ ಯಾವುದೇ ಪಾತ್ರ ಇಲ್ಲ ಎಂದು ಅವರು ಪುನರುಚ್ಚರಿಸಿದರು.

ಗ್ರಾಮ ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳ ಕುರಿತು ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿ ಈಗಾಗಲೇ ಚುನಾವಣೆ ನಡೆಸುವ ಕುರಿತು ಸ್ಪಷ್ಟನೆ ನೀಡಿದ್ದಾರೆ. ಸೂಕ್ತ ಸಮಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ನಡೆಸಲಾಗುವುದು ಎಂದು ಹೇಳಿದರು.

ತುಮಕೂರಿನ ಕೆಲವು ಮಸೀದಿಗಳಲ್ಲಿ ಎಸ್‌ಐಆರ್ ಅರ್ಜಿಗಳನ್ನು ಭರ್ತಿ ಮಾಡಲಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಬಿಎಲ್‌ಒಗಳು ಕಾರ್ಯನಿರ್ವಹಿಸುತ್ತಿದ್ದು, ಯಾವುದೇ ನಿಯಮ ಉಲ್ಲಂಘನೆ ನಡೆದಿದ್ದರೆ ಅದರ ಬಗ್ಗೆ ಚುನಾವಣಾ ಆಯೋಗವೇ ಕ್ರಮ ಕೈಗೊಳ್ಳಬೇಕು ಎಂದರು.

# ತೆರವಿಗೆ ಸಜ್ಜು

ಬೆಂಗಳೂರು

ಅಂತಹ ವಾಹನಗಳನ್ನು ಕ್ರೇನ್ ಮೂಲಕ ಎಳೆದುಕೊಂಡು ಹೋಗಿ ಜಪ್ತಿ ಮಾಡಲಾಗುತ್ತದೆ.

ಜಪ್ತಿ ಮಾಡಲಾದ ವಾಹನಗಳನ್ನು ಜಾರಿಯಲ್ಲಿರುವ ನಿಯಮಾವಳಿಗಳ ಪ್ರಕಾರ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು ಎಂದು ಜಿಬಿಎ ತಿಳಿಸಿದೆ.

ನಗರದ ರಸ್ತೆಗಳಲ್ಲಿ ಅನಾಥ ವಾಹನಗಳಿಂದ ಉಂಟಾಗುತ್ತಿರುವ ಸಂಚಾರ ದಟ್ಟಣೆ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಹಾಗೂ ಸುರಕ್ಷತಾ ಸಮಸ್ಯೆಗಳನ್ನು ನಿವಾರಿಸುವ ಉದ್ದೇಶದಿಂದ ಈ ವಿಶೇಷ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಕದನವಿರಾಮ ಅಂತ್ಯ

ಬೆಂಗಳೂರು

ಇದಕ್ಕೂ ಮೊದಲು ಹಾರ್ಮುಜ್ ಜಲಸಂಧಿಯಲ್ಲಿ ಸಂಚರಿಸುತ್ತಿದ್ದ ಮೂರು ವಾಣಿಜ್ಯ ತೈಲ ಹಡಗುಗಳ ಮೇಲೆ ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆದಿದ್ದು, ಇದಕ್ಕೆ ಇರಾನ್ ಹೊಣೆ ಎಂದು ಅಮೆರಿಕ ಆರೋಪಿಸಿದೆ. ಈ ದಾಳಿಯು ಕದನ ವಿರಾಮ ಒಪ್ಪಂದದ ಉಲ್ಲಂಘನೆಯಾಗಿದೆ ಎಂದು ಅಮೆರಿಕ ಹೇಳಿದೆ.

ಇದೇ ವೇಳೆ, ಇರಾನ್‌ಗೆ ತೈಲ ಮಾರಾಟಕ್ಕೆ ನೀಡಲಾಗಿದ್ದ ಕೆಲವು ಸೌಲಭ್ಯಗಳನ್ನು ಅಮೆರಿಕ ರದ್ದುಗೊಳಿಸಿರುವುದಾಗಿ ವರದಿಯಾಗಿದೆ.

ಟ್ರಂಪ್, ಇರಾನ್ ನಾಯಕತ್ವದ ವಿರುದ್ಧವೂ ತೀವ್ರ ವಾಗ್ದಾಳಿ ನಡೆಸಿದ್ದು, ಇರಾನ್‌ನೊಂದಿಗೆ ಮುಂದಿನ ಮಾತುಕತೆ ನಡೆಸುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಹೇಳಿದ್ದಾರೆ.

ಈ ಬೆಳವಣಿಗೆಗಳಿಂದ ಮಧ್ಯಪ್ರಾಚ್ಯದಲ್ಲಿ ಮತ್ತೆ ಸಂಘರ್ಷ ತೀವ್ರಗೊಳ್ಳುವ ಸಾಧ್ಯತೆ ಹೆಚ್ಚಾಗಿದ್ದು, ಜಾಗತಿಕ ತೈಲ ಮಾರುಕಟ್ಟೆ, ಸಾಗಾಣಿಕೆ ಮತ್ತು ಅಂತರರಾಷ್ಟ್ರೀಯ ಭದ್ರತೆಯ ಮೇಲೂ ಪರಿಣಾಮ ಬೀರುವ ಆತಂಕ ವ್ಯಕ್ತವಾಗಿದೆ.

ಸೂಚನೆ: ಈ ಸುದ್ದಿಯಲ್ಲಿರುವ ದಾಳಿ, ಕದನ ವಿರಾಮ ಅಂತ್ಯ ಹಾಗೂ ಇತರೆ ಅಂತರರಾಷ್ಟ್ರೀಯ ಬೆಳವಣಿಗೆಗಳ ಕುರಿತು ಸ್ವತಂತ್ರ ಅಧಿಕೃತ ದೃಢೀಕರಣವನ್ನು ಪರಿಶೀಲಿಸುವುದು ಅಗತ್ಯ. ಈ ಮಾಹಿತಿ ಬಳಕೆದಾರರು ಒದಗಿಸಿದ ಪಠ್ಯವನ್ನು ಸುದ್ದಿ ಶೈಲಿಯಲ್ಲಿ ಮರುರಚಿಸಿರುವುದಾಗಿದೆ.

# ಮತ್ತೆ ದಾಳಿ

/

ಅಮೆರಿಕದ ಕ್ರಮವನ್ನು ತೀವ್ರವಾಗಿ ಖಂಡಿಸಿರುವ ಇರಾನ್, ಇದು ಪರಸ್ಪರ ಒಪ್ಪಂದದ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದ್ದು, ಇದಕ್ಕೆ ತಕ್ಕ ಪ್ರತಿಕ್ರಿಯೆ ನೀಡುವುದಾಗಿ ಎಚ್ಚರಿಕೆ ನೀಡಿದೆ. ಅಮೆರಿಕದ ಸೆಂಟ್ರಲ್ ಕಮಾಂಡ್ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, ಹಾರ್ಮುಜ್ ಜಲಸಂಧಿಯಲ್ಲಿ ಸಂಚರಿಸುತ್ತಿದ್ದ ವಾಣಿಜ್ಯ ಹಡಗುಗಳ ಮೇಲಿನ ದಾಳಿಗೆ ಪ್ರತಿಯಾಗಿ ಇರಾನ್‌ನ ಹಲವು ಪ್ರದೇಶಗಳನ್ನು ಗುರಿಯಾಗಿಸಿ "ನಿಖರ ಮತ್ತು ಪ್ರಬಲ" ವೈಮಾನಿಕ ದಾಳಿ ನಡೆಸಲಾಗಿದೆ.

ಜಾಗತಿಕ ತೈಲ ಸಾಗಣೆ ಮತ್ತು ವ್ಯಾಪಾರದ ದೃಷ್ಟಿಯಿಂದ ಅತ್ಯಂತ ಮಹತ್ವದ ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳ ಮೇಲಿನ ದಾಳಿಯನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಅಮೆರಿಕ ಸ್ಪಷ್ಟಪಡಿಸಿದೆ.



ಸಿಎಂ ಡಿ ಕೆ ಶಿವಕುಮಾರ್ ಅವರು ರಾಜ್ಯಪಾಲ ಥಾವರ್ ಚಂದ್ ಗೆಹಲೋಟ್ ಅವರನ್ನು ಲೋಕಭವನದಲ್ಲಿ ಬುಧವಾರ ರಾತ್ರಿ ಸೌಜನ್ಯದ ಭೇಟಿ ಮಾಡಿದ್ದರು.

# ಹಾಲಿನ ಪ್ರೋತ್ಸಾಹಧನ ರೂ.10ಕ್ಕೆ ಹೆಚ್ಚಿಸಲು ಒತ್ತಾಯ




ದೇವನಹಳ್ಳಿ

ರಾಜ್ಯ ಸರ್ಕಾರವು ಹಾಲು ಉತ್ಪಾದಕ ರೈತರಿಗೆ ನೀಡುತ್ತಿರುವ ಪ್ರತಿ ಲೀಟರ್‌ಗೆ ರೂ.5ರ ಪ್ರೋತ್ಸಾಹಧನವನ್ನು ರೂ.10ಕ್ಕೆ ಹೆಚ್ಚಿಸಬೇಕು ಎಂದು ಬಮೂಲ್ ನಿರ್ದೇಶಕ ಎಸ್.ಪಿ. ಮುನಿರಾಜು ಒತ್ತಾಯಿಸಿದ್ದಾರೆ.

ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ಅವರ ನೇತೃತ್ವದಲ್ಲಿ ಹಾಲು ಉತ್ಪಾದಕರ ಹಿತಕ್ಕಾಗಿ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ. ಈಗಾಗಲೇ ಯುಗಾದಿ ಬೋನಸ್ ರೂಪದಲ್ಲಿ ಪ್ರತಿ ಲೀಟರ್ ಹಾಲಿಗೆ ರೂ.1ರಂತೆ ಸುಮಾರು ರೂ.60 ಕೋಟಿ ಹಣವನ್ನು ರೈತರ ಖಾತೆಗೆ ಜಮಾ ಮಾಡಲಾಗಿದೆ. ಆದರೆ ಮಳೆಯ ಕೊರತೆಯಿಂದ ಹಸುಗಳಿಗೆ ಅಗತ್ಯವಾದ ಆಹಾರ ಒದಗಿಸಲು ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರ ನೀಡುತ್ತಿರುವ ರೂ.5ರ ಪ್ರೋತ್ಸಾಹಧನವನ್ನು ರೂ.10ಕ್ಕೆ ಹೆಚ್ಚಿಸಬೇಕು ಎಂದು ಅವರು ಆಗ್ರಹಿಸಿದರು.

ದೇವನಹಳ್ಳಿ ತಾಲೂಕಿನ ಬೀರಸಂದ್ರ ಬಳಿಯ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಹಾಲು ಉತ್ಪಾದಕ ರೈತರಿಗೆ ನೀಡಲಾಗುತ್ತಿರುವ ಪ್ರೋತ್ಸಾಹಧನ ಹೆಚ್ಚಳಕ್ಕೆ ಆಗ್ರಹಿಸಿ ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ಸಲ್ಲಿಸುವ ಮನವಿಯನ್ನು ತಹಸೀಲ್ದಾರ್ ರಾಜೀವ್ ಲೋಚನ ಅವರಿಗೆ ನೀಡಿದ ಬಳಿಕ ಅವರು ಮಾತನಾಡಿದರು.

ಹೈನುಗಾರಿಕೆಗೆ ಅಗತ್ಯವಾದ ಹಿಂಡಿ, ಬೂಸಾ, ಮೇವು ಸೇರಿದಂತೆ ವಿವಿಧ ಕಚ್ಚಾ ವಸ್ತುಗಳ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದೆ. ರೈತರ ಸಂಕಷ್ಟವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಖರೀದಿಸುವ ಪ್ರತಿ ಲೀಟರ್ ಹಾಲಿಗೆ ಕನಿಷ್ಠ ರೂ.10ರ ಪ್ರೋತ್ಸಾಹಧನ ನೀಡಬೇಕು ಎಂದು ಅವರು ಹೇಳಿದರು.

ಗ್ರಾಮೀಣ ಭಾಗದಲ್ಲಿ ಶೇ.80ಕ್ಕೂ ಹೆಚ್ಚು ಮಹಿಳೆಯರು ಹೈನುಗಾರಿಕೆಯನ್ನು ಅವಲಂಬಿಸಿ ಕುಟುಂಬ ನಿರ್ವಹಿಸುತ್ತಿದ್ದಾರೆ. ಲಕ್ಷಾಂತರ ರೈತರು ಇದೇ ವೃತ್ತಿಯಿಂದ ಜೀವನ ಸಾಗಿಸುತ್ತಿದ್ದಾರೆ. ರಾಜ್ಯದ ಹಲವು ಭಾಗಗಳಲ್ಲಿ ಬರದ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ತನ್ನ ಪ್ರಣಾಳಿಕೆಗೆ ಅನುಗುಣವಾಗಿ ಹಾಲಿನ ಪ್ರೋತ್ಸಾಹಧನ ಹೆಚ್ಚಿಸಬೇಕು ಎಂದು ಎಸ್.ಪಿ. ಮುನಿರಾಜು ಒತ್ತಾಯಿಸಿದರು.

ಕನ್ನಮಂಗಲ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಕೆ.ಸಿ. ಮಂಜುನಾಥ್ ಮಾತನಾಡಿ, ರೈತರ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ಪ್ರೋತ್ಸಾಹಧನ ಹೆಚ್ಚಿಸಬೇಕು. ಕೊರೊನಾ ಸಂಕಷ್ಟದ ಸಂದರ್ಭದಲ್ಲಿಯೂ ರೈತರು ನಿರಂತರವಾಗಿ ಹಾಲು ಪೂರೈಕೆ ಮಾಡಿದ್ದರು. ಇದೀಗ ಬರದ ಪರಿಣಾಮ ಹಸುಗಳಿಗೆ ಆಹಾರ ಒದಗಿಸುವಲ್ಲಿ ಸಮಸ್ಯೆ ಎದುರಾಗಿದ್ದು, ಸರ್ಕಾರ ರೈತರ ಮನವಿಗೆ ಸ್ಪಂದಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಜಿಲ್ಲಾಧ್ಯಕ್ಷ ಬಿ.ಎನ್. ಲೋಕೇಶ್, ತಾಲೂಕು ಅಧ್ಯಕ್ಷ ಚನ್ನಕೇಶವ, ತಾಲೂಕಿನ ವಿವಿಧ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಹಾಲು ಉತ್ಪಾದಕ ರೈತರು ಉಪಸ್ಥಿತರಿದ್ದರು.

# ಅಗಲಕೋಟೆ ಸರ್ಕಾರಿ ಜಮೀನು ವಿವಾದ: ತನಿಖಾ ತಂಡ ರಚನೆ

ಮಾಲೂರು

ತಾಲೂಕಿನ ಅಗಲಕೋಟೆ ಗ್ರಾಮದ ವಿವಾದಿತ ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಮೂಲ ದಾಖಲೆಗಳ ತನಿಖೆಗಾಗಿ ಅಧಿಕಾರಿಗಳ ತಂಡ ರಚಿಸಿರುವುದು ನಮ್ಮ ಹೋರಾಟಕ್ಕೆ ಸಿಕ್ಕ ಜಯವಾಗಿದೆ ಎಂದು ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಹೇಳಿದ್ದಾರೆ.

ನಗರದ ಹೊರವಲಯದ ವೈಟ್‌ಗಾರ್ಡನ್ ಬಡಾವಣೆಯಲ್ಲಿರುವ ತಾಲೂಕು ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಗಲಕೋಟೆ ಗ್ರಾಮದ ಸರ್ವೆ ನಂಬರ್ 2, 7, 8, 10, 18, 60, 61, 63 ಮತ್ತು 64ರ ಸರ್ಕಾರಿ ಜಮೀನುಗಳಿಗೆ ಅಕ್ರಮ ದಾಖಲೆಗಳನ್ನು ಸೃಷ್ಟಿಸಿ ಖಾಸಗಿ ವ್ಯಕ್ತಿಗಳು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿತ್ತು. ಇದೀಗ ಮೂಲ ದಾಖಲೆಗಳನ್ನು ಪ್ರಾದೇಶಿಕ ಆಯುಕ್ತರ ವಶಕ್ಕೆ ಪಡೆದು ತನಿಖೆ ನಡೆಸಲು ಅಧಿಕಾರಿಗಳ ತಂಡ ರಚಿಸಿರುವುದು ಸ್ವಾಗತಾರ್ಹ ಬೆಳವಣಿಗೆ ಎಂದು ತಿಳಿಸಿದರು.

ವಿವಾದಿತ ಜಮೀನಿನ ಕುರಿತು ಕಂದಾಯ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳು ಯಾವುದೇ ಅಕ್ರಮ ನಡೆದಿಲ್ಲ ಎಂದು ಹೇಳಿದ್ದರು. ಆದರೆ ಸರ್ಕಾರಿ ಜಮೀನುಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಒತ್ತುವರಿ ಮಾಡಿರುವ ಬಗ್ಗೆ ದಾಖಲೆಗಳೊಂದಿಗೆ ಸರ್ಕಾರದ ಗಮನ ಸೆಳೆದಿದ್ದೇವೆ. ಜಿಲ್ಲಾಧಿಕಾರಿಗಳ ಅಧಿಕೃತ ವರದಿ ಬಂದ ಬಳಿಕ ಎಷ್ಟು ಪ್ರಮಾಣದ ಸರ್ಕಾರಿ ಜಮೀನು ಒತ್ತುವರಿಯಾಗಿದೆ ಎಂಬುದು ಸ್ಪಷ್ಟವಾಗಲಿದೆ ಎಂದರು.



ಸರ್ಕಾರಿ ಶಾಲೆ, ರಸ್ತೆ, ಕೆರೆ ಹಾಗೂ ಗೋಮಾಳ ಜಮೀನುಗಳಿಗೂ ನಕಲಿ ದಾಖಲೆಗಳ ಮೂಲಕ ಹಕ್ಕು ಸೃಷ್ಟಿಸಲಾಗಿದೆ ಎಂಬ ಆರೋಪವಿದೆ. ಗೋಮಾಳ, ಗುಂಡುತೋಪು ಸೇರಿದಂತೆ ಸರ್ಕಾರಿ ಜಮೀನುಗಳ ದಾಖಲೆಗಳು ಹೇಗೆ ಸೃಷ್ಟಿಯಾದವು ಎಂಬ ಬಗ್ಗೆ ಸಮಗ್ರ ತನಿಖೆ ಅಗತ್ಯವಿದೆ ಎಂದು ಹೇಳಿದರು.

ಅಗಲಕೋಟೆ ಪ್ರದೇಶದಲ್ಲಿ ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ದಾಖಲೆಗಳಲ್ಲಿ ಹಲವು ಗೊಂದಲಗಳಿವೆ. ದಾಖಲೆಗಳ ಪರಿಶೀಲನೆ ನಡೆದರೆ ನಿಜಾಂಶ ಹೊರಬರಲಿದೆ. ಸರ್ಕಾರದ ಜಮೀನುಗಳನ್ನು ರಕ್ಷಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಮಂಜುನಾಥ್ ಗೌಡ ಹೇಳಿದರು.

ಕೆಲವು ಹೊರರಾಜ್ಯದವರು ಬಂದು ಸರ್ಕಾರಿ ಹಾಗೂ ರೈತರ ಜಮೀನುಗಳ ಮೇಲೆ ಕಣ್ಣು ಹಾಕುತ್ತಿದ್ದಾರೆ. ಇದಕ್ಕೆ ಕೆಲ ಅಧಿಕಾರಿಗಳು ಮತ್ತು ರಾಜಕಾರಣಿಗಳ ಬೆಂಬಲವಿದೆ ಎಂಬ ಆರೋಪಗಳಿದ್ದು, ಇಂತಹ ಅಕ್ರಮಗಳಿಗೆ ಕಡಿವಾಣ ಹಾಕಬೇಕು ಎಂದು ಅವರು ಆಗ್ರಹಿಸಿದರು.

ಸರ್ಕಾರ ಎಸ್‌ಐಟಿ ತನಿಖಾ ತಂಡ ರಚಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ಅಗಲಕೋಟೆ ಶಾಲಾ ಜಮೀನು ಸೇರಿದಂತೆ ಸರ್ಕಾರಿ ಆಸ್ತಿಗಳನ್ನು ಕಾನೂನು ಪ್ರಕಾರ ರಕ್ಷಿಸಬೇಕು. ಸರ್ಕಾರಿ ದಾರಿಗಳು, ಕೆರೆಗಳು ಹಾಗೂ ಕಾಲುವೆಗಳ ಒತ್ತುವರಿಯನ್ನು ತೆರವುಗೊಳಿಸಬೇಕು ಎಂದು ಹೇಳಿದರು.

ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣಗಳ ಕುರಿತು ಪ್ರತಿಕ್ರಿಯಿಸಿದ ಅವರು, ರಾಜಕೀಯವಾಗಿ ನನ್ನನ್ನು ಹತ್ತಿಕ್ಕಲು ಪ್ರಯತ್ನಿಸಲಾಗುತ್ತಿದೆ. ಆದರೆ ಸರ್ಕಾರಿ ಜಮೀನು ಉಳಿಸುವ ಹೋರಾಟದಿಂದ ಹಿಂದೆ ಸರಿಯುವುದಿಲ್ಲ. ದಾಖಲೆಗಳ ಮೂಲಕ ಸತ್ಯ ಹೊರಬರುತ್ತಿದೆ ಎಂದು ತಿಳಿಸಿದರು.

ಮಾಲೂರು ಕ್ಷೇತ್ರದ ಅಭಿವೃದ್ಧಿ ಹಾಗೂ ಸರ್ಕಾರಿ ಆಸ್ತಿ ರಕ್ಷಣೆಗೆ ಮುಂದಿನ ದಿನಗಳಲ್ಲಿಯೂ ಹೋರಾಟ ಮುಂದುವರಿಸಲಾಗುವುದು. ಇದು ಯಾವುದೇ ವೈಯಕ್ತಿಕ ರಾಜಕೀಯ ಹೋರಾಟವಲ್ಲ, ಸರ್ಕಾರಿ ಸಂಪತ್ತನ್ನು ಉಳಿಸುವ ಹೋರಾಟವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ಟಿ.ಬಿ. ಕೃಷ್ಣಪ್ಪ, ವಕೀಲ ಶ್ರೀನಿವಾಸ್, ನಗರಸಭೆ ಮಾಜಿ ಸದಸ್ಯ ಎಂ.ಎಸ್. ಪ್ರದೀಪ್ ರೆಡ್ಡಿ, ವಕೀಲ ರಾಜಕುಮಾರ್, ಬಿಜೆಪಿ ಮುಖಂಡರಾದ ಅಗ್ರಿ ನಾರಾಯಣಪ್ಪ, ಚಂದ್ರಶೇಖರ್, ಸೋಮಣ್ಣ, ಸಂತೋಷ್ ಬಾಬು, ಅಧಿಕಾರ ಹಟ್ಟಿ ಬಾಬು, ಕಿರಣ್, ನಾರಾಯಣಸ್ವಾಮಿ, ವೇಣುಗೋಪಾಲ್, ಹನುಮಂತಪ್ಪ, ವಿನೋದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹಣದಿಂದಲೇ ಶ್ರೀಮಂತಿಕೆ ದೊರೆಯುವುದಿಲ್ಲ: ಸಿದ್ಧಗಂಗಾ ಶ್ರೀ

ದೊಡ್ಡಬಳ್ಳಾಪುರ

ಹಣ ಹೆಚ್ಚಾದರೆ ಸುಖ–ನೆಮ್ಮದಿ ದೊರೆಯುತ್ತದೆ ಎಂಬ ಭಾವನೆ ತಪ್ಪು. ಹಣದಿಂದಲೇ ಶ್ರೀಮಂತಿಕೆ ಸಿಗುವುದಿಲ್ಲ. ಆರೋಗ್ಯವೇ ಮನುಷ್ಯನ ನಿಜವಾದ ಸಂಪತ್ತು ಎಂದು ಸಿದ್ದಗಂಗಾ ಮಠದ ಪೀಠಾಧ್ಯಕ್ಷ ಶ್ರೀ ಸಿದ್ದಗಂಗ ಮಹಾಸ್ವಾಮೀಜಿ ಹೇಳಿದರು.

ನಗರದ ಎಪಿಎಂಸಿ ಬಳಿ ಇರುವ ಲಯನ್ಸ್ ಕ್ಲಬ್ ವತಿಯಿಂದ ಲಯನ್ಸ್ ಚಾರಿಟೀಸ್ ಟ್ರಸ್ಟ್ ಆವರಣದಲ್ಲಿ ಆಯೋಜಿಸಿದ್ದ ಉಚಿತ ಕಣ್ಣಿನ ಪರೀಕ್ಷೆ ಮತ್ತು ಕಣ್ಣಿನ ಮಸೂರ ಅಳವಡಿಕೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಇಂದಿನ ದಿನಗಳಲ್ಲಿ ಗಾಳಿ, ನೀರು ಮತ್ತು ಮಣ್ಣಿನ ಮಾಲಿನ್ಯದಿಂದ ವಾತಾವರಣ ಕಲುಷಿತವಾಗುತ್ತಿದ್ದು, ಇದರ ಪರಿಣಾಮವಾಗಿ ಮನುಷ್ಯನ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಆರೋಗ್ಯ ಕಾಪಾಡಿಕೊಳ್ಳುವುದು ದೊಡ್ಡ ಸವಾಲಾಗಿದೆ. ಇದರ ಜೊತೆಗೆ ದುಶ್ಚಟಗಳಿಗೆ ಒಳಗಾಗಿ ಆರೋಗ್ಯ ಹಾಳು ಮಾಡಿಕೊಳ್ಳುತ್ತಿರುವವರ ಸಂಖ್ಯೆಯೂ ಹೆಚ್ಚಾಗುತ್ತಿದೆ. ದುಶ್ಚಟಗಳಿಂದ ದೂರ ಉಳಿಯದೆ ಉತ್ತಮ ಜೀವನ ನಡೆಸಲು ಸಾಧ್ಯವಿಲ್ಲ ಎಂದು ಶ್ರೀಗಳು ಹೇಳಿದರು.

ಹಣ ಇದ್ದರೂ ನೆಮ್ಮದಿ ಇಲ್ಲದೆ ಬದುಕುತ್ತಿರುವ ಅನೇಕ ಜನರಿದ್ದಾರೆ. ಇಂದು ಆರೋಗ್ಯವೇ ಮಹಾ ಭಾಗ್ಯವಾಗಿದೆ. ತಂಬಾಕು ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಜನರು ತಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಹಿಂದೆ ಅಪರೂಪವಾಗಿದ್ದ ಕ್ಯಾನ್ಸರ್‌ನಂತಹ ಕಾಯಿಲೆಗಳು ಈಗ ಸಾಮಾನ್ಯವಾಗುತ್ತಿವೆ. ಮಕ್ಕಳಲ್ಲಿಯೂ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಮಕ್ಕಳು ತಮ್ಮ ತಂದೆ–ತಾಯಿಗಳನ್ನು ನೋಡಿ ಜೀವನದ ಮೌಲ್ಯಗಳನ್ನು ಕಲಿಯುತ್ತಾರೆ. ಆದ್ದರಿಂದ ಪೋಷಕರು ಮಕ್ಕಳ ಮುಂದೆ ಉತ್ತಮ ನಡವಳಿಕೆ ತೋರಬೇಕು. ಸಿನಿಮಾ ನಟರು ಹಾಗೂ ಇತರರನ್ನು ಮಾದರಿಯನ್ನಾಗಿ ಮಾಡಿಕೊಳ್ಳುವ ಬದಲು ತಂದೆ–ತಾಯಿಗಳೇ ಮಕ್ಕಳಿಗೆ ಆದರ್ಶವಾಗಬೇಕು. ಮಕ್ಕಳಿಗೆ ಉತ್ತಮ ಸಂಸ್ಕಾರ ಮತ್ತು ಆರೋಗ್ಯಕರ ವಾತಾವರಣ ಕಲಿಸಿ ದೇಶಕ್ಕೆ ಉತ್ತಮ ಕೊಡುಗೆ ನೀಡುವಂತೆ ಬೆಳೆಸಬೇಕು ಎಂದು ಶ್ರೀ ಸಿದ್ದಗಂಗ ಮಹಾಸ್ವಾಮೀಜಿ ಸಲಹೆ ನೀಡಿದರು.

ಮನುಷ್ಯನ ಜೀವನ ಸಾರ್ಥಕವಾಗಬೇಕಾದರೆ ಪರೋಪಕಾರದ ಗುಣ ಇರಬೇಕು. ತಾವು ಗಳಿಸಿದ ಸಂಪತ್ತಿನ ಸ್ವಲ್ಪ ಭಾಗವನ್ನು ಸಮಾಜದ ಒಳಿತಿಗಾಗಿ ಬಳಸಿದಾಗ ನಿಜವಾದ ನೆಮ್ಮದಿ ದೊರೆಯುತ್ತದೆ. ಈ ನಿಟ್ಟಿನಲ್ಲಿ ಲಯನ್ಸ್ ಕ್ಲಬ್‌ನಂತಹ ಸಂಸ್ಥೆಗಳು ಸಮಾಜಮುಖಿ ಸೇವೆಗಳನ್ನು ಮಾಡುತ್ತಿರುವುದು ಶ್ಲಾಘನೀಯವಾಗಿದೆ. ವಿಶೇಷವಾಗಿ ಕಣ್ಣಿನಂತಹ ಪ್ರಮುಖ ಅಂಗದ ಆರೋಗ್ಯಕ್ಕಾಗಿ ಶಸ್ತ್ರಚಿಕಿತ್ಸಾ ಶಿಬಿರಗಳನ್ನು ಆಯೋಜಿಸುತ್ತಿರುವುದು ಅಭಿನಂದನೀಯ ಎಂದು ಹೇಳಿದರು.

ಮಾಜಿ ಶಾಸಕ ವಿ. ಕೃಷ್ಣಪ್ಪ ಮಾತನಾಡಿ, ಸೇವಾ ಕಾರ್ಯಗಳಲ್ಲಿ ಲಯನ್ಸ್ ಕ್ಲಬ್ ಮುಂಚೂಣಿಯಲ್ಲಿದೆ. ಇಂತಹ ಆರೋಗ್ಯ ಶಿಬಿರಗಳು ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಹೆಚ್ಚಿನ ಅನುಕೂಲವಾಗಲಿದ್ದು, ಮುಂದಿನ ದಿನಗಳಲ್ಲಿಯೂ ಇಂತಹ ಸಮಾಜಮುಖಿ ಕಾರ್ಯಗಳು ಹೆಚ್ಚಾಗಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಲಯನ್ಸ್ ಕ್ಲಬ್ ಅಧ್ಯಕ್ಷೆ ಎಲ್.ಎನ್. ವಸುಂಧರಾ ದೇವಿ ವಹಿಸಿದ್ದರು. ಶಿಬಿರವನ್ನು ಶೀಲಾವತಿ ಹಾಗೂ ಲಯನ್ ಕೆ.ಜಿ. ಗೋಪಾಲ್ ಮತ್ತು ಕುಟುಂಬದವರು ಪ್ರಾಯೋಜಿಸಿದ್ದರು.

ಕಾರ್ಯಕ್ರಮದಲ್ಲಿ ಲಯನ್ಸ್ ಜಿಲ್ಲಾ ಉಪ ರಾಜ್ಯಪಾಲ ಎ. ವಿಜಯ್ ಕುಮಾರ್, ರೀಜನ್ ಅಧ್ಯಕ್ಷ ಹುಲಿಕಲ್ ನಟರಾಜ್, ಲಯನ್ಸ್ ಚಾರಿಟೀಸ್ ಟ್ರಸ್ಟ್ ಅಧ್ಯಕ್ಷ ಕೆ.ಎಂ. ಹನುಮಂತರಾಯಪ್ಪ, ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷ ಕೆ.ಜಿ. ಗೋಪಾಲ್, ಕಾರ್ಯದರ್ಶಿ ರೇಖಾ ವೆಂಕಟೇಶ್, ಖಜಾಂಚಿ ಬಿ. ನಿಖಿಲಾ, ಸಹ ಕಾರ್ಯದರ್ಶಿ ಬಿ. ಭಾರತಿ ಮಂಜುನಾಥ್, ಸೇವಾ ಸಮಿತಿ ಅಧ್ಯಕ್ಷ ಎಂ. ಜಗದೀಶ ರೆಡ್ಡಿ, ಕಾರ್ಯಕ್ರಮ ಸಮಿತಿ ಅಧ್ಯಕ್ಷ ಎಂ.ಪಿ.ಸಿ. ವೆಂಕಟೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy